22 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 22 | ಸಂಚಿಕೆ 142 | ನವದೆಹಲಿ | ಬೆಲೆ ₹ 10 | ನವಂಬರ್ 22, 2024 ಶುಕ್ರವಾರ

## ಒಳಪುಟಗಳಲ್ಲಿ

ಕಪ್ಪು ಬಾವುಟ ಪ್ರದರ್ಶನ ಕಾನೂನುಬಾಹಿರವಲ್ಲ: ಕೇರಳ ಹೈಕೋರ್ಟ್ - ಪು.4

ಕೃಷ್ಣವೇಣಿ ಮನೆ ಮೇಲೆ ಬೆಳ್ಳಂಬೆಳಗ್ಗೆ ಲೋಕಾಯುಕ್ತ ಅಧಿಕಾರಿಗಳ ದಾಳಿ - ಪು.5

ತ್ರೈಮಾಸಿಕ ಕೆಡಿಪಿ ಸಭೆಯಲ್ಲಿ ಜಿಲ್ಲೆಯ ಜ್ವಲಂತ ಸಮಸ್ಯೆಗಳ ಪ್ರತಿಧ್ವನಿ - ಪು.6

# ಅಲ್ಪಾವಧಿ ಕೃಷಿಸಾಲದ ಮಿತಿ ಹೆಚ್ಚಳಕ್ಕೆ ನಿರ್ದೇಶಿಸಲು ಕೇಂದ್ರ ಸಚಿವರಿಗೆ ಸಿಎಂ ಮನವಿ


**ಬೆಂಗಳೂರು, ನ.21:** ಕರ್ನಾಟಕದ ರೈತರ ಹಿತದೃಷ್ಟಿಯಿಂದ, ಉತ್ತಮ ಬೆಳೆ ಬೆಳೆಯಲು ಅನುಕೂಲವಾಗುವಂತೆ 2024-25ನೇ ಸಾಲಿನಲ್ಲಿ ಅಲ್ಪಾವಧಿ ಕೃಷಿ ಸಾಲದ ಮಿತಿ ಹೆಚ್ಚಿಸುವಂತೆ ನಬಾರ್ಡ್ ಹಾಗೂ ಆರ್‌ಬಿಐಗೆ ನಿರ್ದೇಶನ ನೀಡುವಂತೆ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರನ್ನು ಭೇಟಿಯಾಗಿ ಸಿಎಂ ಸಿದ್ದರಾಮಯ್ಯ ಮನವಿ ಸಲ್ಲಿಸಿದ್ದಾರೆ.



2024-25ನೇ ಸಾಲಿನಲ್ಲಿ ಕರ್ನಾಟಕ ಸರ್ಕಾರ 35 ಲಕ್ಷ ರೈತರಿಗೆ 25 ಸಾವಿರ ಕೋಟಿ ರೂ ಅಲ್ಪಾವಧಿ ಕೃಷಿಸಾಲ ವಿತರಿಸುವ ಗುರಿ ಹೊಂದಿದೆ. 2023-24ನೇ ಹಣಕಾಸು ವರ್ಷದಲ್ಲಿ ಅಲ್ಪಾವಧಿ ಸಹಕಾರಿ ಸಾಲ ವ್ಯವಸ್ಥೆಯಡಿ ಕರ್ನಾಟಕದಲ್ಲಿ ರೂ. 22,902 ಕೋಟಿ ಅಲ್ಪಾವಧಿ ಕೃಷಿ ಸಾಲವನ್ನು ವಿತರಿಸಲಾಗಿದೆ. 2024-25ನೇ ಸಾಲಿನಲ್ಲಿ ಹಂಗಾಮಿನ ಕೃಷಿ ಚಟುವಟಿಕೆಗಳಿಗೆ ಅಲ್ಪಾವಧಿ ಸಹಕಾರಿ ಸಾಲ ವ್ಯವಸ್ಥೆಯಡಿ 9,162 ಕೋಟಿ ರೂ. ಕೃಷಿಸಾಲ ಮಿತಿಗೆ ಅನುಮೋದನೆ ನೀಡುವಂತೆ ಕರ್ನಾಟಕ ರಾಜ್ಯ ಸಹಕಾರಿ ಅಪೆಕ್ಸ್ ಬ್ಯಾಂಕ್ ಲಿಮಿಟೆಡ್ ನಬಾರ್ಡ್‌ಗೆ ಪ್ರಸ್ತಾವನೆ ಸಲ್ಲಿಸಿತ್ತು ಎಂದು ಮನವಿಯಲ್ಲಿ ತಿಳಿಸಿದ್ದಾರೆ. ಕಳೆದ ಐದು ವರ್ಷಗಳ ಅವಧಿಯಲ್ಲಿ ನಬಾರ್ಡ್ ಕರ್ನಾಟಕ ರಾಜ್ಯಕ್ಕೆ ಅನುಮೋದಿಸಿರುವ ಕೃಷಿ ಸಾಲದ ಮಿತಿಯ ವಿವರವನ್ನು ಮನವಿ ಪತ್ರದಲ್ಲಿ ಉಲ್ಲೇಖಿಸಲಾಗಿದೆ. ಅದರಂತೆ 2019-20ರಲ್ಲಿ 4,200 ಕೋಟಿ ರೂ. ಮೊತ್ತ ಮಂಜೂರು ಮಾಡಲಾಗಿತ್ತು. ಸುಮಾರು15% ಮಿತಿ ಹೆಚ್ಚಿಸಿತ್ತು. 2020-21 ಸಾಲಿನಲ್ಲಿ 5,500 ಕೋಟಿ ರೂ. ಮಂಜೂರು ಮಾಡಲಾಗಿತ್ತು. 27% ಮಿತಿ ಹೆಚ್ಚಿಸಿತ್ತು. 2021-22 ಸಾಲಿನಲ್ಲಿ 5,483 ಕೋಟಿ ರೂ. ಸಾಲವನ್ನು ಮಂಜೂರು ಮಾಡಲಾಗಿದ್ದು, 1% ಕಡಿತವಾಗಿತ್ತು. 2022-23 ಸಾಲಿನಲ್ಲಿ 5,550 ಕೋಟಿ ರೂ. ಸಾಲದ ಮೊತ್ತ ಮಂಜೂರು ಮಾಡಿತ್ತು. 1% ಮಿತಿ ಹೆಚ್ಚಿಸಿತ್ತು. 2023-24 ಸಾಲಿನಲ್ಲಿ 5600 ಕೋಟಿ ರೂ. ಮಂಜೂರು ಮಾಡಿದ್ದು, 1% ಮಿತಿ ವೃದ್ಧಿಯಾಗಿತ್ತು. 2024-25 ಸಾಲಿನಲ್ಲಿ 2,340 ಕೋಟಿ ರೂ. ಮಂಜೂರು ಮಾಡಲಾಗಿದೆ. ಆ ಮೂಲಕ 58% ಕಡಿತ ಮಾಡಿದೆ ಎಂದು ವಿವರಿಸಿದ್ದಾರೆ. 2023-24ನೇ ಸಾಲಿನಲ್ಲಿ ನಬಾರ್ಡ್ ಕೃಷಿ ಚಟುವಟಿಕೆಗಳಿಗೆ ರೂ.5600 ಕೋಟಿ ಮೊತ್ತದ ರಿಯಾಯಿತಿ ದರದ ಸಾಲದ ಮಿತಿಗೆ ಅನುಮೋದನೆ ನೀಡಿತ್ತು. 2024-25ನೇ ಸಾಲಿನಲ್ಲಿ ರೂ.9,162 ಕೋಟಿಗೆ ಪ್ರಸ್ತಾವನೆಯನ್ನು ಸಲ್ಲಿಸಿದ್ದರೂ, ನಬಾರ್ಡ್ ಕೃಷಿ ಚಟುವಟಿಕೆಗಳಿಗೆ ಕೇವಲ ರೂ.2340 ಕೋಟಿ ರಿಯಾಯಿತಿ ದರದ ಸಾಲವನ್ನು ಅನುಮೋದಿಸಿದೆ. ಇದು ಕಳೆದ ವರ್ಷಕ್ಕಿಂತ ಶೇ.58ರಷ್ಟು ಕಡಿಮೆಯಾಗಿದೆ. ಆರ್‌ಬಿಐ ಸಾಮಾನ್ಯ ಸಾಲದ ಮಿತಿ (ಎಲ್‌ಒಸಿ)ಯನ್ನು ಕಡಿಮೆಗೊಳಿಸಿರುವುದೇ ಪ್ರಸ್ತುತ ವರ್ಷ ರಿಯಾಯಿತಿ ದರದ ಸಾಲದ ಮಿತಿಯನ್ನು ಕಡಿಮೆಗೊಳಿಸಲು ಕಾರಣ ಎಂದು ನಬಾರ್ಡ್ ಮಾಹಿತಿ ನೀಡಿದೆ ಎಂದಿದ್ದಾರೆ.

ಕರ್ನಾಟಕದಲ್ಲಿ ಈ ಬಾರಿ ಉತ್ತಮ ಮಾನ್ಸೂನ್ ಮಳೆಯಾಗಿದ್ದು, ರೈತರ ಕೃಷಿ ಸಹಕಾರಿ ಚಟುವಟಿಕೆಗಳಿಗಾಗಿ ರಿಯಾಯಿತಿ ದರದ ಸಾಲದ ಮಿತಿ ಹೆಚ್ಚಿಸುವಂತೆ ಬೇಡಿಕೆ ಇಟ್ಟಿದ್ದಾರೆ. ಆದರೆ ಕರ್ನಾಟಕಕ್ಕೆ 2024-25ನೇ ಸಾಲಿಗೆ ರಿಯಾಯಿತಿ ದರದ ಸಾಲದ ಮಿತಿಯನ್ನು ಕಡಿತಗೊಳಿಸಿರುವುದು ಅಲ್ಪಾವಧಿ ಕೃಷಿ ಸಹಕಾರಿ ಸಾಲದ ವಿತರಣೆ ಮೇಲೆ ಗಂಭೀರ ಪರಿಣಾಮ ಬೀರಲಿದೆ ಎಂದು ತಿಳಿಸಿದ್ದಾರೆ.

# ಪ್ರಧಾನಿ ಮೋದಿಗೆ ಗಯಾನಾದ ಅತ್ಯುನ್ನತ ನಾಗರಿಕ ಗೌರವ ಪ್ರಶಸ್ತಿ



**ಜಾರ್ಜ್‌ಟೌನ್, ನ.21:** ಗಯಾನಾ ಪ್ರವಾಸದಲ್ಲಿರುವ ಪ್ರಧಾನಿ ನರೇಂದ್ರ ಮೋದಿಗೆ ಗಯಾನಾ ಸರ್ಕಾರ ಅತ್ಯುನ್ನತ ಗೌರವವಾದ 'ದಿ ಆರ್ಡರ್ ಆಫ್ ಎಕ್ಸಲೆನ್ಸ್ ಪ್ರಶಸ್ತಿ ನೀಡಿ ಗೌರವಿಸಿದೆ. ಮೂರು ರಾಷ್ಟ್ರಗಳ ಪ್ರವಾಸದಲ್ಲಿರುವ ಮೋದಿ ಬುಧವಾರ ಗಯಾನಾಕ್ಕೆ ಭೇಟಿ ನೀಡಿದ್ದು, 56 ವರ್ಷಗಳ ಬಳಿಕ ಭಾರತೀಯ ಪ್ರಧಾನಿಯೊಬ್ಬರು ನೀಡಿದ ಮೊದಲ ಭೇಟಿ ಇದಾಗಿದೆ. ಗುರುವಾರ ಜಾರ್ಜ್‌ಟೌನ್‌ನ ಸ್ಟೇಟ್ ಹೌಸ್‌ನಲ್ಲಿ ನಡೆಯುತ್ತಿರುವ ಭಾರತ-ಕೆರಕಮ್ (ಕೆರಿಬಿಯನ್ ಸಮುದಾಯ) ಶೃಂಗಸಭೆಯಲ್ಲಿ ಗಯಾನಾದ ಅಧ್ಯಕ್ಷ ಮೊಹಮದ್ ಇರ್ಫಾನ್ ಅಲಿ ಅವರು ಪ್ರಧಾನಿ ಮೋದಿಗೆ ಅತ್ಯುನ್ನತ ನಾಗರಿಕ ಪ್ರಶಸ್ತಿಯನ್ನು ನೀಡಿ ಗೌರವಿಸಿದರು. ಗಯಾನಾದ ಅತ್ಯುನ್ನತ ರಾಷ್ಟ್ರೀಯ ಪ್ರಶಸ್ತಿಯನ್ನು ಪಡೆದವರ ಪೈಕಿ ಪ್ರಧಾನಿ ಮೋದಿ ನಾಲ್ಕನೇ ವಿದೇಶಿ ನಾಯಕರಾಗಿದ್ದಾರೆ. ಪ್ರಶಸ್ತಿ ಸ್ವೀಕರಿಸಿ ಮಾತನಾಡಿದ ಮೋದಿ, ಗಯಾನಾಕ್ಕೆ ನೀಡಿದ ಈ ಭೇಟಿಯು ಭಾರತದ ಜೊತೆಗಿನ ಸಂಬಂಧವನ್ನು ಬಲಪಡಿಸುತ್ತದೆ. ಅಧ್ಯಕ್ಷ ಇರ್ಫಾನ್ ಅಲಿ ಅವರಿಗೆ ಧನ್ಯವಾದಗಳನ್ನು ಅರ್ಪಿಸಿದ್ದು, ಈ ಪ್ರಶಸ್ತಿ 140 ಕೋಟಿ ಭಾರತೀಯರಿಗೆ ಸಲ್ಲುವ ಗೌರವವಾಗಿದೆ ಎಂದು ತಿಳಿಸಿದರು. ಅಧ್ಯಕ್ಷ ಇರ್ಫಾನ್ ಅಲಿ ಅವರೊಂದಿಗಿನ ಈ ಸಂಬಂಧ ಭಾರತ ಹಾಗೂ ಗಯಾನಾ ದೇಶವನ್ನು ಎತ್ತರಕ್ಕೆ ಕೊಂಡೊಯ್ಯಲು ಸಹಕಾರಿಯಾಗುತ್ತದೆ. ಭಾರತವು ಗಯಾನಾದೊಂದಿಗೆ ಹೆಗಲಿಗೆ ಹೆಗಲು ಕೊಟ್ಟು ಕೆಲಸ ಮಾಡಲು ಸಿದ್ಧವಾಗಿದೆ. ಅಸಂಖ್ಯಾತ ಜಲಪಾತಗಳು ಮತ್ತು ಸರೋವರಗಳಿಂದ ಕೂಡಿರುವ ಗಯಾನಾವನ್ನು 'ದಿ ಲ್ಯಾಂಡ್ ಆಫ್ ಮೆನಿ ವಾಟರ್ಸ್ ಎಂದು ಕರೆಯಲಾಗುತ್ತದೆ. ಗಯಾನಾ ನದಿಗಳು ಇಲ್ಲಿನ ಜನರ ಸಂಸ್ಕೃತಿಯ ಪ್ರತಿಬಿಂಬವಾಗಿದೆ. ಹಾಗೆಯೇ ಭಾರತದ ಗಂಗಾ, ಯಮುನಾ ಮತ್ತು ಬ್ರಹ್ಮಪುತ್ರ ನದಿಗಳು ನಮ್ಮ ಪ್ರಾಚೀನ ನಾಗರಿಕತೆಯ ಜನ್ಮಸ್ಥಳವಾಗಿದೆ. ಇದು ಭಾರತ ಮತ್ತು ಗಯಾನಾ ನಡುವೆ ಸಾಮ್ಯತೆಗಳ ಅನೇಕ ಉದಾಹರಣೆಗಳಿವೆ ಎಂದು ತಿಳಿಸಿದರು. ಇತ್ತೀಚಿಗಷ್ಟೇ ಪ್ರಧಾನಿ ಮೋದಿಗೆ ನೈಜೀರಿಯಾ ದೇಶ ತನ್ನ ಅತ್ಯುನ್ನತ ದಿ ಗ್ರ್ಯಾಂಡ್ ಕಮಾಂಡರ್ ಆಫ್ ದಿ ಆರ್ಡರ್ ಆಫ್ ದಿ ನೈಜರ್ ಪ್ರಶಸ್ತಿಯನ್ನು ನೀಡಿ ಗೌರವಿಸಿತ್ತು. ಇದೀಗ ಗಯಾನಾ ಸರ್ಕಾರ ಪ್ರಶಸ್ತಿಯನ್ನು ನೀಡಿದ್ದು, ದೇಶವೊಂದು ನೀಡುತ್ತಿರುವ 18ನೇ ಅಂತಾರಾಷ್ಟ್ರೀಯ ಪ್ರಶಸ್ತಿ ಇದಾಗಿದೆ.

# ಹಾಲು ಉತ್ಪಾದನೆಯಲ್ಲಿ ಕರ್ನಾಟಕ 2ನೇ ಸ್ಥಾನದಲ್ಲಿ: ಮುಖ್ಯಮಂತ್ರಿ ಸಿದ್ದರಾಮಯ್ಯ



ನವದೆಹಲಿ, ನವೆಂಬರ್ 11: ದೇಶದ ಹಾಲು ಉತ್ಪಾದನೆಯಲ್ಲಿ ಗುಜರಾತ್ ಮೊದಲ ಸ್ಥಾನದಲ್ಲಿದ್ದರೆ ಕರ್ನಾಟಕ ಎರಡನೇ ಸ್ಥಾನದಲ್ಲಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು. ಅವರು ಇಂದು ರಾಜಧಾನಿ ನವದೆಹಲಿಯಲ್ಲಿ ಕರ್ನಾಟಕ ಹಾಲು ಉತ್ಪಾದಕರ ಮಹಾಮಂಡಲ ಹಾಗೂ ಮಂಡ್ಯ ಜಿಲ್ಲಾ ಸಹಕಾರ ಹಾಲು ಒಕ್ಕೂಟದ ವತಿಯಿಂದ ನಂದಿನಿ ವಿವಿಧ ಶ್ರೇಣಿಯ ಹಾಲು ಬಿಡುಗಡೆ ಮಾಡಿ ಮಾತನಾಡಿದರು ದೆಹಲಿ ನಗರದಲ್ಲಿ ಕೆ.ಎಂ.ಎಫ್ ಮತ್ತು ಮಂಡ್ಯ ಹಾಲು ಒಕ್ಕೂಟ ಸೇರಿ ವಿವಿಧ ಶ್ರೇಣಿಯ ಹಾಲನ್ನು ಮಾರುಕಟ್ಟೆಗೆ ಬಿಡುಗಡೆ ಮಾಡಲಾಗಿದೆ.

ಇಡೀ ದೇಶದಲ್ಲಿ ರೈತರ ಉಪಕಸುಬು ಪಶುಸಂಗೋಪನೆ. ಗುಜರಾತ್‌ನಲ್ಲಿ ಕುರಿಯನ್ ಅವರು ಹಾಲು ಉತ್ಪಾದಕರ ಸಂಘವನ್ನು ಪ್ರಾರಂಭ ಮಾಡಿದರು. ಹಿಂದೆ ಪಶುಸಂಗೋಪನಾ ಸಚಿವನಾಗಿದ್ದು, ಒಂದು ವರ್ಷ ಕಾಲ ಕರ್ನಾಟಕ ಹಾಲು ಮಹಾಮಂಡಲದ ಅಧ್ಯಕ್ಷನೂ ಆಗಿದ್ದೆ ಎಂದು ಸ್ಮರಿಸಿದ ಮುಖ್ಯಮಂತ್ರಿಗಳು ಪಶುಸಂಗೋಪನಾ ಸಚಿವನಾಗಿದ್ದಾಗಲೇ ಹಾಲು ಉತ್ಪಾದಕರಿಗೆ ಶೋಷಣೆಯಾಗುತ್ತಿದ್ದುದ್ದನ್ನು ಮನಗಂಡು ಶಾಶ್ವತ ಮಾರುಕಟ್ಟೆ ಕಲ್ಪಿಸಲು ಹಾಲು ಉತ್ಪಾದಕರ ಸಂಘಗಳನ್ನು ರಚಿಸಲಾಯಿತು ಎಂದರು.


ಹಾಲು ಉತ್ಪಾದಕರಿಗೆ ಪ್ರೋತ್ಸಾಹಧನ : ರಾಜ್ಯದಲ್ಲಿ ಪ್ರತಿದಿನ 92 ರಿಂದ 93 ಲಕ್ಷ ಲೀ. ಹಾಲು ಉತ್ಪಾದನೆಯಾಗುತ್ತಿದೆ. ರೈತರಿಂದ ಲೀ. ಗೆ 32 ರೂ. ಗಳಿಗೆ ಹಾಲು ಖರೀದಿಸಲಾಗುತ್ತಿದ್ದು, ರಾಜ್ಯ ಸರ್ಕಾರ ಕ್ಷೀರಧಾರೆ ಯೋಜನೆಯಡಿ ಹಾಲು ಉತ್ಪಾದಕರಿಗೆ ಪ್ರತಿ ಲೀಟರಿಗೆ 5 ರೂ.ಗಳ ಪ್ರೋತ್ಸಾಹಧನವನ್ನು ನೀಡುತ್ತಿದೆ. ಮಾಜಿ ಮುಖ್ಯಮಂತ್ರಿ ಯಡಿಯೂರಪ್ಪ ಅವರ ಕಾಲದಲ್ಲಿ 2 ರೂ. ಇದ್ದ ಪ್ರೋತ್ಸಾಹಧನ, ನಂತರ 3 ರೂ. ಆಯಿತು. ನಾನು ಮುಖ್ಯಮಂತ್ರಿಯಾದ ನಂತರ ಇದನ್ನು 5 ರೂ.ಗಳಿಗೆ ಹೆಚ್ಚಿಸಲು ಘೋಷಣೆ ಮಾಡಲಾಯಿತು.

ಪ್ರೋತ್ಸಾಹಧನಕ್ಕಾಗಿ ಪ್ರತಿದಿನ 5 ಕೋಟಿ ರೂ. ಗಳನ್ನು ಸರ್ಕಾರ ವೆಚ್ಚ ಮಾಡುತ್ತಿದೆ ಎಂದರು. ರಾಜ್ಯದಲ್ಲಿ ಒಟ್ಟು 16 ಮಿಲ್ಕ್ ಯೂನಿಯನ್‌ಗಳಿವೆ. ರಾಜ್ಯದಲ್ಲಿ ಅಂದಾಜು 1 ಕೋಟಿ ಲೀಟರ್ ಹಾಲು ಉತ್ಪಾದನೆಯಾಗುತ್ತಿದ್ದು, ಆಂಧ್ರಪ್ರದೇಶ, ಮಹಾರಾಷ್ಟ್ರಕ್ಕೆ ನಿತ್ಯ ತಲಾ 2.5 ಲಕ್ಷ ಲೀಟರ್ ಹಾಲು ಪೂರೈಕೆಯಾಗುತ್ತಿದೆ. ಇದೀಗ ಆರಂಭಿಕ ಹಂತದಲ್ಲಿ 2.5 ಲಕ್ಷ ಲೀಟರ್ ಹಾಲು ನವದೆಹಲಿಗೆ ಪೂರೈಸುವ ಯೋಜನೆ ರೂಪಿಸಲಾಗಿದೆ. ಇನ್ನು ಆರು ತಿಂಗಳೊಳಗೆ 5 ಲಕ್ಷ ಲೀಟರ್‌ಗೆ ಏರಿಸುವ ಗುರಿ ನಮ್ಮದಾಗಿದೆ. ಹಾಲಿನ ಉತ್ಪಾದನೆಗಳಿಗೆ ಮಾರುಕಟ್ಟೆ ಬಹಳ ಮುಖ್ಯ ಎಂದರು. ಪಶುಸಂಗೋಪನೆ ಮತ್ತು ರೇಷ್ಮೆ ಸಚಿವ ವೆಂಕಟೇಶ್, ಕೃಷಿ ಸಚಿವ ಚೆಲುವರಾಯಸ್ವಾಮಿ, ನಗರಾಭಿವೃದ್ಧಿ ಸಚಿವ ಬೈರತಿ ಸುರೇಶ್, ಕರ್ನಾಟಕ ಹಾಲು ಮಹಾಮಂಡಲದ ಅಧ್ಯಕ್ಷ ಭೀಮಣ್ಣ ನಾಯಕ್, ರಾಜ್ಯ ಸಭಾ ಸದಸ್ಯ ಈರಣ್ಣ ಕರಾಡಿ, ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ಗೋವಿಂದರಾಜು, ಮುಖ್ಯಮಂತ್ರಿಗಳ ಕಾನೂನು ಸಲಹೆಗಾರ ಪೊನ್ನಣ್ಣ, ಮಂಡ್ಯ ಹಾಲು ಒಕ್ಕೂಟದ ಅಧ್ಯಕ್ಷ ತಿಮ್ಮೇಗೌಡ, ಮೊದಲಾದವರು ಉಪಸ್ಥಿತರಿದ್ದರು.

# ಗುತ್ತಿಗೆ ಪಡೆಯಲು 2,200 ಕೋಟಿ ಲಂಚ

## ಅದಾನಿ ವಿರುದ್ಧ ಅಮೆರಿಕ ಕೋರ್ಟ್ ಬಂಧನ ವಾರಂಟ್

**ವಾಷಿಂಗ್ಟನ್, ನ.21:** ಕಳೆದ ವರ್ಷ ಭಾರತದಲ್ಲಿ 20,000 ಕೋಟಿ ರೂ. ಮೌಲ್ಯದ ಎಫ್‌ಪಿಒಗೆ ಅದಾನಿ ಕಂಪನಿ ಚಾಲನೆ ನೀಡುವ ಸಂದರ್ಭದಲ್ಲಿ ಹಿಂಡೆನ್‌ಬರ್ಗ್ ಸಂಶೋಧನಾ ವರದಿ ಪ್ರಕಟಗೊಂಡು ಶಾಕ್ ನೀಡಿತ್ತು. ಈಗ ಅಮೆರಿಕದಲ್ಲಿ ಅದಾನಿ ಗ್ರೀನ್ ಎನರ್ಜಿಗಾಗಿ 6,000 ದಶಲಕ್ಷ ಅಮೆರಿಕನ್ ಡಾಲರ್ ಬಾಂಡ್ ಬಿಡುಗಡೆ ಮಾಡಿ ಹೂಡಿಕೆ ಸಂಗ್ರಹಿಸಲು ಮುಂದಾಗಿದ್ದ ಗೌತಮ್ ಅದಾನಿ ಅವರಿಗೆ ಅಮೆರಿಕ ನ್ಯಾಯಾಂಗ ಇಲಾಖೆ ಶಾಕ್ ನೀಡಿದೆ.



ಗೌತಮ್ ಅದಾನಿ ಮತ್ತು ಅವರ ಸೋದರಳಿಯ ಸಾಗರ್ ಅದಾನಿ ಸೇರಿದಂತೆ ಇತರ ಏಳು ಅಧಿಕಾರಿಗಳು ಸೌರಶಕ್ತಿಯ ಒಪ್ಪಂದಗಳನ್ನು ಪಡೆಯಲು ಭಾರತೀಯ ಸರ್ಕಾರಿ ಅಧಿಕಾರಿಗಳಿಗೆ 265 ಮಿಲಿಯನ್ ಡಾಲರ್‌ಗೂ (ಅಂದಾಜು 2238 ಕೋಟಿ ರೂ.) ಹೆಚ್ಚು ಲಂಚದ ಭರವಸೆ ನೀಡಿದ್ದಾರೆ ಎಂದು ಆರೋಪಿಸಿದೆ. ನ್ಯೂಯಾರ್ಕ್ ಕೋರ್ಟ್ ಗೌತಮ್ ಅದಾನಿ ಮತ್ತು ಸಾಗರ್ ಅದಾನಿಗೆ ಬಂಧನ ವಾರಂಟ್ ಹೊರಡಿಸಿದೆ. ಆ ವಾರೆಂಟ್‌ಗಳನ್ನು ವಿದೇಶಿ ಕಾನೂನು ಜಾರಿ ಸಂಸ್ಥೆಗಳಿಗೆ ಹಸ್ತಾಂತರಿಸಲು ಪ್ರಾಸಿಕ್ಯೂಟರ್‌ಗಳು ಯೋಜಿಸಿದ್ದಾರೆ ಎಂದು ವರದಿಯಾಗಿದೆ. ಗೌತಮ್ ಅದಾನಿ, ಸಿರಿಲ್ ಕೆಬನೆಸ್, ಸಾಗರ್ ಅದಾನಿ, ವಿನೀತ್ ಜೈನ್, ರಂಜಿತ್ ಗುಪ್ತ, ಸೌರಭ್ ಅಗರ್ವಾಲ್, ದೀಪಕ್ ಮಲ್ಹೋತ್ರಾ, ರೂಪೇಶ್ ಅಗರ್ವಾಲ್ ಅವರ ವಿರುದ್ಧ ವಂಚನೆ ಪಿತೂರಿ ಆರೋಪ ಮಾಡಲಾಗಿದೆ.

**ಆರೋಪ ಏನು:** ಅಧಿಕಾರಿಗಳಿಗೆ ಲಂಚ ನೀಡಿ ಹೂಡಿಕೆದಾರರನ್ನು ವಂಚಿಸಿದ್ದಾರೆ. ಸುಳ್ಳು ಮತ್ತು ತಪ್ಪುದಾರಿಗೆಳೆಯುವ ಹೇಳಿಕೆಗಳ ಮೂಲಕ ಅಮೆರಿಕದ ಹೂಡಿಕೆದಾರರು ಮತ್ತು ಜಾಗತಿಕ ಹಣಕಾಸು ಸಂಸ್ಥೆಗಳಿಂದ ಹಣವನ್ನು ಪಡೆದುಕೊಳ್ಳಲು ಬಹು ಶತಕೋಟಿ ಡಾಲರ್ ಯೋಜನೆಯಲ್ಲಿ ಅವರು ತೊಡಗಿಸಿಕೊಂಡಿದ್ದಾರೆ.

ಅದಾನಿ ಗ್ರೀನ್‌ಎನರ್ಜಿ ಮತ್ತು ಅಜುರೆ ಪವರ್ ಸಂಸ್ಥೆಗಳು ಭಾರತದಲ್ಲಿ ಮಾರುಕಟ್ಟೆ ಬೆಲೆಗಿಂತ ಹೆಚ್ಚಿನ ದರದಲ್ಲಿ ಸೌರಶಕ್ತಿ ಗುತ್ತಿಗೆಗಳನ್ನು ಪಡೆಯಲು ಭಾರತೀಯ ಅಧಿಕಾರಿಗಳಿಗೆ 265 ದಶಲಕ್ಷ ಡಾಲರ್‌ಗೂ ಅಧಿಕ ಮೊತ್ತದಷ್ಟು ಲಂಚ ನೀಡಿದೆ. ಮುಂದಿನ ಎರಡು ದಶಕಗಳಲ್ಲಿ 2 ಶತಕೋಟಿ ಲಾಭವನ್ನು ಗಳಿಸಲು ಲಂಚ ನೀಡಲಾಗಿದೆ.

ಅದಾನಿ ಗ್ರೀನ್ ಎನರ್ಜಿಗಾಗಿ 3 ಶತಕೋಟಿ ಡಾಲರ್ ಸಾಲ ಮತ್ತು ಬಾಂಡ್‌ಗಳನ್ನು ಪಡೆಯಲು ಅದಾನಿ ಮತ್ತು ಅವರ ಸೋದರಳಿಯ ಸಾಗರ್ ಅದಾನಿ ಮತ್ತು ಕಾರ್ಯನಿರ್ವಾಹಕ ವಿನೀತ್ ಜೈನ್ ಹೂಡಿಕೆದಾರರರಿಗೆ ಹಲವಾರು ವಿಷಯಗಳನ್ನು ಮರೆಮಾಡಿ ವಂಚಿಸಿದ್ದಾರೆ.


ಸೌರಶಕ್ತಿ ಯೋಜನೆಗಾಗಿ 2021ರ ಜುಲೈ ಮತ್ತು 2022ರ ಫೆಬ್ರವರಿ ಸಮಯದಲ್ಲಿ ಆಂಧ್ರಪ್ರದೇಶದಲ್ಲಿ ಅಧಿಕಾರಿಗಳಿಗೆ 1,750 ಕೋಟಿ ರೂ. (228 ದಶಲಕ್ಷ ಡಾಲರ್) ನೀಡಿದೆ. ಛತ್ತೀಸ್‌ಗಢ, ಒಡಿಶಾ, ತಮಿಳುನಾಡು ಮತ್ತು ಜಮ್ಮು ಮತ್ತು ಕಾಶ್ಮೀರದ ರಾಜ್ಯ ವಿದ್ಯುತ್ ಕಂಪನಿಗಳಿಗೆ ಲಂಚವನ್ನು ನೀಡಿದೆ ಎಂದು ಆರೋಪಿಸಿದೆ. ಈ ಆರೋಪಗಳು ವಿದೇಶಿ ಭ್ರಷ್ಟಚಾರ ಕಾಯ್ದೆಯ ಅಡಿಯಲ್ಲಿ ಬರುತ್ತದೆ ಎಂದು ಹೇಳಿದೆ.

# ಅಮೆರಿಕ ವಾರಂಟ್: ಅದಾನಿಯನ್ನು ಕೂಡಲೇ ಬಂಧಿಸಿ– ರಾಹುಲ್

**ನವದೆಹಲಿ, ನ.21:** ಪ್ರಧಾನಿ ಮೋದಿ ಅವರ ಆಪ್ತ ಉದ್ಯಮಿ ಅದಾನಿ ವಿರುದ್ಧ ಅಮೆರಿಕದಲ್ಲಿ ಲಂಚ ಮತ್ತು ವಂಚನೆ ಆರೋಪ ಹೊರಿಸಲಾಗಿರುವ ಹಿನ್ನಲೆಯಲ್ಲಿ ಪ್ರತಿಕ್ರಿಯಿಸಿರುವ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರು, ಕೈಗಾರಿಕೋದ್ಯಮಿ ಗೌತಮ್ ಅದಾನಿಯನ್ನು ತಕ್ಷಣವೇ ಬಂಧಿಸಬೇಕು ಎಂದು ಗುರುವಾರ ಕೇಂದ್ರ ಸರ್ಕಾರಕ್ಕೆ ಒತ್ತಾಯಿಸಿದ್ದಾರೆ. ಭಾರತೀಯ ಅಧಿಕಾರಿಗಳಿಗೆ 250 ಮಿಲಿಯನ್ ಡಾಲರ್ ಲಂಚ ನೀಡಿದ ಆರೋಪದ ಮೇಲೆ ಅಮೆರಿಕಾದ ಪ್ರಾಸಿಕ್ಯೂಟರ್ಗಳು ಅದಾನಿ ಮತ್ತು ಸಹಚರರ ಮೇಲೆ ಆರೋಪ ಹೊರಿಸಿದ ನಂತರ ರಾಹುಲ್ ಗಾಂಧಿ ಅವರು ದೆಹಲಿಯಲ್ಲಿ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದ್ದಾರೆ.

ಉದ್ಯಮಿ ಅದಾನಿ ಭಾರತೀಯ ಮತ್ತು ಅಮೇರಿಕನ್ ಕಾನೂನುಗಳನ್ನು ಉಲ್ಲಂಘಿಸಿದ್ದಾರೆ ಎಂಬುದು ಈಗ ಅಮೆರಿಕಾದಲ್ಲಿ ಸ್ಪಷ್ಟವಾಗಿದೆ ಮತ್ತು ದೃಢಪಟ್ಟಿದೆ ಎಂದು ರಾಹುಲ್ ಗಾಂಧಿ ಹೇಳಿದ್ದಾರೆ. ಪ್ರಧಾನಿ ನರೇಂದ್ರ ಮೋದಿಯವರ ಏಕ್ ಹೈ ತೋ ಸೇಫ್ ಹೇ ಘೋಷಣೆಗೆ ವ್ಯಂಗ್ಯವಾಡಿದ ಅವರು, ಪ್ರಧಾನಿ ಮತ್ತು ಅದಾನಿ ಒಟ್ಟಿಗೆ ಇರುವವರೆಗೂ ಅವರು ಭಾರತದಲ್ಲಿ ಸುರಕ್ಷಿತವಾಗಿರುತ್ತಾರೆ ಎಂದು ಹೇಳಿದ್ದಾರೆ. ತಮ್ಮ ಮೇಲಿನ ಆರೋಪದ ಬಗ್ಗೆ ಅದಾನಿ ಸಮೂಹ ಇನ್ನೂ ಯಾವುದೇ ಪ್ರತಿಕ್ರಿಯೆ ನೀಡಿಲ್ಲ.

ಅದಾನಿಯನ್ನು ತಕ್ಷಣವೇ ಬಂಧಿಸಿ ವಿಚಾರಣೆಗೊಳಪಡಿಸಬೇಕು ಮತ್ತು ಅವರ ರಕ್ಷಕರಾದ ಮತ್ತು ಸೆಬಿ ಅಧ್ಯಕ್ಷೆ ಮಾಧಬಿ ಪುರಿ ಬುಚ್ ಅವರನ್ನು ಸ್ಥಾನದಿಂದ ಕಿತ್ತುಹಾಕಿ, ಅವರನ್ನೂ ತನಿಖೆಗೆ ಒಳಪಡಿಸಬೇಕು ಎಂದು ಅವರು ಹೇಳಿದ್ದಾರೆ. ಸೋಮವಾರದಿಂದ ಪ್ರಾರಂಭವಾಗುವ ಸಂಸತ್ತಿನ ಚಳಿಗಾಲದ ಅಧಿವೇಶನದಲ್ಲಿ ಈ ವಿಷಯವನ್ನು ಪ್ರಸ್ತಾಪಿಸುವುದಾಗಿ ಅವರು ಹೇಳಿದ್ದಾರೆ. ಜಂಟಿ ಸಂಸದೀಯ ಸಮಿತಿಯ ತನಿಖೆಗೆ ಕೂಡಾ ಪ್ರತಿಪಕ್ಷಗಳು ಬೇಡಿಕೆ ಸಲ್ಲಿಸುವುದಾಗಿ ಅವರು ಹೇಳಿದ್ದಾರೆ. ಮೋದಿ ಸರಕಾರವು ಅದಾನಿಯನ್ನು ರಕ್ಷಿಸುತ್ತಿದೆ. ಆದ್ದರಿಂದ ಭಾರತದಲ್ಲಿ ಅದಾನಿಯನ್ನು ಬಂಧಿಸುವುದಿಲ್ಲ ಅಥವಾ ತನಿಖೆ ಮಾಡುವುದಿಲ್ಲ ಎಂದು ನನಗೆ ಖಾತರಿಯಿದೆ ಎಂದು ಗಾಂಧಿ ಆರೋಪಿಸಿದ್ದಾರೆ.



ಸೌರ ವಿದ್ಯುತ್ ಗುತ್ತಿಗೆಗೆ ಸಂಬಂಧಿಸಿದ ಶತಕೋಟಿ ಡಾಲರ್ ಲಂಚ ಹಾಗೂ ವಂಚನೆ ಪ್ರಕರಣದಲ್ಲಿ ಅದಾನಿ ಗ್ರೀನ್ ಎನರ್ಜಿ ಕಂಪನಿಯ ಅಧ್ಯಕ್ಷ ಗೌತಮ್ ಅದಾನಿ ಹಾಗೂ ಇತರರ ವಿರುದ್ಧ ಅಮೆರಿಕದ ಪ್ರಾಸಿಕ್ಯೂಟರ್ ಕ್ರಿಮಿನಲ್ ಆರೋಪಪಟ್ಟಿ ಸಲ್ಲಿಸಿದ್ದಾರೆ ಎಂದು ಗುರುವಾರ ವರದಿಯಾಗಿದೆ. ಗೌತಮ್ ಅದಾನಿ, ಅವರ ಸೋದರಳಿಯ ಸಾಗರ್ ಅದಾನಿ ಸೇರಿದಂತೆ ಇತರ ಏಳು ಆರೋಪಿಗಳು 20 ವರ್ಷಗಳಲ್ಲಿ 2 ಶತಕೋಟಿ ಡಾಲರ್ ಲಾಭವನ್ನು ನಿರೀಕ್ಷಿಸುವ ಸೌರಶಕ್ತಿ ಪೂರೈಕೆ ಒಪ್ಪಂದಗಳನ್ನು ಪಡೆಯಲು ಭಾರತೀಯ ಸರ್ಕಾರಿ ಅಧಿಕಾರಿಗಳಿಗೆ ಸುಮಾರು 265 ಮಿಲಿಯನ್ ಡಾಲರ್ ಲಂಚ ನೀಡಲು ಒಪ್ಪಿದ್ದರು ಎನ್ನಲಾಗಿದೆ. ನ್ಯೂಯಾರ್ಕ್‌ನ ಪೂರ್ವ ಜಿಲ್ಲಾ ನ್ಯಾಯಾಲಯದಲ್ಲಿರುವ ಅಮೆರಿಕದ ಅಟಾರ್ನಿ ಕಚೇರಿಯ ಮಾಹಿತಿ ಪ್ರಕಾರ, ಗೌತಮ್ ಅದಾನಿ, ಸಾಗರ್ ಆರ್. ಅದಾನಿ ಹಾಗೂ ವಿನೀತ್ ಎಸ್. ಜೈನ್ ವಿರುದ್ಧ ಐದು ಅಂಶಗಳ ಕ್ರಿಮಿನಲ್ ಆರೋಪಪಟ್ಟಿ ಸಲ್ಲಿಸಲಾಗಿದೆ. ಬಂಡವಾಳ ಆಕರ್ಷಿಸಲು ಅಮೆರಿಕದ ಹೂಡಿಕೆದಾರರು ಹಾಗೂ ಜಾಗತಿಕ ಹಣಕಾಸು ಸಂಸ್ಥೆಗಳಿಗೆ ಸುಳ್ಳು ಮತ್ತು ತಪ್ಪು ಹೇಳಿಕೆ ನೀಡಿರುವ ಆರೋಪ ಇವರ ಮೇಲಿದೆ ಎಂದು ರಾಯಿಟರ್ಸ್ ವರದಿ ಮಾಡಿದೆ. ನ್ಯಾಯಾಧೀಶರು ಗೌತಮ್ ಅದಾನಿ ಮತ್ತು ಸಾಗರ್ ಅದಾನಿ ವಿರುದ್ಧ ಬಂಧನ ವಾರೆಂಟ್‌ಗಳನ್ನು ಹೊರಡಿಸಿದ್ದಾರೆ. ಆ ವಾರೆಂಟ್‌ಗಳನ್ನು ವಿದೇಶಿ ಕಾನೂನು ಜಾರಿ ಸಂಸ್ಥೆಗಳಿಗೆ ಹಸ್ತಾಂತರಿಸಲು ಪ್ರಾಸಿಕ್ಯೂಟರ್‌ಗಳು ಯೋಜಿಸಿದ್ದಾರೆ ಎಂದು ನ್ಯಾಯಾಲಯದ ದಾಖಲೆಗಳನ್ನು ಉಲ್ಲೇಖಿಸಿ ರಾಯಿಟರ್ಸ್ ತಿಳಿಸಿದೆ.

## ಅದಾನಿ ಒಪ್ಪಂದ ರದ್ದುಗೊಳಿಸಿದ ಕೆನ್ಯಾ ಸರ್ಕಾರ

ಅದಾನಿ ಗ್ರೂಪ್ ವಿರುದ್ಧ ಯುಎಸ್ ಅಧಿಕಾರಿಗಳು ಲಂಚ ಮತ್ತು ವಂಚನೆಯ ಆರೋಪಗಳನ್ನ ಮಾಡಿದ ನಂತರ ಕೆನ್ಯಾ ಸರ್ಕಾರವು ಅದಾನಿ ಗ್ರೂಪ್ರೊಂದಿಗಿನ ಬಹು ಮಿಲಿಯನ್ ಡಾಲರ್ ಒಪ್ಪಂದವನ್ನ ರದ್ದುಗೊಳಿಸುವುದಾಗಿ ಘೋಷಿಸಿದೆ ಎಂದು ಸುದ್ದಿ ಸಂಸ್ಥೆ ರಾಯಿಟರ್ಸ್ ವರದಿ ಮಾಡಿದೆ. ವಿದ್ಯುತ್ ಪ್ರಸರಣ ಮಾರ್ಗಗಳನ್ನು ನಿರ್ಮಿಸುವ 700 ಮಿಲಿಯನ್ ಡಾಲರ್ ಒಪ್ಪಂದವನ್ನು ಕೊನೆಗೊಳಿಸಲು ನಿರ್ದೇಶಿಸಿರುವುದಾಗಿ ಕೆನ್ಯಾದ ಅಧ್ಯಕ್ಷ ವಿಲಿಯಂ ರುಟೊ ಗುರುವಾರ ಈ ನಿರ್ಧಾರವನ್ನು ಬಹಿರಂಗಪಡಿಸಿದ್ದಾರೆ. ಹೆಚ್ಚುವರಿಯಾಗಿ, ಅದಾನಿ ಗ್ರೂಪ್'ನ ಪ್ರಸ್ತಾಪವನ್ನು ಒಳಗೊಂಡ ಜೊಮೊ ಕೆನ್ಯಾಟ್‌ನ ಅಂತರರಾಷ್ಟ್ರೀಯ ವಿಮಾನ ನಿಲ್ದಾಣವನ್ನು ವಿಸ್ತರಿಸುವ ಖರೀದಿ ಪ್ರಕ್ರಿಯೆಯನ್ನು ರದ್ದುಗೊಳಿಸಲು ರೂಟೊ ಆದೇಶಿಸಿದಾಗೆ ರಾಯಿಟರ್ಸ್ ವರದಿ ಮಾಡಿದೆ. ವಿದ್ಯುತ್ ಪ್ರಸರಣ ಮಾರ್ಗಗಳನ್ನ ನಿರ್ಮಿಸುವ 700 ಮಿಲಿಯನ್ ಡಾಲರ್ ಒಪ್ಪಂದವನ್ನು ಕೊನೆಗೊಳಿಸಲು ನಿರ್ದೇಶಿಸಿರುವುದಾಗಿ ಕೀನ್ಯಾದ ಅಧ್ಯಕ್ಷ ವಿಲಿಯಂ ರುಟೊ ಗುರುವಾರ ಈ ನಿರ್ಧಾರವನ್ನ ಬಹಿರಂಗಪಡಿಸಿದ್ದಾರೆ. ಹೆಚ್ಚುವರಿಯಾಗಿ, ಅದಾನಿ ಗ್ರೂಪ್'ನ ಪ್ರಸ್ತಾಪವನ್ನು ಒಳಗೊಂಡ ಜೊಮೊ ಕೆನ್ಯಟ್ಟಾ ಅಂತರರಾಷ್ಟ್ರೀಯ ವಿಮಾನ ನಿಲ್ದಾಣವನ್ನು ವಿಸ್ತರಿಸುವ ಖರೀದಿ ಪ್ರಕ್ರಿಯೆಯನ್ನು ರದ್ದುಗೊಳಿಸಲು ರೂಟೊ ಆದೇಶಿಸಿದ್ದಾರೆ. ಅದಾನಿ ಗ್ರೂಪ್ ಅಮೆರಿಕದಲ್ಲಿ ಕಾನೂನು ಸಮಸ್ಯೆಗಳನ್ನು ಎದುರಿಸುತ್ತಿರುವ ಕಾರಣ ಈ ಕ್ರಮ ಕೈಗೊಳ್ಳಲಾಗಿದೆ. ಅಮೆರಿಕ ಪ್ರಾಸಿಕ್ಯೂಟರ್‌ಗಳು ಇತ್ತೀಚೆಗೆ ಸಂಸ್ಥಾಪಕ ಗೌತಮ್ ಅದಾನಿ ಸೇರಿದಂತೆ ಅದಾನಿ ಕಾರ್ಯನಿರ್ವಾಹಕರ ವಿರುದ್ಧ 265 ಮಿಲಿಯನ್ ಡಾಲರ್ ಲಂಚ ಯೋಜನೆಯನ್ನು ಸಂಘಟಿಸಿದ ಆರೋಪದ ಮೇಲೆ ಆರೋಪ ಹೊರಿಸಿದ್ದಾರೆ. ಭಾರತೀಯ ಅಧಿಕಾರಿಗಳಿಗೆ ಲಂಚ ನೀಡಲು ಮತ್ತು ಲಾಭದಾಯಕ ಸೌರ ಶಕ್ತಿ ಒಪ್ಪಂದಗಳನ್ನು ಪಡೆಯಲು ಈ ಗುಂಪು ನ್ಯೂಯಾರ್ಕ್-ಲಿಸ್ಟೆಡ್ ಕಂಪನಿಯ ಕಾರ್ಯನಿರ್ವಾಹಕರೊಂದಿಗೆ ಪಿತೂರಿ ನಡೆಸಿದೆ ಎಂದು ಆರೋಪಿಸಲಾಗಿದೆ.

# ರಾಜ್ಯದ ರೈತರಿಗೆ ಸಾಲದ ಕೊರತೆ ಸರಿಪಡಿಸಿ: ನಿರ್ಮಲಾ ಸೀತಾರಾಮನ್‌ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಮನವಿ

**ನವದೆಹಲಿ, ನ.21 :** ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಗುರುವಾರ ನವದೆಹಲಿಯಲ್ಲಿ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರನ್ನು ಭೇಟಿಯಾಗಿ ನಬಾರ್ಡ್‌ನಿಂದ ರಾಜ್ಯದ ರೈತರಿಗೆ ಆಗಿರುವ ಸಾಲದ ಕೊರತೆಯನ್ನು ಸರಿಪಡಿಸಿ, ಆಗಿರುವ ಅನ್ಯಾಯವನ್ನು ಸರಿದೂಗಿಸುವಂತೆ ಮನವಿ ಮಾಡಿದ್ದಾರೆ. ಇದಕ್ಕೂ ಮುನ್ನ ನಬಾರ್ಡ್ ಕಳೆದ ವರ್ಷ ರಾಜ್ಯಕ್ಕೆ 5,600 ಕೋಟಿ ರೂ. ಸಾಲ ನೀಡಿತ್ತು. ಈ ವರ್ಷ 2,340 ಕೋಟಿ ರೂ.ಗೆ ಕಡಿತ ಮಾಡಿದೆ. ಈ ಬಗ್ಗೆ ಕೇಂದ್ರ ವಿತ್ತ ಸಚಿವರನ್ನು



ಭೇಟಿಮಾಡಿ ಮನವಿ ಮಾಡಲಾಗುವುದು ಎಂದು ಸಿಎಂ ಹೇಳಿದ್ದರು. ವಿತ್ತ ಸಚಿವರ ಭೇಟಿ ಕುರಿತು ಮಾಹಿತಿ ನೀಡಿರುವ ಸಿಎಂ, ನಬಾರ್ಡ್‌ನ ಕೃಷಿ ಸಾಲವನ್ನು ಶೇ.58 ಕಡಿತ ಮಾಡಿರುವುದರಿಂದ ರಾಜ್ಯದ ರೈತರಿಗೆ ಬಹುದೊಡ್ಡ ಸಂಕಷ್ಟ ಎದುರಾಗಿದೆ. ಹಾಗಾಗಿ ಈ ಸಾಲದ ಮಿತಿಯನ್ನು ಹೆಚ್ಚಿಸಿ ರೈತರ ಹಿತಕಾಯುವಂತೆ ಮನವಿ ಮಾಡಿದ್ದೇನೆ ಎಂದಿದ್ದಾರೆ. ಸಚಿವರಾದ ಬೈರತಿ ಸುರೇಶ್, ಚಲುವರಾಯಸ್ವಾಮಿ, ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ಗೋವಿಂದರಾಜು ಅವರು ಈ ಉಪಸ್ಥಿತರಿದ್ದರು



ಪ್ರಧಾನಿ ನರೇಂದ್ರ ಮೋದಿ ಅವರು ಗುರುವಾರ ಗಯಾನಾದ ಜಾರ್ಜ್‌ಟೌನ್‌ನಲ್ಲಿ ಟ್ರಿನಿಡಾಡ್ ಮತ್ತು ಟೊಬಾಗೋ ಪ್ರಧಾನಿ ಕೀತ್ ರೌಲಿ ಅವರೊಂದಿಗೆ ದ್ವಿಪಕ್ಷೀಯ ಸಭೆ ನಡೆಸಿದರು.

# ಬಿಪಿಎಲ್ ಅರ್ಹರಿಗೆ ಅನ್ಯಾಯವಾಗಲು ಬಿಡುವುದಿಲ್ಲ: ಡಿ.ಕೆ.ಶಿ

**ಬೆಂಗಳೂರು, ನ, 21;** ಯಾವುದೇ ಕಾರಣಕ್ಕೂ ಬಿಪಿಎಲ್ ಅರ್ಹರಿಗೆ ಅನ್ಯಾಯವಾಗಲು ಬಿಡುವುದಿಲ್ಲ, ಅರ್ಹರ ಕಾರ್ಡಗಳು ರದ್ದಾಗಿದ್ದರೆ ಈ ಬಗ್ಗೆ ಪಟ್ಟಿ ಕೊಡಲು ಸಂಬಂಧಪಟ್ಟ ಸಚಿವರಿಗೆ ಸೂಚನೆ ನೀಡಲಾಗಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ. ವಂಚಿತರಿಗೆ ಮರು ಅರ್ಜಿಗೆ ಅವಕಾಶ ಕಲ್ಪಿಸಿ ಕೊಡಬೇಕು ಎಂಬ ಸೂಚನೆ ನೀಡಿದ್ದೇವೆ, ರಾಜ್ಯ, ತಾಲ್ಲೂಕು, ಜಿಲ್ಲಾ ಗ್ಯಾರಂಟಿ ಅನುಷ್ಠಾನ ಸಮಿತಿಗಳು ಈ ಬಗ್ಗೆ ಪರಿಶೀಲಿಸಲಿವೆ, ಒಬ್ಬ ಬಡವನಿಗೂ ತೊಂದರೆ ಆಗಲು ಬಿಡುವುದಿಲ್ಲ.



ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸರ್ಕಾರದ ಪ್ರತಿನಿಧಿಯಾಗಿ, ಪಕ್ಷದ ಅಧ್ಯಕ್ಷನಾಗಿ ನಾನು ಭರವಸೆ ನೀಡುತ್ತೇನೆ, ಯಾರೂ ಭಯ ಪಡುವ ಅಗತ್ಯವಿಲ್ಲ, ವಿರೋಧ ಪಕ್ಷಗಳು ಸುಮ್ಮನೆ ಮಾತನಾಡುತ್ತಿವೆ ಎಂದರು. ರಾಜ್ಯದಲ್ಲಿ ನಕ್ಸಲ್ ಎನ್ಕೌಂಟರ್, ನಕ್ಸಲರ ಶರಣಾಗತಿ ಪೊಲೀಸ್ ಇಲಾಖೆ ಹಾಗೂ ಗೃಹ ಸಚಿವರಿಗೆ ಸಂಬಂಧಪಟ್ಟ ವಿಚಾರ. ನಬಾರ್ಡ್ ಸಾಲ ಕಡಿತ ವಿಚಾರ ಕುರಿತು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರನ್ನು ದೆಹಲಿಯಲ್ಲಿ ಭೇಟಿ ಮಾಡಿ ಮನವಿ ಸಲ್ಲಿಸಿದ್ದಾರೆ.

**ಮೂರೂವರೆ ವರ್ಷ ಗ್ಯಾರಂಟಿ :** ಮುಂದಿನ ಮೂರೂವರೆ ವರ್ಷ ಗ್ಯಾರಂಟಿಗಳು ಇರುತ್ತವೆ, ನಂತರವೂ ನಾವೇ ಅಧಿಕಾರಕ್ಕೆ ಬಂದು ಮತ್ತೆ ಐದು ವರ್ಷ ಮುಂದುವರೆಸುತ್ತೇವೆ ಎಂದರು. ರಾಜ್ಯ ಮೂರು ವಿಧಾನಸಭಾ ಕ್ಷೇತ್ರಗಳ ಉಪಚುನಾವಣೆಯಲ್ಲಿ ನಮ್ಮ ಪ್ರಯತ್ನ ಮಾಡಿದ್ದೇವೆ, ಫಲಾಫಲ ಭಗವಂತನದ್ದು, ಕರ್ಮಣ್ಯೇವಾಧಿಕಾರಸ್ತೇ ಮಾ ಫಲೇಶು ಕದಾಚನ.

ಎಲ್ಲಾ ಕಡೆಯೂ ದೇವರು ನಮಗೆ ಒಳ್ಳೆಯದು ಮಾಡುತ್ತಾನೆ ಎನ್ನುವ ಭರವಸೆ ಇಟ್ಟಿದ್ದೇವೆ, ರಾಜ್ಯದಲ್ಲಿ ಮೂರೂ ರಾಜಕೀಯ ಪಕ್ಷಗಳು ತಲಾ ಒಂದೊಂದು ಸ್ಥಾನ ಗೆಲ್ಲುತ್ತವೆಂಬ ಸಮೀಕ್ಷೆಗಳ ಮೇಲೆ ನಂಬಿಕೆಯಿಲ್ಲ, ಸಮೀಕ್ಷೆ ಇಟ್ಟುಕೊಂಡು ರಾಜಕೀಯ ಮಾಡಲು ಆಗುವುದಿಲ್ಲ, ಜನ ಗೌಪ್ಯ ಮತದಾನದ ಮೂಲಕ ಬೆಂಬಲ ನೀಡುತ್ತಾರೆ, ಯಾರು ಜನರ ಹೃದಯ ಹಾಗೂ ವಿಶ್ವಾಸ ಪಡೆಯುತ್ತಾರೋ ಅವರಿಗೆ ಜಯ ಎಂದರು.

# ಭಾರತ ಜಗತ್ತಿನ 6ನೇ ದೈತ್ಯ ಆರ್ಥಿಕ ಶಕ್ತಿ

**ಬೆಂಗಳೂರು,ನ. 21 :** ಭಾರತ ಜಗತ್ತಿನ 5ನೇ ಬೃಹತ್ ಆರ್ಥಿಕ ಶಕ್ತಿಯಾಗಲು ನಾಗಾಲೋಟದಲ್ಲಿ ಮುನ್ನುಗ್ಗುತ್ತಿದ್ದು, ಅದಕ್ಕೆ ಹೃದಯದಂತೆ ಉಕ್ಕು ಉದ್ಯಮ ತನ್ನ ಪಾತ್ರ ನಿರ್ವಹಿಸುತ್ತಿದೆ ಎಂದು ಕೇಂದ್ರದ ಬೃಹತ್ ಕೈಗಾರಿಕೆ ಮತ್ತು ಉಕ್ಕು ಖಾತೆ ಸಚಿವ ಹೆಚ್.ಡಿ. ಕುಮಾರಸ್ವಾಮಿ ಹೇಳಿದ್ದಾರೆ. ಬೆಂಗಳೂರಿನ ಜಿಕೆವಿಕೆಯಲ್ಲಿ ಇಂದು ಭಾರತೀಯ ಲೋಹ ಸಂಸ್ಥೆ ಹಮ್ಮಿಕೊಂಡಿದ್ದ ಲೋಹಶಾಸ್ತ್ರಜ್ಞ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಮಾತನಾಡಿದ ಅವರು, "ಪ್ರಧಾನಿ ನರೇಂದ್ರ ಮೋದಿ ಅವರ ನಾಯಕತ್ವದಲ್ಲಿ ಭಾರತವು ಈಗ ಜಗತ್ತಿನ 6ನೇ ದೈತ್ಯ ಆರ್ಥಿಕ ಶಕ್ತಿಯಾಗಿ ಹೊರಹೊಮ್ಮಿದೆ. 5ನೇ ಸ್ಥಾನಕ್ಕೆ ಏರಲು ಭಾರತ ವೇಗವಾಗಿ ಸಾಗುತ್ತಿದೆ. ಈ ಪ್ರಯತ್ನಕ್ಕೆ ಉಕ್ಕು ಉದ್ಯಮ ಬಹುದೊಡ್ಡ ಕೊಡುಗೆ ನೀಡುತ್ತಿದೆ. ಭಾರತವು $5 ಟ್ರಿಲಿಯನ್ ಆರ್ಥಿಕ ಶಕ್ತಿಯಾಗಲು ಶ್ರಮಿಸುತ್ತಿರುವಾಗ, ಆ ಹಾದಿಯಲ್ಲಿ ಉಕ್ಕು ಕ್ಷೇತ್ರ ನಿರ್ಣಾಯಕ ಪಾತ್ರ ವಹಿಸುತ್ತಿದೆ ಎಂದರು.




ಉಕ್ಕು ಕ್ಷೇತ್ರದ ಉನ್ನತಿಗಾಗಿ ಕೇಂದ್ರ ಸರ್ಕಾರ ಸದಾ ಬೆಂಬಲ ಕೊಡುತ್ತಿದೆ. ಈ ನಿಟ್ಟಿನಲ್ಲಿ ರೂಪಿಸಲಾಗಿರುವ ರಾಷ್ಟ್ರೀಯ ಉಕ್ಕಿನ ನೀತಿ ಈ ಉದ್ಯಮಕ್ಕೆ ಬಲ ನೀಡುತ್ತಿದೆ. ಸ್ಪೆಷಾಲಿಟಿ ಸ್ಟೀಲ್ ಉತ್ಪಾದನೆ, ಗ್ರೀನ್ ಸ್ಟೀಲ್ ತಯಾರಿಕೆಯಲ್ಲಿ ಮುಂಚೂಣಿಗೆ ಬರಲು ಎಲ್ಲ ರೀತಿಯ ಉಪಕ್ರಮಗಳನ್ನು ಕೈಗೊಳ್ಳಲಾಗಿದೆ. ಉತ್ಪಾದನಾ ಸಂಪರ್ಕ ಉಪಕ್ರಮ ಸೇರಿದಂತೆ ಹಲವಾರು ಪರಿಣಾಮಕಾರಿ ಕಾರ್ಯಕ್ರಮಗಳನ್ನು ಜಾರಿ ಮಾಡಲಾಗಿದೆ. ಹೀಗಾಗಿ ಭಾರತದಲ್ಲಿ ಉಕ್ಕು ಉದ್ಯಮ ಸಶಕ್ತವಾಗಿ ಹೊರಹೊಮ್ಮುತ್ತಿದೆ. ಇದು ಪ್ರಧಾನಿಗಳ ಕನಸಾಗಿದೆ ಎಂದರು. ಉಕ್ಕು ಕ್ಷೇತ್ರದಲ್ಲಿ ಸುಸ್ಥಿರ ಮತ್ತು ಚಲನಶೀಲ ಅಭಿವೃದ್ಧಿಗೆ ಕೇಂದ್ರ ಸರಕಾರ ಬದ್ಧವಾಗಿದೆ. ಅದಕ್ಕೆ ಪೂರಕವಾಗಿ ನಾವು ನಿರ್ದಿಷ್ಟ ಕಾರ್ಯಸೂಚಿಯ ಮೇರೆಗೆ ಕೆಲಸ ಮಾಡುತ್ತಿದ್ದೇವೆ. ಸಂಶೋಧನೆ ಮತ್ತು ಅಭಿವೃದ್ಧಿಗೆ ಅತಿಹೆಚ್ಚು ಪ್ರಾಮುಖ್ಯತೆ ಕೊಡುವುದರ ಜತೆಯಲ್ಲಿಯೇ, ಉಕ್ಕು ಉತ್ಪಾದನೆ ಪ್ರಕ್ರಿಯೆಯಲ್ಲಿ ಉಂಟಾಗುತ್ತಿರುವ ವಾಯುಮಾಲಿನ್ಯವನ್ನು ಶೂನ್ಯ ಮಟ್ಟಕ್ಕೆ ತರುವ ಗುರಿ ಹೊಂದಲಾಗಿದೆ. 2070ರ ವೇಳೆಗೆ ಈ ಗುರಿಯನ್ನು ಖಚಿತವಾಗಿ ಸಾಧಿಸಲಾಗುವುದು ಎಂದು ಸಚಿವರು ವಿಶ್ವಾಸ ವ್ಯಕ್ತಪಡಿಸಿದರು.

ಜಾಗತಿಕ ಪರಿಸರ ಸಮತೋಲನದ ಉದ್ದೇಶದ ಹಿನ್ನೆಲೆಯಲ್ಲಿ ಉಕ್ಕಿನ ಸುಸ್ಥಿರ ಉತ್ಪಾದನೆಗೆ ಹೈಡ್ರೋಜನ್ ಆಧಾರಿತ ಉಕ್ಕು ತಯಾರಿಕೆ ಮತ್ತು ಉಕ್ಕಿನ ಮರು ಬಳಕೆಯನ್ನು ಉತ್ತೇಜಿಸಲಾಗುತ್ತಿದೆ ಎಂದು ಅವರು ಹೇಳಿದರು. ಇದಕ್ಕೂ ಮುನ್ನ ಭಾರತೀಯ ಲೋಹ ಸಂಸ್ಥೆ ಅಧ್ಯಕ್ಷ ಸಜ್ಜನ್ ಜಿಂದಾಲ್ ಅವರು ಸಚಿವರನ್ನು ಬರಮಾಡಿಕೊಂಡು ಗೌರವಿಸಿದರು.

ಈ ಸಂದರ್ಭದಲ್ಲಿ ಉಕ್ಕು ಕ್ಷೇತ್ರದಲ್ಲಿ ಮಾಡಿರುವ ಸಾಧನೆಗಾಗಿ ಎಸ್‌ಆರ್ ಉಕ್ಕು ಸಂಸ್ಥೆ ಸಿಇಒ ಶಶಿ ಮೊಹಂತಿ ಅವರಿಗೆ ಜೀವಮಾನ ಸಾಧನೆ ಪ್ರಶಸ್ತಿ, ಡಾ.ಟಿ.ಪಿ.ಡಿ.ರಾಜನ್ ಅವರಿಗೆ ರಾಷ್ಟ್ರೀಯ ಲೋಹಶಾಸ್ತ್ರಜ್ಞ ಪ್ರಶಸ್ತಿ, ಡಾ.ಡಿ.ಸತೀಶ್ ಕುಮಾರ್ ಅವರಿಗೆ ಸಂಶೋಧನೆ ಮತ್ತು ಅಭಿವೃದ್ಧಿ ಪ್ರಶಸ್ತಿ, ಡಾ.ಸಾಯಿ ಗೌತಮ್ ಕೃಷ್ಣನ್ ಮತ್ತು ಬಿರಾಜ್ ಕುಮಾರ್ ಸಾಹು ಅವರಿಗೆ ಯುವ ಲೋಹಶಾಸ್ತ್ರಜ್ಞ ಪ್ರಶಸ್ತಿಯನ್ನು ಸಚಿವ ಕುಮಾರಸ್ವಾಮಿ ಪ್ರದಾನ ಮಾಡಿದರು. ಭಾರತೀಯ ಉಕ್ಕು ಪ್ರಾಧಿಕಾರ) ಅಧ್ಯಕ್ಷ ಅಮರೆಂದು ಪ್ರಕಾಶ್, ಭಾರತೀಯ ಲೋಹ ಸಂಸ್ಥೆ ಉಪಾಧ್ಯಕ್ಷ ಪ್ರೊ.ಬಿ.ಎಸ್. ಮೂರ್ತಿ, ಬ್ರಿಗೇಡಿಯರ್ ಅರುಣ್ ಗಂಗೂಲಿ, ಸಂಸ್ಥೆಯ ಸಂಚಾಲಕ ಡಾ. ಧೀರೇನ್ ಪಾಂಡ ಸೇರಿದಂತೆ ಅನೇಕ ಗಣ್ಯರು ಉಪಸ್ಥಿತರಿದ್ದರು.

## ಬಡವರ ರೇಷನ್ ಕಾರ್ಡ್ ಕಸಿದು ಜೀವನ ನರಕ ಮಾಡಲು ಹೊರಟಿದ್ದಾರೆ

# ಇದು ಅತ್ಯಂತ ಜನವಿರೋಧಿ ಸರ್ಕಾರ: ಬೊಮ್ಮಾಯಿ ಕಿಡಿ

**ಬೆಂಗಳೂರು, ನ. 21 :** ಅನ್ನಭಾಗ್ಯ ಎಂದು ಹೇಳಿ ಜನರ ಅನ್ನ ಕಸಿದುಕೊಳ್ಳುತ್ತಿರುವ ಸಿಎಂ ಸಿದ್ದರಾಮಯ್ಯ ಕರ್ನಾಟಕದ ಜನರ ಜೀವನ ನರಕ ಮಾಡಲು ಹೊರಟಿದ್ದಾರೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಆರೋಪಿಸಿದ್ದಾರೆ. ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಸ್ಲಮ್ ನಲ್ಲಿ ವಾಸಿಸಲು ಆಗದ ಜಾಗದಲ್ಲಿ ಏಳು ವಾಸವಾಗಿದ್ದಾರೆ. ಅಂತವರ ಬಿಪಿಎಲ್ ಕಾರ್ಡ್ ರದ್ದಾಗಿದೆ. ಅವರು ತೆರಿಗೆ ಕಟ್ಟುವವರು ಅಂತ ಹೇಳುತ್ತಾರೆ. ಅವರೆಲ್ಲ ತೆರಿಗೆ ಕಟ್ಟುತ್ತಾರಾ ಎಂದು ಪ್ರಶ್ನಿಸಿದರು. ಬಿಪಿಎಲ್ ಕಾರ್ಡ್ ರದ್ದಾದರೆ ಕೇವಲ ಅಕ್ಕಿ ಮಾತ್ರ ರದ್ದಾಗುವುದಿಲ್ಲ. ಔಷದಿ, ಆಸ್ಪತ್ರೆ



ಸೌಲಭ್ಯ ಎಲ್ಲವೂ ಸ್ಥಗಿತವಾಗುತ್ತವೆ.

ಜನರ ಕಷ್ಟ ಅವರಿಗೆ ಅರ್ಥ ಆಗುತ್ತಿಲ್ಲ. ಮುಡಾ ಅಂತ ಹೇಳಿ ಸೈಟ್ ವಾಪಸ್ ನೀಡಿದ್ದರು. ಈಗ ಬಿಪಿಎಲ್ ಕಾರ್ಡ್ ಪಡೆಯಲು ಮತ್ತೆ ಅರ್ಜಿ ಹಾಕಬೇಕಂತೆ ಇದೇನು ಮುಖ್ಯಮಂತ್ರಿಗಳೆ. ಇದು ಅತ್ಯಂತ ಜನ ವಿರೋಧಿ ಸರ್ಕಾರ. ಇದು ಯುಟರ್ನ್ ಸರ್ಕಾರ ಎಂದು ವಾಗ್ದಾಳಿ ನಡೆಸಿದರು. ಕಾರ್ಡ್ ರದ್ದು ಮಾಡಿರುವುದನ್ನು ವಿರೋಧಿಸಿದ ಮೇಲೆ ಈಗ ವಾಪಸ್ ತೆಗೆದುಕೊಳ್ಳುವ ಕೆಲಸ ಮಾಡುತ್ತಾರೆ. ರೇಷನ್ ಕಾರ್ಡ್ ರದ್ದಾದವರು ಅರ್ಜಿ ಹಾಕಿದರೆ ತಕ್ಷಣ ವಾಪಸ್ ಕೊಡಲಾಗುವುದು ಎಂದು ಹೇಳುತ್ತಾರೆ. ಅರ್ಜಿ ಹಾಕಿದ ಮೇಲೆ ಕಾರ್ಡ್ ಬರುವುದು ಯಾವಗ ಅಲ್ಲಿಯ. ತನಕ ಕಾರ್ಡ್ ರದ್ದಾಗಿರುವ ಬಡವರು ಏನು ತಿನ್ನಬೇಕು ಎಂದು ಪ್ರಶ್ನಿಸಿದರು. ಈ ಸರ್ಕಾರ ಹೀಗೆ ಮಾಡಿದರೆ ಹೆಚ್ಚು ದಿನ ಇರುವುದಿಲ್ಲ. ಕೇಂದ್ರ ಸರ್ಕಾರದ ಮಾನದಂಡದ ಪ್ರಕಾರ ಕಾರ್ಡ್ ರದ್ದು ಮಾಡಲಾಗುತ್ತಿದೆ ಎಂದು ಹೇಳುತ್ತಾರೆ.

ಕೇಂದ್ರ ಸರ್ಕಾರ 80 ಕೋಟಿ ಜನರಿಗೆ ಅನ್ನ ಕೊಡುತ್ತಿದೆ. ಬೇರೆ ರಾಜ್ಯದಲ್ಲಿ ಎಲ್ಲಿ ರೇಷನ್ ಕಾರ್ಡ್ ರದ್ದಾಗಿದೆ. ಕೇವಲ ಕರ್ನಾಟಕದಲ್ಲಿ ಮಾತ್ರ ಯಾಕೆ ರದ್ದಾಗಿದೆ. ಪ್ರಧಾನಿ ನರೇಂದ್ರ ಮೋದಿ ಅಕ್ಕಿ ಕೊಟ್ಟರು. ರಾಜ್ಯ ಸರ್ಕಾರ ಹತ್ತು ಕೆಜಿ ಕೊಡುತ್ತೇವೆ ಎಂದು ಹೇಳಿದರು. ಅದರ ಬದಲು ಹಣ ಕೊಡುತ್ತೇವೆ ಎಂದರು, ಇವರಿಗೆ ಅಕ್ಕಿಗೆ ಹಣ ಕೊಡಲು ದುಡ್ಡಿಲ್ಲ. ಅದನ್ನು ಮರೆ ಮಾಚಲು ಕಣ್ಣೊರಿಸುವ ತಂತ್ರ ಅನುಸರಿಸುತ್ತಿದ್ದಾರೆ. ಇವರು ಪಾಪದ ಕೃತ್ಯ ಮಾಡಿದ್ದಾರೆ ಎಂದು ಹೇಳಿದರು.

# ಕೇಂದ್ರ ಸರ್ಕಾರದಿಂದಲೇ ಡಿಜಿಟಲೀಕರಣದ ಹೆಸರಿನಲ್ಲಿ 5.80 ಕೋಟಿ ರೇಷನ್ ಕಾರ್ಡ್ ರದ್ದು

**ಬೆಂಗಳೂರು, ನ.21 :** ರಾಜ್ಯದಲ್ಲಿ ಅನರ್ಹರ ಬಿಪಿಎಲ್ ಪಡಿತರ ಚೀಟಿ ರದ್ದುಪಡಿಸುತ್ತಿರುವುದನ್ನು ಬಿಜೆಪಿ ನಾಯಕರು ಪ್ರಶ್ನಿಸುತ್ತಿದ್ದಾರೆ. ಕೇಂದ್ರದ ಮೋದಿ ಸರ್ಕಾರವೇ ಡಿಜಿಟಲೀಕರಣದ ಹೆಸರಿನಲ್ಲಿ 5.80 ಕೋಟಿ ರೇಷನ್ ಕಾರ್ಡ್ ರದ್ದುಪಡಿಸಿದೆ. ಬಿಜೆಪಿ ನಾಯಕರೇಕೆ ಈಗ ಗಪ್–ಚುಪ್ ಆಗಿದ್ದಾರೆ" ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್



ಅವರು ಎಕ್ಸ್ ಪೋಸ್ಟ್‌ನಲ್ಲಿ ಪ್ರಶ್ನಿಸಿದ್ದಾರೆ.ರಾಜ್ಯ ಬಿಜೆಪಿ ಇಬ್ಭಾಗವಾಗಿದೆ.

ವಿಜಯೇಂದ್ರ ಅವರನ್ನು ಅಧ್ಯಕ್ಷ ಸ್ಥಾನದಿಂದ ಕೆಳಗಿಳಿಸಲು ಯತ್ನಾಳ್ ಮತ್ತು ಅವರ ತಂಡ ಪ್ರಯತ್ನಿಸುತ್ತಿದೆ. ಈಗ ವಿನಾಃಕಾರಣ ಪಡಿತರ ಚೀಟಿ ಹೆಸರಿನಲ್ಲಿ ಗದ್ದಲ ಸೃಷ್ಟಿಸುತ್ತಿದ್ದಾರೆ. ಬಿಪಿಎಲ್ ಪಡಿತರ ಚೀಟಿಯು ನಿಜವಾದ ಬಡವರಿಗೆ ಸಿಗಬೇಕು. ಹೀಗಾಗಿಯೇ ರಾಜ್ಯ ಸರ್ಕಾರವು ಶ್ರೀಮಂತರು, ತೆರಿಗೆ ಪಾವತಿದಾರರು ಮತ್ತು ಸರ್ಕಾರಿ ಅಧಿಕಾರಿಗಳ ಬಳಿ ಇರುವ ಬಿಪಿಎಲ್ ಕಾರ್ಡುಗಳನ್ನು ರದ್ದುಪಡಿಸುತ್ತಿದೆ. ರಾಜ್ಯ ಬಿಜೆಪಿ ನಾಯಕರು ಇದರ ವಿರುದ್ಧ ಮಾತನಾಡುವುದರಲ್ಲಿ ಯಾವುದೇ ಅರ್ಥವಿಲ್ಲ ಎಂದು ಹೇಳಿದ್ದಾರೆ.

**ಕೇಂದ್ರದ ವಿರುದ್ಧ ಹೋರಾಟ ಮಾಡುವಿರಾ :** ಬಿ.ವೈ.ವಿಜಯೇಂದ್ರ, ಆರ್.ಅಶೋಕ್, ಪ್ರಲ್ಹಾದ್ಜೋಶಿ, ಶೋಭಾ ಕರಂಂದ್ಲಾಜೆ ಅವರನ್ನು ಟ್ಯಾಗ್ ಮಾಡಿರುವ ಎಂ.ಬಿ.ಪಾಟೀಲ್, ಕೇಂದ್ರದ ವಿರುದ್ಧ ಹೋರಾಟ ಮಾಡುವಿರಾ? ಎಂದು ಪ್ರಶ್ನಿಸಿದ್ದಾರೆ. ನಿಮ್ಮ ನಿಮ್ಮಲ್ಲೇ ಅಸ್ತಿತ್ವಕ್ಕಾಗಿ ಹೋರಾಡುತ್ತಿರುವ ಬಿಜೆಪಿ ನಾಯಕರೇ ಮಾನ್ಯ ಪ್ರಧಾನಿ ನರೇಂದ್ರ ಮೋದಿ ಅವರ ನಿವಾಸ ಮುಂದೆ ಧರಣಿ ಮಾಡಿ, ಬಿಪಿಎಲ್ ರದ್ದಾದ ಅರ್ಹರಿಗೆ ನ್ಯಾಯ ಕೊಡಿಸುವಿರಾ" ಎಂದು ಕುಟುಕಿದ್ದಾರೆ.

# ಆಸ್ಪತ್ರೆಗಳಲ್ಲಿ ಸೇವಾ ಶುಲ್ಕ ಪರಿಷ್ಕರಣೆ

**ಬೆಂಗಳೂರು, ನ.21 :** ಆಸ್ಪತ್ರೆಗಳಲ್ಲಿ ಸೇವಾ ಶುಲ್ಕ ಪರಿಷ್ಕರಣೆ ಒಂದು ಪ್ರಕ್ರಿಯೆಯಾಗಿದ್ದು, ಗ್ಯಾರಂಟಿಗಳಿಗೆ ತಳುಕು ಹಾಕುವುದರಲ್ಲಿ ಅರ್ಥವಿಲ್ಲ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಹೇಳಿದ್ದಾರೆ. ಈ ಕುರಿತು ಮಂಗಳೂರಿನಲ್ಲಿ ಇಂದು ಮಾಧ್ಯಮಗಳಿಗೆ ಪ್ರತಿಕ್ರಿಯಿಸಿದ ಸಚಿವರು, ಆಸ್ಪತ್ರೆಗಳಲ್ಲಿ ಸಂಗ್ರಹವಾಗುವ ಸೇವಾ ಶುಲ್ಕ ಸರ್ಕಾರಕ್ಕೆ ಸಂದಾಯ ವಾಗುವುದಿಲ್ಲ ಎಂದು ಸ್ಪಷ್ಟಪಡಿಸಿದರು.

ಶುಲ್ಕ ಹೆಚ್ಚಳ ಮಾಡುವ ಮೂಲಕ ಗ್ಯಾರಂಟಿಗಳಿಗೆ ಹಣ ಹೊಂದಿಸಬೇಕಾದ ಪರಿಸ್ಥಿತಿ ಸರ್ಕಾರಕ್ಕೆ ಎದುರಾಗಿಲ್ಲ. ಅಷ್ಟಕ್ಕೂ ಆಸ್ಪತ್ರೆಗಳಲ್ಲಿ ಸಂಗ್ರಹವಾಗುವ ಸೇವಾ ಶುಲ್ಕವನ್ನ ಸರ್ಕಾರ ತೆಗೆದುಕೊಳ್ಳುವುದಿಲ್ಲ. ಆಯಾ ಆಸ್ಪತ್ರೆಗಳ ಅಭಿವೃದ್ಧಿಗೆ ಬಳಕೆ ಮಾಡಲು ಅವಕಾಶ ಕಲ್ಪಿಸಿಕೊಡಲಾಗಿದೆ ಎಂದು ಸಚಿವ ದಿನೇಶ್ ಗುಂಡೂರಾವ್ ಹೇಳಿದರು. ಮೂರು, ನಾಲ್ಕು ವರ್ಷಗಳಿಗೊಮ್ಮೆ ಶುಲ್ಕ ಪರಿಷ್ಕರಣೆಯಾಗುವುದು



ಸಹಜ ಪ್ರಕ್ರಿಯೆಯಾಗಿದೆ. ಇದನ್ನೇ ಮುಂದಿಟ್ಟುಕೊಂಡು ಗ್ಯಾರಂಟಿಗಳಿಗೆ ತಳುಕು ಹಾಕಿ ನೋಡುವುದು ಸರಿಯಲ್ಲ. ಆಸ್ಪತ್ರೆಗಳಲ್ಲಿ ಸಂಗ್ರಹವಾಗುವ ಸೇವಾ ಶುಲ್ಕದ ಹಣವನ್ನು ಆಯಾ ಆಸ್ಪತ್ರೆಗಳ ಸಮಿತಿಗಳು ಚರ್ಚೆ ನಡೆಸಿ ಆಸ್ಪತ್ರೆಯ ಅಭಿವೃದ್ಧಿಗೆ ಬಳಕೆ ಮಾಡುತ್ತವೆ.

ಆಸ್ಪತ್ರೆಯ ಸ್ವಚ್ಚತೆ, ದುರಸ್ತಿ ಕಾರ್ಯಗಳು ಸೇರಿದಂತೆ ಆಸ್ಪತ್ರೆಗಳ ಅಭಿವೃದ್ಧಿಗಳಿಗೆ ಬಳಕೆ ಮಾಡಲಾಗುತ್ತದೆ. ಸರ್ಕಾರ ಕೇವಲ ಅನುಮತಿ ನೀಡುತ್ತದೆ ಅಷ್ಟೇ ಎಂದರು. ಉಚಿತ ಭಾಗ್ಯಗಳ ಕೊಟ್ಟು ಆರೋಗ್ಯ ಭಾಗ್ಯ ಕಸಿಯುತ್ತಿದ್ದಾರೆ. ಆರೋಗ್ಯ ಇಲಾಖೆ ವ್ಯಾಪ್ತಿಯ ಆಸ್ಪತ್ರೆಗಳಲ್ಲಿ ಸೇವಾ ಶುಲ್ಕ ಪರಿಷ್ಕರಣೆ ಇನ್ನೂ ಪ್ರಾಥಮಿಕ ಹಂತದ ಚರ್ಚೆಯಲ್ಲಿದೆ.

ವಕ್ಫ್ ವಿಚಾರದಲ್ಲಿ ಕಾಂಗ್ರೆಸ್ ಸರಕಾರ ರೈತರನ್ನು ಬೀದಿಗೆ ತರುವ ಕೆಲಸ ಮಾಡ್ತಿದೆ ಜನರಿಗೆ ಹೊರೆಯಾಗದಂತೆ ಸೇವಾ ಶುಲ್ಕ ಪರಿಷ್ಕರಣೆ ಮಾಡುವ ಬಗ್ಗೆ ಚಿಂತನೆ ನಡೆಸಲಾಗಿದೆ. ಶೇ 15 ರಿಂದ 20 ರಷ್ಟು ಶುಲ್ಕ ಹೆಚ್ಚಳದ ಬಗ್ಗೆ ಚರ್ಚೆಗಳಿವೆ. ಈ ಹಿಂದೆ ಕೆ.ಸಿ ಜನರಲ್ ಆಸ್ಪತ್ರೆಯಲ್ಲಿ ಮಾತ್ರ ಆರೋಗ್ಯ ಇಲಾಖೆಯ ಆಯುಕ್ತರ ಅನುಮತಿ ಪಡೆದು ಶುಲ್ಕ ಪರಿಷ್ಕರಣೆ ಮಾಡಲಾಗಿದೆ.

ಉಳಿದ ಯಾವುದೇ ಆಸ್ಪತ್ರೆಗಳಲ್ಲಾಗಲಿ, ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಾಗಲಿ ಇಲ್ಲಿಯ ವರೆಗು ಸೇವಾ ಶುಲ್ಕದಲ್ಲಿ ಹೆಚ್ಚಳ ವಾಗಿಲ್ಲ. ಈ ಬಗ್ಗೆ ಅಧಿಕಾರಿಗಳೊಂದಿಗೆ ಚರ್ಚಿಸಿ ಜನರಿಗೆ ಹೊರೆಯಾಗದಂತೆ ಸೂಕ್ತ ರೀತಿಯಲ್ಲಿ ಶುಲ್ಕ ಪರಿಷ್ಕರಣೆ ಮಾಡುವುದಾಗಿ ಸಚಿವ ದಿನೇಶ್ ಗುಂಡೂರಾವ್ ಹೇಳಿದರು.

# ರೇಷನ್ ಕಾರ್ಡ್ ವಾಪಸ್ ನೀಡಿ, ಇಲ್ಲದಿದ್ದರೆ ತೀವ್ರ ಹೋರಾಟ: ಆರ್.ಅಶೋಕ ಎಚ್ಚರಿಕೆ

**ಬೆಂಗಳೂರು, ನ.21 :** ಸದನ ಆರಂಭವಾಗುವ ಮುನ್ನವೇ ರಾಜ್ಯ ಸರ್ಕಾರ ಜನರಿಗೆ ರೇಷನ್ ಕಾರ್ಡ್ ವಾಪಸ್ ನೀಡಬೇಕು. ಇಲ್ಲವಾದರೆ ತೀವ್ರವಾದ ಹೋರಾಟ ಮಾಡಿ ಸರ್ಕಾರಿ ಕಚೇರಿಗಳಿಗೆ ಹಾಗೂ ವಿಧಾನಸೌಧಕ್ಕೆ ಬೀಗ ಹಾಕುತ್ತೇವೆ ಎಂದು ಪ್ರತಿಪಕ್ಷ ನಾಯಕ ಆರ್. ಅಶೋಕ ಎಚ್ಚರಿಕೆ ನೀಡಿದರು. ಜಯನಗರದ ಅರಸು ಕಾಲೋನಿಯಲ್ಲಿ ರೇಷನ್ ಕಾರ್ಡ್ ರದ್ದುಗೊಂಡ ಕುಟುಂಬದವರನ್ನು ಅವರು ಭೇಟಿ ಮಾಡಿದರು. ನಂತರ ಮಾತನಾಡಿ, ಮುಖ್ಯಮಂತ್ರಿ ಸಿದ್ದರಾಮಯ್ಯ ಅನ್ನಭಾಗ್ಯ ಎಂದು ಹೇಳಿ ಕನ್ನಭಾಗ್ಯ ಕೊಟ್ಟಿದ್ದಾರೆ. ಅನ್ನವನ್ನು ಕದ್ದು ಲಕ್ಷಾಂತರ ಜನರಿಗೆ ಅನ್ಯಾಯ ಮಾಡಿದ್ದಾರೆ. ಅರಸು ಕಾಲೋನಿಯಲ್ಲಿ 45 ವರ್ಷದಿಂದ ರೇಷನ್ ಕಾರ್ಡ್ ಹೊಂದಿದ್ದ ವೃದ್ಧೆ, ಈಗ ಅರ್ಹತೆ ಕಳೆದುಕೊಂಡಿದ್ದಾರೆ.

ಅಂಕಿ ಅಂಶದ ಪ್ರಕಾರ, 250 ಸರ್ಕಾರಿ ನೌಕರರ ಬಳಿ ರೇಷನ್ ಕಾರ್ಡ್ ಇದ್ದರೂ, 12 ಲಕ್ಷ ಜನರ ಕಾರ್ಡ್ ರದ್ದು ಮಾಡಲು ಸರ್ಕಾರ ಮುಂದಾಗಿದೆ. ಏನೂ ಭಯ ಬೇಡವೆಂದು ಸಿಎಂ ಸಿದ್ದರಾಮಯ್ಯ ಹೇಳಿದರೆ, ಆಹಾರ ಸಚಿವರು ಮತ್ತೆ ಅರ್ಜಿ ಹಾಕಿ ಎಂದು ಹೇಳುತ್ತಾರೆ. ಕಾಂಗ್ರೆಸ್ ನಾಯಕರು ತಪ್ಪು ಮಾಡಿದ ಮೇಲೆ ಜನರು



ಯಾಕೆ ಮರಳಿ ಅರ್ಜಿ ಹಾಕಬೇಕು ಎಂದು ಪ್ರಶ್ನೆ ಮಾಡಿದರು.

ಏಕಾಏಕಿ ರೇಷನ್ ಕಾರ್ಡ್ ರದ್ದು ಮಾಡಲು ಸರ್ಕಾರಕ್ಕೆ ಅಧಿಕಾರವಿಲ್ಲ. ಸರ್ಕಾರದ ಖಜಾನೆಯಲ್ಲಿ ಹಣ ಖಾಲಿಯಾಗಿದ್ದು, ರಸ್ತೆ ಗುಂಡಿ ಮುಚ್ಚಲು ಕೂಡ ಹಣವಿಲ್ಲ. 20–30 ಸಾವಿರ ಕೋಟಿ ರೂ. ಉಳಿಸಿ, ಶಾಸಕರ ಬಂಡಾಯ ಶಮನಕ್ಕೆ ಬಳಸಲಾಗುತ್ತದೆ ಎಂದು ದೂರಿದರು. ಸಚಿವರ ಮನೆ ಆಧುನೀಕರಣಕ್ಕೆ 40–50 ಕೋಟಿ ರೂ., ಸಿಎಂ ಮನೆ ನವೀಕರಣಕ್ಕೆ 2 ಕೋಟಿ ರೂ. ಖರ್ಚು ಮಾಡಲಾಗಿದೆ. ಆದರೆ ಬಡ ಜನರಿಗೆ ಅಕ್ಕಿ ಕೊಡಲು ಸರ್ಕಾರದ ಬಳಿ ಹಣವಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಮಾಜಿ ಸಿಎಂ ಹಾಗೂ ಸಂಸದ ಬಸವರಾಜ ಬೊಮ್ಮಾಯಿ, ಶಾಸಕ ಸಿ.ಕೆ.ರಾಮಮೂರ್ತಿ ಉಪಸ್ಥಿತರಿದ್ದರು. ಅನ್ನ, ಆರೋಗ್ಯದಲ್ಲಿ ಮೋಸ ಇದೇ ವೇಳೆ ಆರ್.ಅಶೋಕ ಅವರು ಸಂಜಯಗಾಂಧಿ ಆಸ್ಪತ್ರೆಗೆ ಭೇಟಿ ನೀಡಿ ಪರಿಶೀಲಿಸಿದರು.

ನಂತರ ಮಾತನಾಡಿ, ಕಾಂಗ್ರೆಸ್ ಸರ್ಕಾರ ಕಳೆದ 16 ತಿಂಗಳಲ್ಲಿ ಜನರ ತಲೆಗೆ ಚಪ್ಪಡಿ ಎಳೆಯುವ ಕೆಲಸ ಮಾಡಿದೆ. ಆರೋಗ್ಯ ಇಲಾಖೆಯಲ್ಲಿ ಹಣ ಕೊರತೆಯಿಂದಾಗಿ ಔಷಧಿ ಖರೀದಿ ಸಾಧ್ಯವಾಗುತ್ತಿಲ್ಲ. ಸರ್ಕಾರ ಶಿಕ್ಷಣ ಮತ್ತು ಆರೋಗ್ಯಕ್ಕೆ ಅನುದಾನ ಕಡಿತ ಮಾಡಿದೆ. ಸರ್ಕಾರಿ ಆಸ್ಪತ್ರೆಗಳಲ್ಲಿ ನಿರ್ವಹಣೆಗೂ ಹಣವಿಲ್ಲ. ಇದಕ್ಕಾಗಿ ಸೇವಾ ಶುಲ್ಕವನ್ನು ಏರಿಸಲಾಗಿದೆ. ಅನ್ನ ಮತ್ತು ಆರೋಗ್ಯದ ವಿಚಾರದಲ್ಲಿ ಸಿದ್ದರಾಮಯ್ಯನವರ ಸರ್ಕಾರ ಜನರಿಗೆ ಮೋಸ ಮಾಡಿದೆ ಎಂದು ದೂರಿದರು.

# ಕೆನಡಾದಲ್ಲಿ ಹಿಂದೂಗಳ ವಿರುದ್ಧ ಮತ್ತೆ ತೊಡೆತಟ್ಟಿದ ಖಲಿಸ್ತಾನಿಗಳು

**ಕೆನಡಾ, ನ.21 :** ಖಲಿಸ್ತಾನಿ ಗುಂಪುಗಳು ಹಿಂದೂಗಳು ಮತ್ತು ಹಿಂದೂ ದೇವಾಲಯಗಳ ವಿರುದ್ಧ ಹೊಸ ಪ್ರತಿಭಟನೆಗೆ ಬೆದರಿಕೆಹಾಕಿವೆ. ಅದರೂ ಖಲಿಸ್ತಾನಿ ಗುಂಪುಗಳ ಮೇಲೆ ಜಸ್ಟಿನ್ ಟ್ರುಡೊ ಸರ್ಕಾರದಿಂದ ಯಾವುದೇ ಒತ್ತಡವಿಲ್ಲ ಎಂದು ಉನ್ನತ ಗುಪ್ತಚರ ಮೂಲಗಳು ತಿಳಿಸಿವೆ. ಈ ಗುಂಪುಗಳು ಓಕ್ವಿಲ್ಲೆ ದೇವಸ್ಥಾನದಲ್ಲಿ ಲೈಫ್ ಸರ್ಟಿಫಿಕೇಟ್ ಶಿಬಿರಗಳ ವಿರುದ್ಧ ಪ್ರತಿಭಟನೆ ನಡೆಸುತ್ತವೆ. ಖಲಿಸ್ತಾನಿ ಗ್ರೂಪ್ ಸಿಖ್ಸ್ ಫಾರ್ ಜಸ್ಟಿಸ್ ನ. 23 ರಂದು ಓಕ್ವಿಲ್ಲೆಯ ವೈಷ್ಣೋ ದೇವಿ ದೇವಸ್ಥಾನದಲ್ಲಿ ಮತ್ತು ನ. 30 ರಂದು ಸ್ಕಾರ್ಬರೋದ ಲಕ್ಷ್ಮಿ ನಾರಾಯಣ ಮಂದಿರದಲ್ಲಿ ಲೈಫ್ ಸರ್ಟಿಫಿಕೇಟ್ ಕ್ಯಾಂಪ್‌ಗಳ ವಿರುದ್ಧ ಪ್ರತಿಭಟನೆ ಘೋಷಿಸಿದೆ. ಪ್ರತಿಭಟನೆಗಳು ಭಾರತೀಯ ರಾಜತಾಂತ್ರಿಕರ ಕ್ರಮಗಳನ್ನು ಗುರಿಯಾಗಿಸಿ ಕೊಂಡಿವೆ ಎಂದು ಖಈಎ ಹೇಳಿದೆ.

ಈ ಗುಂಪುಗಳ ವಿರುದ್ಧ ರಾಜ್ಯ ಪೊಲೀಸರು ಯಾವುದೇ ಕ್ರಮ ಕೈಗೊಂಡಿಲ್ಲ ಎಂದು ಗುಪ್ತಚರ ಮೂಲಗಳು ತಿಳಿಸಿವೆ. ಅವರು ಹಿಂದೂಗಳು ಮತ್ತು ಭಾರತೀಯ ರಾಜತಾಂತ್ರಿಕರಿಗೆ ಬೆದರಿಕೆ ಹಾಕಿದರು. ಅಲ್ಲಿ ಈ ಜನರು ದೇವಾಲಯಗಳು ಮತ್ತು ಭಾರತೀಯ ರಾಜತಾಂತ್ರಿಕರ ವಿರುದ್ಧ ಆಕ್ರಮಣಕಾರಿಯಾಗಿ ಇಂತಹ ಎಲ್ಲಾ ಕೆಲಸಗಳನ್ನು ಮಾಡಲು ಸಾಧ್ಯವಿಲ್ಲ, ಆದ್ರೆ ಕೆನಡಾದ ಪೊಲೀಸರು ಸ್ವತಃ ಬೈಲಾಗಳನ್ನು ಜಾರಿಗೆ ತರಲು ಮುಂದಾಗುತ್ತಿಲ್ಲ ಎಂದು ಮೂಲಗಳು ತಿಳಿಸಿವೆ. ಕೆನಡಾದ ಆಡಳಿತವು ಹಿಂದೂ ಗುಂಪುಗಳಿಗೆ ರಕ್ಷಣೆ ನೀಡಲು ಹಣಕ್ಕಾಗಿ ಬೇಡಿಕೆಯಿಡುತ್ತಿದೆ.

**ಕೆನಡಾ ಸರ್ಕಾರದ ವಿರುದ್ಧ ಹಿಂದೂಗಳ ಆಕ್ರೋಶ :**

**ಹಿಂದೂ ಗುಂಪುಗಳಿಗೆ ರಕ್ಷಣೆ ನೀಡಲು ಪೀಲ್ ಪೊಲೀಸರು 70,000 ಬೇಡಿಕೆ ಇಟ್ಟಿದ್ದಾರೆ ಎಂದು ಮೂಲಗಳು ತಿಳಿಸಿವೆ. ಕೆನಡಾದ ಹಿಂದೂ ಸಂಘಟನೆಗಳು ಜಸ್ಟಿನ್ ಟ್ರುಡೊ ಸರ್ಕಾರವು ತಮ್ಮ ನಾಗರಿಕ ಹಕ್ಕುಗಳನ್ನು ದುರುಪಯೋಗಪಡಿಸಿಕೊಳ್ಳುತ್ತಿದೆ ಎಂದು ಆರೋಪಿಸಿದೆ. ನಾವೂ ತೆರಿಗೆ ಪಾವತಿದಾರರು, ನಮ್ಮ ಕಡೆಗೆ ಈ ಪಕ್ಷಪಾತ ಏಕೆ ಪೀಲ್ ಪೊಲೀಸರು ನಮ್ಮ ಸಮಸ್ಯೆಗಳನ್ನು ಪರಿಹರಿಸುವ ಬದಲು ನಮ್ಮ ಮೇಲೆ ಅನಗತ್ಯ ಒತ್ತಡವನ್ನು ಹಾಕುತ್ತಿದ್ದಾರೆ, ಎಂದು ಕೆನಡಾದ ಹಿಂದೂ ಸಂಘಟನೆಗಳು ಹೇಳಿವೆ. ಅಲ್ಲದೆ ಈ ಖಲಿಸ್ತಾನಿ ಗುಂಪುಗಳ ಮೇಲೆ ಜಸ್ಟಿನ್ ಟ್ರುಡೊ ಸರ್ಕಾರದಿಂದ ಯಾವುದೇ ಒತ್ತಡವಿಲ್ಲ ಎಂದು ಉನ್ನತ ಗುಪ್ತಚರ ಮೂಲಗಳು ತಿಳಿಸಿವೆ.**

# ಇಂಡೋ–ಪೆಸಿಫಿಕ್‌ನಲ್ಲಿ ಶಾಂತಿ–ಸಮೃದ್ಧಿ ನಿಯಮಾಧಾರಿತ ಅಂತರರಾಷ್ಟ್ರೀಯ ಕ್ರಮಕ್ಕೆ ಭಾರತ ಬದ್ಧ: ರಾಜನಾಥ್

**ಹೊಸದಿಲ್ಲಿ, ನ.21 :** ಭಾರತವು ನೌಕಾಯಾನ ಮತ್ತು ಓವರ್‌ಫ್ಲೈಟ್ ಸ್ವಾತಂತ್ರ್ಯ, ಅಡೆತಡೆಯಿಲ್ಲದ ಕಾನೂನುಬದ್ಧ ವಾಣಿಜ್ಯ ಮತ್ತು ಇಂಡೋ–ಪೆಸಿಫಿಕ್‌ನಲ್ಲಿ ಶಾಂತಿ ಮತ್ತು ಸಮೃದ್ಧಿಗಾಗಿ ಅಂತರರಾಷ್ಟ್ರೀಯ ಕಾನೂನಿಗೆ ಬದ್ಧವಾಗಿದೆ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಗುರುವಾರ ಹೇಳಿದ್ದಾರೆ. ಲಾವೊ ಪಿಡಿಆರ್ನ ವಿಯೆಂಟಿಯಾಬ್‌ನಲ್ಲಿ ನಡೆದ 11 ನೇ ಆಸಿಯಾನ್ ರಕ್ಷಣಾ ಮಂತ್ರಿಗಳ ಸಭೆ–ಪ್ಲಸ್ ಫೋರಂ ಅನ್ನು ಉದ್ದೇಶಿಸಿ ಮಾತನಾಡಿದ ರಾಜನಾಥ್, ನೀತಿ ಸಂಹಿತೆಯ ಚರ್ಚೆಗಳ ಕುರಿತು ತಮ್ಮ ಒಳನೋಟಗಳನ್ನು ಹಂಚಿಕೊಂಡಾಗ, ?ಭಾರತವು ಕಾನೂನುಬದ್ಧ ಹಕ್ಕುಗಳು ಮತ್ತು ಹಿತಾಸಕ್ತಿಗಳಿಗೆ ಧಕ್ಕೆಯಾಗದ ಸಂಹಿತೆಯನ್ನು ನೋಡಲು ಬಯಸುತ್ತದೆ. ಈ ಚರ್ಚೆಯಲ್ಲಿ ಪಾಲ್ಗೊಳ್ಳದ ರಾಷ್ಟ್ರಗಳ ರಕ್ಷಣಾ ಸಚಿವಾಲಯದ ಹೇಳಿಕೆ ತಿಳಿಸಿದೆ. ಕೋಡ್ ಅಂತರರಾಷ್ಟ್ರೀಯ ಕಾನೂನಿಗೆ ಸಂಪೂರ್ಣವಾಗಿ ಹೊಂದಿಕೆಯಾಗಬೇಕು, ನಿರ್ದಿಷ್ಟವಾಗಿ ಯುಎನ್ ಕನ್ವೆನ್ಷನ್ ಲಾ ಆಫ್ ಸೀ



1982, ಅವರು ಹೇಳಿದರು. ನಡೆಯುತ್ತಿರುವ ಘರ್ಷಣೆಗಳು ಮತ್ತು ಅಂತರರಾಷ್ಟ್ರೀಯ ಕ್ರಮಕ್ಕೆ ಸವಾಲುಗಳ ಕುರಿತು, ರಕ್ಷಣಾ ಸಚಿವರು 11 ನೇ ಎಡಿಎಂಎಂ–ಪ್ಲಸ್ ಅನ್ನು ಲಾವೊ ಪಿಡಿಆರ್‌ನಲ್ಲಿ ನಡೆಸುತ್ತಿರುವುದು "ಪ್ರಾವಿಡೆನ್ಶಿಯಲ್" ಎಂದು ಪ್ರತಿಪಾದಿಸಿದರು, ಇದು ಅಹಿಂಸೆ ಮತ್ತು ಶಾಂತಿಯ ಬೌದ್ಧ ತತ್ವಗಳನ್ನು ಆಂತರಿಕಗೊಳಿಸಿದೆ. ಶಾಂತಿಯುತ ಸಹಬಾಳ್ವೆಯ ಬೌದ್ಧ ಸಿದ್ಧಾಂತಗಳನ್ನು ಎಲ್ಲರೂ ಹೆಚ್ಚು ನಿಕಟವಾಗಿ ಸ್ವೀಕರಿಸುವ ಸಮಯ ಬಂದಿದೆ ಎಂದು ಅವರು ಅಭಿಪ್ರಾಯಪಟ್ಟರು, ಏಕೆಂದರೆ ಪ್ರಪಂಚವು ಹೆಚ್ಚು ಹೆಚ್ಚು ಧ್ರುವೀಕರಣಗೊಳ್ಳುತ್ತಿದೆ ಮತ್ತು ಸ್ಥಾಪಿತ ವಿಶ್ವ ಕ್ರಮದ ಮೇಲೆ ಒತ್ತಡವನ್ನು ಹೆಚ್ಚಿಸುತ್ತದೆ.

ಭಾರತವು ಯಾವಾಗಲೂ ಸಂಕೀರ್ಣವಾದ ಅಂತರರಾಷ್ಟ್ರೀಯ ಸಮಸ್ಯೆಗಳನ್ನು ಪರಿಹರಿಸಲು ಸಂವಾದವನ್ನು ಪ್ರತಿಪಾದಿಸುತ್ತದೆ ಮತ್ತು ಅಭ್ಯಾಸ ಮಾಡಿದೆ. ಮುಕ್ತ ಸಂವಹನ ಮತ್ತು ಶಾಂತಿಯುತ ಮಾತುಕತೆಗೆ ಈ ಬದ್ಧತೆಯು ಗಡಿ ವಿವಾದಗಳಿಂದ ಹಿಡಿದು ವ್ಯಾಪಾರ ಒಪ್ಪಂದಗಳವರೆಗೆ ವ್ಯಾಪಕವಾದ ಅಂತರರಾಷ್ಟ್ರೀಯ ಸವಾಲುಗಳಿಗೆ ಭಾರತದ ವಿಧಾನದಲ್ಲಿ ಸ್ಪಷ್ಟವಾಗಿದೆ, ಎಂದು ಸಿಂಗ್ ಹೇಳಿದರು. "ಮುಕ್ತ ಸಂವಾದವು ನಂಬಿಕೆ, ತಿಳಿವಳಿಕೆ ಮತ್ತು ಸಹಕಾರವನ್ನು ಉತ್ತೇಜಿಸುತ್ತದೆ, ಸುಸ್ಥಿರ ಪಾಲುದಾರಿಕೆಗಳಿಗೆ ಅಡಿಪಾಯವನ್ನು ಹಾಕುತ್ತದೆ. ಸಂವಾದದ ಶಕ್ತಿಯು ಯಾವಾಗಲೂ ಪರಿಣಾಮಕಾರಿ ಎಂದು ಸಾಬೀತಾಗಿದೆ, ಜಾಗತಿಕ ವೇದಿಕೆಯಲ್ಲಿ ಸ್ಥಿರತೆ ಮತ್ತು ಸಾಮರಸ್ಯಕ್ಕೆ ಕೊಡುಗೆ ನೀಡುವ ಸ್ಪಷ್ಟವಾದ ಫಲಿತಾಂಶಗಳನ್ನು ನೀಡುತ್ತದೆ. ರಾಷ್ಟ್ರಗಳು ರಚನಾತ್ಮಕವಾಗಿ ತೊಡಗಿಸಿಕೊಂಡಾಗ, ಪರಸ್ಪರರ ದೃಷ್ಟಿಕೋನಗಳನ್ನು ಗೌರವಿಸಿ ಮತ್ತು ಸಹಕಾರದ ಉತ್ಸಾಹದಲ್ಲಿ ಹಂಚಿಕೆಯ ಗುರಿಗಳತ್ತ ಕೆಲಸ ಮಾಡಿದಾಗ ಮಾತ್ರ ಜಾಗತಿಕ ಸಮಸ್ಯೆಗಳಿಗೆ ನಿಜವಾದ, ದೀರ್ಘಾವಧಿಯ ಪರಿಹಾರಗಳನ್ನು ಸಾಧಿಸಬಹುದು ಎಂದು ಭಾರತ ನಂಬುತ್ತದೆ, ಎಂದು ರಕ್ಷಣಾ ಸಚಿವರು ಹೇಳಿದರು.

21ನೇ ಶತಮಾನವನ್ನು ಏಷ್ಯನ್ ಶತಮಾನ ಎಂದು ಬಣ್ಣಿಸಿದ ರಾಜನಾಥ್, ನಿರ್ದಿಷ್ಟವಾಗಿ ಆಸಿಯಾನ್ ಪ್ರದೇಶವು ಯಾವಾಗಲೂ ಆರ್ಥಿಕವಾಗಿ ಕ್ರಿಯಾಶೀಲವಾಗಿದೆ ಮತ್ತು ವ್ಯಾಪಾರ, ವಾಣಿಜ್ಯ ಮತ್ತು ಸಾಂಸ್ಕೃತಿಕ ಚಟುವಟಿಕೆಗಳೊಂದಿಗೆ ಸಡಗರದಿಂದ ಕೂಡಿದೆ ಎಂದು ಹೇಳಿದರು. ಭಾರತವು ಸರ್ಕಾರದ ಆಕ್ಟ್ ಈಸ್ಟ್ ನೀತಿಯ ಒಂದು ದಶಕವನ್ನು ಆಚರಿಸುತ್ತಿರುವಾಗ, ಆಸಿಯಾನ್ ಮತ್ತು ಇಂಡೋ–ಪೆಸಿಫಿಕ್ ರಾಷ್ಟ್ರಗಳೊಂದಿಗೆ ಭಾರತದ ಸಂಬಂಧಗಳನ್ನು ಬಲಪಡಿಸುವಲ್ಲಿ ಲಾಭಾಂಶವನ್ನು ಪಾವತಿಸುತ್ತಿದೆ ಎಂದು ಸಿಂಗ್ ಗಮನಸೆಳೆದರು. ಈ ದೃಷ್ಟಿಕೋನವು ರಾಷ್ಟ್ರದ ನೀತಿಯ ಮೂಲಾಧಾರವಾಗಿ ಆಸಿಯಾನ್ನ ಪ್ರಮುಖ ಪಾತ್ರವನ್ನು ಪುನಃ ಒತ್ತಿಹೇಳುತ್ತದೆ ಎಂದು ಅವರು ಹೇಳಿದರು. ಪ್ರಪಂಚದ ವಿವಿಧ ಭಾಗಗಳಲ್ಲಿ ವಿನಾಶವನ್ನು ಉಂಟುಮಾಡುವ ನೈಸರ್ಗಿಕ ವಿಕೋಪಗಳ ದೃಷ್ಟಿಯಿಂದ, ಇದು ಹವಾಮಾನ ಬದಲಾವಣೆಯ ಅಪಾಯಗಳನ್ನು ನೆನಪಿಸುತ್ತದೆ ಎಂದು ಅವರು ಹೇಳಿದರು. 11ನೇ ಎಡಿಎಂಎಂ–ಪ್ಲಸ್ ಜಂಟಿ ಹೇಳಿಕೆಗಾಗಿ ಇಂದಿನ ಸನ್ನಿವೇಶದಲ್ಲಿ ಅತ್ಯಂತ ಸೂಕ್ತವಾದ ವಿಷಯವನ್ನು ಆಯ್ಕೆ ಮಾಡಿದ್ದಕ್ಕಾಗಿ ಸಿಂಗ್ ಅವರು ಅಧ್ಯಕ್ಷರನ್ನು ಶ್ಲಾಘಿಸಿದರು. "ರಕ್ಷಣಾ ಕ್ಷೇತ್ರದಲ್ಲಿ ಹವಾಮಾನ ಬದಲಾವಣೆಗೆ ಸ್ಥಿತಿಸ್ಥಾಪಕತ್ವವನ್ನು ಬಲಪಡಿಸಲು ಬಹು–ಸ್ಟೇಕ್ಹೋಲ್ಡರ್ ಎಂಗೇಜ್ಮೆಂಟ್ ಅಗತ್ಯವಿದೆ, ನವೀನ ಪರಿಹಾರಗಳನ್ನು ಅಭಿವೃದ್ಧಿಪಡಿಸುವುದರಿಂದ ಹಿಡಿದು ಹವಾಮಾನ ಬದಲಾವಣೆಯ ಪ್ರತಿಕೂಲ ಪರಿಣಾಮಗಳನ್ನು ನಿರ್ವಹಿಸುವವರೆಗೆ.

ರಕ್ಷಣಾ ಸಚಿವರು ಜಾಗತಿಕ ಸಾಮಾನ್ಯಗಳತ್ತ ಗಮನ ಸೆಳೆದರು – ಜೀವನವನ್ನು ಉಳಿಸಿಕೊಳ್ಳಲು ಮತ್ತು ಗ್ರಹದಲ್ಲಿ ಸಮೃದ್ಧಿಯನ್ನು ತರಲು ಅಗತ್ಯವಾದ ಹಂಚಿಕೆಯ ನೈಸರ್ಗಿಕ ಸಂಪನ್ಮೂಲಗಳು ಮತ್ತು ಪರಿಸರ ವ್ಯವಸ್ಥೆಗಳು. ಏಕಪಕ್ಷೀಯ ಕ್ರಮಗಳನ್ನು ಆಶ್ರಯಿಸದೆ ಈ ಜಾಗತಿಕ ಸಾಮಾನ್ಯಗಳನ್ನು ನ್ಯಾಯಯುತ ಮತ್ತು ಸಮತೋಲಿತ ರೀತಿಯಲ್ಲಿ

# ಅದಾನಿ ಗ್ರೂಪ್ ವಿರುದ್ಧದ ಭ್ರಷ್ಟಾಚಾರ ಆರೋಪಕ್ಕೆ ಸಂಬಂಧಿಸಿದಂತೆ ಪ್ರಧಾನಿ ಮೋದಿ ವಿರುದ್ಧ ರಾಹುಲ್ ಹೇಳಿಕೆಗೆ ಬಿಜೆಪಿ ತಿರುಗೇಟು ನೀಡಿದೆ

**ಹೊಸದಿಲ್ಲಿ, ನ.21 :** ಅದಾನಿ ಗ್ರೂಪ್ನ ಮೇಲೆ ಅಮೆರಿಕದ ಪ್ರಾಸಿಕ್ಯೂಟರ್ಗಳು ಭ್ರಷ್ಟಾಚಾರ ಆರೋಪಗಳನ್ನು ಆರೋಪಿಸಿದ ಹಿನ್ನೆಲೆಯಲ್ಲಿ ಲೋಕಸಭೆಯಲ್ಲಿ ಪ್ರತಿಪಕ್ಷ ನಾಯಕ ರಾಹುಲ್ ಗಾಂಧಿ ಅವರು ಪ್ರಧಾನಿ ನರೇಂದ್ರ ಮೋದಿ ಅವರ ಹೇಳಿಕೆಯನ್ನು ಬಿಜೆಪಿ ಗುರುವಾರ ತಳ್ಳಿಹಾಕಿದೆ. ಪ್ರಧಾನಿಯವರ ಪ್ರತಿಷ್ಠೆಗೆ ಕಳಂಕ. ಇಲ್ಲಿನ ಪಕ್ಷದ ಪ್ರಧಾನ ಕಚೇರಿಯಲ್ಲಿ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಬಿಜೆಪಿ ಸಂಸದ ಮತ್ತು ಪಕ್ಷದ ವಕ್ತಾರ ಸಂಬಿತ್ ಪಾತ್ರಾ, ಅಮೆರಿಕದ ದೋಷಾರೋಪ ಪಟ್ಟಿಯಲ್ಲಿ ಉಲ್ಲೇಖಿಸಿರುವಂತೆ ಸೌರ ವಿದ್ಯುತ್ ಡೀಲ್ಗಳಿಗಾಗಿ ಅದಾನಿ ಗ್ರೂಪ್ನಿಂದ ಲಂಚ ಪಡೆದ ರಾಜ್ಯಗಳು ಪ್ರತಿಪಕ್ಷಗಳ



ಆಳ್ವಿಕೆಯಲ್ಲಿವೆ ಎಂದು ಹೇಳಿದರು. ರಾಹುಲ್ ಗಾಂಧಿ ವಿರುದ್ಧ ಪಾಟ್ ಶಾಟ್ ತೆಗೆದ ಬಿಜೆಪಿ ನಾಯಕ, "ಅವರು 2019 ರಲ್ಲಿ ಇದೇ ಮಾದರಿಯಲ್ಲಿ ರಫೇಲ್ ವಿವಾದವನ್ನು ತರಾಟೆಗೆ ತೆಗೆದುಕೊಂಡರು. ದೊಡ್ಡ ಬಹಿರಂಗಪಡಿಸಲಾಗುವುದು ಎಂದು ರಾಹುಲ್ ಹೇಳಿಕೊಂಡಿದ್ದರು, ಕೋವಿಡ್ ಸಾಂಕ್ರಾಮಿಕ ಸಮಯದಲ್ಲಿ ಅವರು ಪತ್ರಿಕಾಗೋಷ್ಠಿಗಳನ್ನು ನಡೆಸುತ್ತಿದ್ದರು. ಆದಾಗ್ಯೂ, ಲಸಿಕೆಯ ಬಗ್ಗೆ ಇದೇ ರೀತಿಯ ಶೈಲಿಯನ್ನು ಅವರು ಸುಪ್ರೀಂ ಕೋರ್ಟ್‌ನಲ್ಲಿ ನಂತರ ಕ್ಷಮೆಯಾಚಿಸಬೇಕಾಯಿತು, ಪುರಿ ಸಂಸದರು.

ಪತ್ರಾ ಅವರು, "ಇಂದು, ನಾವು ಬೆಳಿಗ್ಗೆಯಿಂದ ಮಾಧ್ಯಮಗಳಲ್ಲಿ ಕಂಪನಿಯೊಂದಕ್ಕೆ ಸಂಬಂಧಿಸಿದ ವಿಚಾರವನ್ನು ನೋಡುತ್ತಿದ್ದೇವೆ. ಆ ಕಂಪನಿಯ ವಿರುದ್ಧ ಯುಎಸ್ನಲ್ಲಿ ಪ್ರಕರಣವಿದೆ. ಆರೋಪ ಮತ್ತು ಪ್ರತ್ಯಾರೋಪಗಳಿವೆ. ಕಂಪನಿಯ ಮಟ್ಟಿಗೆ ನಾವು ಅದನ್ನು ಸ್ಪಷ್ಟವಾಗಿ ನಂಬಿದ್ದೇವೆ.

ವಿಷಯವು ವಿದ್ಯುತ್ ಮಾರಾಟ ಮತ್ತು ಖರೀದಿಯ ಒಪ್ಪಂದ ಮತ್ತು ರಾಜ್ಯ ವಿತರಣಾ ಕಂಪನಿಗಳೊಂದಿಗಿನ ಒಪ್ಪಂದಕ್ಕೆ ಸಂಬಂಧಿಸಿದೆ. ಗಖ ನ್ಯಾಯಾಲಯದಲ್ಲಿ ಉಲ್ಲೇಖಿಸಲಾದ ನಾಲ್ಕು ರಾಜ್ಯಗಳು ಯಾವುವು? ಈ ವಿಷಯವು ಜುಲೈ 2021 ಮತ್ತು ಫೆಬ್ರವರಿ 2022 ರ ನಡುವಿನ ಅವಧಿಗೆ ಸಂಬಂಧಿಸಿದೆ. ಆ ಸಮಯದಲ್ಲಿ ಛತ್ತೀಸ್ಗಢ, ಆಂಧ್ರ ಪ್ರದೇಶ, ತಮಿಳುನಾಡು ಮತ್ತು ಒಡಿಶಾ ಎಲ್ಲಾ ಓಆಂ ಅಲ್ಲದ ಸರ್ಕಾರಗಳನ್ನು ಹೊಂದಿದ್ದವು. ಅವರಿಗೆ ನಮ್ಮ ಮುಖ್ಯಮಂತ್ರಿಗಳಾಗಲಿ, ಆಡಳಿತ ಪಕ್ಷಗಳಾಗಲಿ ನಮ್ಮ ಬೆಂಬಲವಿರಲಿಲ್ಲ. ಆದರೆ ಅವರು ಕಾಂಗ್ರೆಸ್ ಅಥವಾ ಅವರ ಮಿತ್ರಪಕ್ಷಗಳ ಸರ್ಕಾರಗಳನ್ನು ಹೊಂದಿದ್ದರು, ಪಾತ್ರ ಹೇಳಿದರು.



ಗಯಾನಾದ ಜಾರ್ಜ್‌ಟೌನ್‌ನಲ್ಲಿ ಗುರುವಾರ ನಡೆದ ನಿಯೋಗ ಮಟ್ಟದ ಮಾತುಕತೆಯಲ್ಲಿ ಪ್ರಧಾನಿ ನರೇಂದ್ರ ಮೋದಿ.

# ಯುವತಿ ಬಾಯಿಗೆ ಮಲ ಹಾಕಿದ ಕಿರಾತಕ

**ಭುವನೇಶ್ವರಿ, ನ. 21:** ಯುವತಿಯ ಬಾಯಿಗೆ ವ್ಯಕ್ತಿಯೊಬ್ಬ ಮಲ ಹಾಕಿ ಹಲ್ಲೆ ನಡೆಸಿರುವ ಹೃದಯ ವಿದ್ರಾವಕ ಘಟನೆ ಒಡಿಶಾದ ಬೋಲಂಗಿರ್ ಜಿಲ್ಲೆಯಲ್ಲಿ ನಡೆದಿದೆ. ಯುವತಿ ತನ್ನ ಕೃಷಿ ಭೂಮಿಯಲ್ಲಿ ಕೆಲಸ ಮಾಡುತ್ತಿರುವಾಗ ಅದೇ ಊರಿನ ವ್ಯಕ್ತಿಯೊಬ್ಬ ಟ್ರ್ಯಾಕ್ಟರ್ ಚಲಾಯಿಸಿ ಆಕೆಯ ಬೆಳೆ ನಾಶಪಡಿಸಿದ್ದಾನೆ.

ದಾಖಲಾಗಿರುವ ಎಫ್ಐಆರ್ ಪ್ರಕಾರ ಆಕೆಯ ಬಾಯಿಗೆ ಬಲವಂತವಾಗಿ ಮಲವನ್ನು ತುರುಕಿದ್ದಾನೆ. ಮಧ್ಯಪ್ರವೇಶಿಸಿ ಆಕೆಯನ್ನು ರಕ್ಷಿಸಲು ಯತ್ನಿಸಿದ ಯುವತಿಯ ಚಿಕ್ಕಮ್ಮನ ಮೇಲೂ ಅದೇ ವ್ಯಕ್ತಿ ಹಲ್ಲೆ ನಡೆಸಿದ್ದಾನೆ ಎಂದು ಪೊಲೀಸ್ ವರದಿ ತಿಳಿಸಿದೆ. ಪೊಲೀಸರು ಕ್ಷಿಪ್ರ ಕ್ರಮ ಕೈಗೊಳ್ಳದಿರುವುದು ಸ್ಥಳೀಯ ಸಮುದಾಯದ ಆಕ್ರೋಶಕ್ಕೆ ಕಾರಣವಾಗಿದೆ. ಬಿಜು ಜನತಾ ದಳ (ಬಿಜೆಡಿ) ಸಂಸದ ನಿರಂಜನ್ ಬಿಸಿ ಭುವನೇಶ್ವರದಲ್ಲಿ ಪತ್ರಿಕಾಗೋಷ್ಠಿಯಲ್ಲಿ ತಮ್ಮ ಕಳವಳವನ್ನು ವ್ಯಕ್ತಪಡಿಸಿದರು. ಪೊಲೀಸರ ನಿಷ್ಕ್ರಿಯತೆಯನ್ನು ಖಂಡಿಸಿದ ಬಿಸಿ, ಸ್ಥಳೀಯ ಸಮುದಾಯದಲ್ಲಿ ವ್ಯಾಪಕ ಅಸಮಾಧಾನಕ್ಕೆ ಕಾರಣವಾಗಿದೆ.

ಆರೋಪಿಗಳ ವಿರುದ್ಧ ಪೊಲೀಸರು ಯಾವುದೇ ಕ್ರಮ ಕೈಗೊಂಡಿಲ್ಲ, ಇದು ಆದಿವಾಸಿಗಳನ್ನು ಕೆರಳಿಸಿದೆ. ಬಂಗಮುಂಡದಲ್ಲಿ ಕಾನೂನು ಸುವ್ಯವಸ್ಥೆ ಹದಗೆಟ್ಟರೆ ಅದಕ್ಕೆ ರಾಜ್ಯ ಸರಕಾರವೇ ಹೊಣೆಯಾಗಬೇಕಾಗುತ್ತದೆ. ಘಟನೆಯ ನಂತರ ಆರೋಪಿ ಪರಾರಿಯಾಗಿದ್ದಾನೆ ಎಂದು ಬೋಲಂಗಿರ್ನ ಪೊಲೀಸ್ ವರಿಷ್ಠಾಧಿಕಾರಿ ಖಿಲಾರಿ ರಿಷಿಕೇಶ್ ದ್ನ್ಯಾಂಡಿಯೊ ಖಚಿತಪಡಿಸಿದ್ದಾರೆ.

ಆತನನ್ನು ಬಂಧಿಸಲು ನಾವು ಎರಡು ವಿಶೇಷ ತಂಡಗಳನ್ನು ರಚಿಸಿದ್ದೇವೆ. ಆರೋಪಿಗಳ ಹುಡುಕಾಟಕ್ಕಾಗಿ ಪೊಲೀಸ್ ತಂಡಗಳನ್ನು ನೆರೆಯ ರಾಜ್ಯಗಳಿಗೆ ಕಳುಹಿಸಲಾಗಿದೆ ಎಂದು ಜ್ಞಾನಾಂಡಿಯೊ ಹೇಳಿದರು. ಶೀಘ್ರದಲ್ಲೇ ಬಂಧಿಸಲಾಗುವುದು ಎಂದು ಭರವಸೆ ನೀಡಿದ್ದಾರೆ.

# ಎಂವಿಎಗೆ 160–165 ಸ್ಥಾನ: ಸಂಜಯ್ ರಾವತ್

**ಮುಂಬೈ, ನ. 21:** ಮಹಾರಾಷ್ಟ್ರದ 288 ವಿಧಾನಸಭಾ ಕ್ಷೇತ್ರಗಳಿಗೆ ನಡೆದ ಚುನಾವಣೆಯಲ್ಲಿ ಪ್ರತಿಪಕ್ಷಗಳ ಮೈತ್ರಿಯಾದ ಮಹಾ ವಿಕಾಸ್ ಅಘಾಡಿ (ಎಂವಿಎ)ಯು ಒಟ್ಟು 160 ರಿಂದ 165 ಸ್ಥಾನಗಳನ್ನು ಗೆದ್ದು ರಾಜ್ಯದಲ್ಲಿ ಸರ್ಕಾರವನ್ನು ರಚಿಸಲಿದೆ ಎಂದು ಶಿವಸೇನೆ (ಯುಬಿಟಿ) ಸಂಸದ ಸಂಜಯ್ ರಾವತ್ ಗುರುವಾರ ಹೇಳಿದ್ದಾರೆ.

ಅದಾಗ್ಯೂ, ಎಕ್ಸಿಟ್ ಪೋಲ್ಗಳು ಆಡಳಿತರೂಢ ಮಹಾಯುತಿ ರಾಜ್ಯದಲ್ಲಿ ಗೆಲ್ಲಲಿವೆ ಎಂದು ಸೂಚಿಸಿವೆ. ಎಂವಿಎ 160–165. ಶನಿವಾರ ನಡೆಯಲಿರುವ ಮತ ಎಣಿಕೆಗೆ ಮುನ್ನ ಎಂವಿಎ ನಾಯಕರು ಗುರುವಾರ ಸಭೆ ನಡೆಸಲಿದ್ದಾರೆ ಎಂದು



ರಾಜ್ಯಸಭಾ ಸಂಸದರೂ ಆಗಿರುವ ಸಂಜಯ್ ರಾವತ್ ಹೇಳಿದ್ದಾರೆ.

ಬುಧವಾರ ಮತದಾನ ಮುಗಿದ ತಕ್ಷಣವೆ ಪ್ರಕಟವಾಗಿದ್ದ ಎಕ್ಸಿಟ್ ಪೋಲ್ಗಳು ಮಹಾರಾಷ್ಟ್ರದಲ್ಲಿ ಬಿಜೆಪಿ ನೇತೃತ್ವದ ಮೈತ್ರಿಕೂಟಕ್ಕೆ ಬಹುಮತ ಸಿಗಲಿದೆ ಎಂದು ಸೂಚಿಸಿತ್ತು. ನಾವು ಮತ್ತು ನಮ್ಮ ಮಿತ್ರಪಕ್ಷಗಳಾದ ಪಿಡಬ್ಲ್ಯೂಪಿ, ಸಮಾಜವಾದಿ ಪಕ್ಷ, ಎಡಪಕ್ಷಗಳು ಸೇರಿದಂತೆ ಸಣ್ಣ ಪಕ್ಷಗಳು ಬಹುಮತದ ಗಡಿ ದಾಟುತ್ತಿವೆ. ನಾವು 160–165 ಸ್ಥಾನಗಳನ್ನು ಗೆಲ್ಲುತ್ತೇವೆ. ರಾಜ್ಯದಲ್ಲಿ ಸ್ಥಿರ ಸರ್ಕಾರ ಇರುತ್ತದೆ. ನಾನು ಅದನ್ನು ಅತ್ಯಂತ ಆತ್ಮವಿಶ್ವಾಸದಿಂದ ಹೇಳಬಲ್ಲೆ ಎಂದು ಸಂಜಯತ್ ರಾವತ್ ಸುದ್ದಿಗಾರರಿಗೆ ತಿಳಿಸಿದ್ದಾರೆ.

ಮಹಾ ವಿಕಾಸ್ ಅಘಾಡಿಯಲ್ಲಿ ಮಾಜಿ ಮುಖ್ಯಮಂತ್ರಿ ಉದ್ಧವ್ ಠಾಕ್ರೆ ನೇತೃತ್ವದ ಶಿವಸೇನೆ, ಕಾಂಗ್ರೆಸ್ ಮತ್ತು ಶರದ್ ಪವಾರ್ ಅವರಪಕ್ಷಗಳು ಇವೆ. ಆಡಳಿತಾರೂಢ ಮಹಾಯುತಿ ಮೈತ್ರಿಯಲ್ಲಿ ಬಿಜೆಪಿ, ಸಿಎಂ ಏಕನಾಥ್ ಶಿಂಧೆ ಅವರ ಶಿವಸೇನೆ ಮತ್ತು ಉಪ ಮುಖ್ಯಮಂತ್ರಿ ಅಜಿತ್ ಪವಾರ್ ಅವರ ಎನ್ಸಿಪಿ ಪಕ್ಷಗಳು ಇವೆ.

ವಿರೋಧ ಪಕ್ಷದ ಒಗ್ಗಿಂ ಒಕ್ಕೂಟವು 2024 ರ ಲೋಕಸಭೆ ಚುನಾವಣೆಯಲ್ಲಿ ರಾಜ್ಯದಲ್ಲಿ ಉತ್ತಮ ಪ್ರದರ್ಶನವನ್ನು ಮಾಡಿತ್ತು. ಇದರ ವಿರುದ್ಧವಾಗಿ ಮಹಾಯುತಿ ಮೈತ್ರಿಕೂಟವು ಅಧಿಕಾರವನ್ನು ಉಳಿಸಿಕೊಳ್ಳಲು ಭಾರಿ ಹೋರಾಟ ಮಾಡುತ್ತಿದೆ. 2019ರ ವಿಧಾನಸಭಾ ಚುನಾವಣೆಯಲ್ಲಿ 61.74% ಮತದಾನವಾಗಿತ್ತು, ಆದರೆ ಬುಧವಾರ ನಡೆದ ವಿಧಾನಸಭಾ ಚುನಾವಣೆಯಲ್ಲಿ ಅಂದಾಜು 65% ದಷ್ಟು ಮತದಾನವಾಗಿದೆ ಎಂದು ತಾತ್ಕಾಲಿಕ ಅಂಕಿ ಅಂಶಗಳು ಹೇಳಿವೆ.

# ದೆಹಲಿ ವಿಧಾನಸಭೆ ಚುನಾವಣೆ ಎಎಪಿ ಮೊದಲ ಪಟ್ಟಿ ಬಿಡುಗಡೆ

**ನವದೆಹಲಿ, ನ. 21 :** ಮುಂದಿನ ವರ್ಷದ ಆರಂಭದಲ್ಲಿ ನಡೆಯಲಿರುವ ದೆಹಲಿ ವಿಧಾನಸಭಾ ಚುನಾವಣೆಗೆ ಆಮ್ ಆದ್ಮಿ ಪಕ್ಷವು ತನ್ನ 11 ಅಭ್ಯರ್ಥಿಗಳ ಮೊದಲ ಪಟ್ಟಿಯನ್ನು ಗುರುವಾರ ಬಿಡುಗಡೆ ಮಾಡಿದೆ. ಈ ಪಟ್ಟಿಯಲ್ಲಿ ಕಾಣಿಸಿಕೊಂಡ ಆರು ಜನರು ಪಕ್ಷಾಂತರವಾಗಿ ಎಎಪಿಗೆ ಸೇರಿದ ನಾಯಕರಾಗಿದ್ದಾರೆ. ಅದರಲ್ಲೂ ಮುಖ್ಯವಾಗಿ ಮೂವರು ಬಿಜೆಪಿಯಿಂದ ಪಕ್ಷಾಂತರ ಆಗಿದವರಾಗಿದ್ದು, ಮೂವರು ಕಾಂಗ್ರೆಸ್ನಿಂದ ಎಎಪಿಗೆ ಸೇರಿದ ನಾಯಕರಾಗಿದ್ದಾರೆ. 2025ರ ದೆಹಲಿ ವಿಧಾನಸಭೆ

ಬಿಜೆಪಿಯ ಮಾಜಿ ಶಾಸಕ ಬ್ರಹ್ಮ ಸಿಂಗ್ ತನ್ವಾರ್ ಅವರು ಛತ್ತರ್ಪುರದಿಂದ ಸ್ಪರ್ಧಿಸಲಿದ್ದು, ಕಿರಾರಿಯಿಂದ ಬಿಜೆಪಿಯ ಮಾಜಿ ಶಾಸಕ ಅನಿಲ್ ಝಾ ಅವರು ಎಎಪಿಯಿಂದ ಸ್ಪರ್ಧಿಸಲಿದ್ದಾರೆ ಎಂದು ಆಮ್ ಆದ್ಮಿ ಪಕ್ಷ ಘೋಷಿಸಿದೆ. ಬಿಜೆಪಿಯ ಮಾಜಿ ನಾಯಕ ಮತ್ತು ಎರಡು ಬಾರಿ ಕೌನ್ಸಿಲರ್ ಆಗಿರುವ ಬಿ.ಬಿ. ತ್ಯಾಗಿ ಅವರು ಲಕ್ಷ್ಮಿ ನಗರದಿಂದ ಆಮ್ ಆದ್ಮಿ ಪಕ್ಷದ ಟಿಕೆಟ್ನಲ್ಲಿ ಸ್ಪರ್ಧಿಸಲಿದ್ದಾರೆ.

ಐದು ಬಾರಿ ಶಾಸಕರಾಗಿ ಆಯ್ಕೆಯಾಗಿರುವ ಕಾಂಗ್ರೆಸ್ ನಾಯಕ ಮತೀನ್ ಅಹ್ಮದ್ ಅವರ ಪುತ್ರ ಚೌಧರಿ ಜುಬೇರ್ ಅಹ್ಮದ್ ಅವರು ಸೀಲಂಪುರದಿಂದ ಸ್ಪರ್ಧಿಸುತ್ತಿರುವುದಾಗಿ ಎಎಪಿ ಘೋಷಿಸಿದೆ.

ಮೂರು ಬಾರಿ ಕಾಂಗ್ರೆಸ್ ಶಾಸಕರಾಗಿರುವ ವೀರ್ ಸಿಂಗ್ ಧಿಂಗನ್ ಅವರನ್ನು ಎಎಪಿ ಸೀಮಾಪುರಿಯಿಂದ ಟಿಕೆಟ್ ನೀಡಿದ್ದು, ಈ ವರ್ಷವಷ್ಟೆ ಆಮ್ ಆದ್ಮಿ ಪಕ್ಷಕ್ಕೆ ಸೇರ್ಪಡೆಗೊಂಡ ಕಾಂಗ್ರೆಸ್ ಮಾಜಿ ಶಾಸಕ ಸೋಮೇಶ್ ಶೌಕೀನ್ ಮಟಿಯಾಲದಿಂದ ಸ್ಪರ್ಧಿಸಲಿದ್ದಾರೆ. ಆಮ್ ಆದ್ಮಿ ಪಕ್ಷದ ಪ್ರಮುಖ ನಾಯಕ ಕೈಲಾಶ್ ಗಹ್ಲೋಟ್ ಪಕ್ಷಕ್ಕೆ ರಾಜೀನಾಮೆ ನೀಡಿ ಬಿಜೆಪಿ ಸೇರಿದ ಕೆಲವೇ ದಿನಗಳಲ್ಲಿ ಈ ಘೋಷಣೆ ಹೊರಬಿದ್ದಿದೆ.

2020ರಲ್ಲಿ ನಡೆದ ದೆಹಲಿ ವಿಧಾನಸಭಾ ಚುನಾವನೆಯಲ್ಲಿ ರಾಜ್ಯದ 70 ಕ್ಷೇತ್ರಗಳಲ್ಲಿ ಆಮ್ ಆದ್ಮಿ ಪಕ್ಷವು ಬರೋಬ್ಬರಿ 62 ಕ್ಷೇತ್ರಗಳನ್ನು ಗೆದ್ದುಕೊಂಡಿತ್ತು.

# ಕಪ್ಪು ಬಾವುಟ ಪ್ರದರ್ಶನ ಕಾನೂನುಬಾಹಿರವಲ್ಲ: ಕೇರಳ ಹೈಕೋರ್ಟ್

**ತಿರುವಂತನಂತಪುರ, ನ. 21:** ಯಾವುದೇ ಬಣ್ಣದ ಧ್ವಜವನ್ನು ಪ್ರತಿಭಟನೆಯ ರೂಪವಾಗಿ ಪ್ರದರ್ಶಿಸಿದರೂ ಅಂತಹ ಕೃತ್ಯವನ್ನು ನಿಷೇಧಿಸುವ ಯಾವುದೇ ಕಾನೂನು ಇಲ್ಲ. ಹೀಗಾಗಿ, ಅದನ್ನು ಮಾನನಷ್ಟ ಅಥವಾ ಕಾನೂನುಬಾಹಿರ ಎಂದು ಪರಿಗಣಿಸಲಾಗುವುದಿಲ್ಲ ಎಂದು ಕೇರಳ ಹೈಕೋರ್ಟ್ ಹೇಳಿದೆ. ಕೇರಳದ ಮುಖ್ಯಮಂತ್ರಿ ಪಿಣರಾಯಿ ವಿಜಯನ್ ಅವರ ಬೆಂಗಾವಲು ವಾಹನಕ್ಕೆ ಮೂವರು ಕಪ್ಪು ಬಾವುಟ ತೋರಿಸಿದ್ದಕ್ಕೆ ಅವರ ಮೇಲೆ ಕೇಸ್ ದಾಖಲಿಸಲಾಗಿತ್ತು. ಈ ಪ್ರಕರಣದ ವಿಚಾರಣೆ ನಡೆಸಿದ ಹೈಕೋರ್ಟ್ ಈ ತೀರ್ಪು ನೀಡಿದೆ.

ಅರ್ಜಿದಾರರು 2017ರ ಏಪ್ರಿಲ್ 9ರಂದು ಮುಖ್ಯಮಂತ್ರಿ ಪಿಣರಾಯಿ ವಿಜಯನ್ ಅವರ ಬೆಂಗಾವಲು ಪಡೆಗೆ ಯುವಕರು ಕಪ್ಪು ಬಾವುಟ ಬೀಸಿದ್ದರು ಮತ್ತು ಪೊಲೀಸ್ ಸಿಬ್ಬಂದಿ ವಿರುದ್ಧ ಬಲಪ್ರಯೋಗ




ಮಾಡಿದರು ಎಂದು ಆರೋಪಿಸಲಾಗಿತ್ತು. ವ್ಯಕ್ತಿಯೊಬ್ಬರಿಗೆ ಕಪ್ಪು ಬಾವುಟ ತೋರಿಸುವುದು ಕಾನೂನು ಬಾಹಿರವಲ್ಲ ಮತ್ತು ಮಾನನಷ್ಟವಾಗುವುದಿಲ್ಲ ಎಂದು ಗಮನಿಸಿದ ಕೇರಳ ಹೈಕೋರ್ಟ್, ಮುಖ್ಯಮಂತ್ರಿ ಪಿಣರಾಯಿ ವಿಜಯನ್ ಅವರ ಬೆಂಗಾವಲು ಪಡೆಗೆ ಕಪ್ಪು ಬಾವುಟ ಬೀಸಿದ್ದಕ್ಕೆ ಸಂಬಂಧಿಸಿದಂತೆ ಮೂವರ ವಿರುದ್ಧ ದಾಖಲಾಗಿದ್ದ ಪ್ರಕರಣವನ್ನು ರದ್ದುಗೊಳಿಸಿದೆ.

ಬುಧವಾರದ ನೀಡಿದ ತೀರ್ಪಿನಲ್ಲಿ, ನ್ಯಾಯಮೂರ್ತಿ ಬೆಚು ಕುರಿಯನ್ ಥಾಮಸ್ ಅವರು ಪರಿಣಾಮಕಾರಿ ಪ್ರಜಾಪ್ರಭುತ್ವಕ್ಕಾಗಿ ಪ್ರತಿಭಟನೆಗಳು ಅತ್ಯಗತ್ಯ ಎಂದು ಹೇಳಿದ್ದಾರೆ. 2017ರಲ್ಲಿ ನಡೆದ ಘಟನೆಯಲ್ಲಿ ಎರ್ನಾಕುಲಂ ಜಿಲ್ಲೆಯ ಪರವೂರ್ನ ಮೂವರು ಯುವಕರು ಪಿಣರಾಯಿ ವಿಜಯನ್ ಅವರ ಬೆಂಗಾವಲು ಪಡೆಗೆ ಮಾನಹಾನಿ ಮಾಡುವ ಉದ್ದೇಶದಿಂದ ಕಪ್ಪು ಬಾವುಟ ಬೀಸಿದ್ದಾರೆ ಎಂದು ಆರೋಪಿಸಲಾಗಿತ್ತು. ಪೊಲೀಸರು ಅವರನ್ನು ಬೆಂಗಾವಲು ಪಡೆಯತ್ತ ಸಾಗದಂತೆ ತಡೆಯಲು ಪ್ರಯತ್ನಿಸಿದಾಗ ಅವರು ಪೊಲೀಸ್ ಸಿಬ್ಬಂದಿಯನ್ನು ತಳ್ಳುವ ಮೂಲಕ ಬಲಪ್ರಯೋಗ ಮಾಡಿದ್ದರು.

ಪೊಲೀಸರು 2020ರಲ್ಲಿ ಪರವೂರಿನಲ್ಲಿರುವ ಮ್ಯಾಜಿಸ್ಟ್ರೇಟ್ ನ್ಯಾಯಾಲಯದಲ್ಲಿ ಅವರ ವಿರುದ್ಧ ಚಾರ್ಜ್‌ಶೀಟ್ ಸಲ್ಲಿಸಿದ್ದರು. ಅವರ ವಿರುದ್ಧ ಮಾನನಷ್ಟ, ಸಾರ್ವಜನಿಕ ನೌಕರನಿಗೆ ಕರ್ತವ್ಯ ನಿರ್ವಹಿಸಲು ಅಡ್ಡಿಪಡಿಸುವ ಐಪಿಸಿ ಸೆಕ್ಷನ್ಗಳ ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿತ್ತು. ನಂತರ ಆರೋಪಿಗಳು ಪ್ರಕರಣವನ್ನು ಪ್ರಶ್ನಿಸಿ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದರು.

ಇದೇ ರೀತಿ 2023ರಲ್ಲಿ ಕೇರಳ ರಾಜ್ಯದ ಎಲ್ಲಾ 140 ವಿಧಾನಸಭಾ ಕ್ಷೇತ್ರಗಳಿಗೆ ಯಾತ್ರೆಯ ಭಾಗವಾಗಿ ಸಿಎಂ ಪಿಣರಾಯಿ ವಿಜಯನ್ ಮತ್ತು ಅವರ ಕ್ಯಾಬಿನೆಟ್ ಸಹೋದ್ಯೋಗಿಗಳು ಪ್ರಯಾಣಿಸುತ್ತಿದ್ದ ಬಸ್ನಲ್ಲಿ ಕಪ್ಪು ಬಾವುಟ ಬೀಸಿದ್ದಕ್ಕಾಗಿ ಕೇರಳದ ಪೊಲೀಸರು ವಿರೋಧ ಪಕ್ಷಗಳ ಕಾರ್ಯಕರ್ತರ ವಿರುದ್ಧ ನೂರಾರು ಪ್ರಕರಣಗಳನ್ನು ದಾಖಲಿಸಿದ್ದರು. ಇದಲ್ಲದೆ, ವಿಜಯನ್ ಅವರ ಬೆಂಗಾವಲು ಪಡೆಗೆ ಕಪ್ಪು ಬಾವುಟವನ್ನು ಬೀಸಿದ ಪ್ರತಿಭಟನಾಕಾರರ ಮೇಲೆ ಸಿಪಿಐ(ಎಂ) ಕಾರ್ಯಕರ್ತರು ಹಲ್ಲೆ ನಡೆಸಿದ್ದಾರೆ ಎಂದು ಆರೋಪಿಸಲಾಗಿತ್ತು.

ಕೇರಳ ರಾಜ್ಯಪಾಲ ಆರಿಫ್ ಮೊಹಮ್ಮದ್ ಖಾನ್ ಅವರಿಗೂ ಜನವರಿಯಲ್ಲಿ ಎಸ್‌ಎಫ್ಐ ಕಾರ್ಯಕರ್ತರು ಕಪ್ಪು ಬಾವುಟ ತೋರಿಸಿದ್ದರು. ಈ ಘಟನೆಯಿಂದ ಕೆರಳಿದ ಮೊಹಮ್ಮದ್ ಖಾನ್ ಅವರು ತಮ್ಮ ಕಾರಿನಿಂದ ಕೆಳಗಿಳಿದು ಕೊಲ್ಲಂ ಜಿಲ್ಲೆಯ ರಸ್ತೆಯಲ್ಲಿ ಧರಣಿ ನಡೆಸಿದ್ದರು. ನಂತರ ಪೊಲೀಸರು ಎಸ್‌ಎಫ್ಐ ಕಾರ್ಯಕರ್ತರ ಮೇಲೆ ಕೇಸು ದಾಖಲಿಸಿದ್ದರು.

# 500 ವರ್ಷಗಳಷ್ಟು ಹಳೇ ಮಸೀದಿ ಸಮೀಕ್ಷೆಗೆ ಆದೇಶ

**ಲಕ್ನೋ, ನ. 21 :** 1526 ರಲ್ಲಿ ನಿರ್ಮಿಸಲಾಗಿರುವ ಮಸೀದಿಯೊಂದರ ಸಮೀಕ್ಷೆ ನಡೆಸುವಂತೆ ಉತ್ತರ ಪ್ರದೇಶದ ಸಂಭಾಲ್ ಜಿಲ್ಲೆಯ ನ್ಯಾಯಾಲಯ ಆದೇಶ ನೀಡಿದ್ದು, ಈ ಪ್ರಕ್ರಿಯೆಯನ್ನು ಪ್ರತಿಭಟಿಸಲು ಸ್ಥಳೀಯ ಮುಸ್ಲಿಮರು ಹೆಚ್ಚಿನ ಸಂಖ್ಯೆಯಲ್ಲಿ ಸೇರಿದ್ದರಿಂದ ಪ್ರದೇಶದಲ್ಲಿ ಮಂಗಳವಾರ ಉದ್ವಿಗ್ನತೆ ಸೃಷ್ಟಿಸಿಯಾಗಿದೆ. ಪ್ರಸ್ತುತ ಮಸೀದಿಗೆ ಮೊದಲು ಆ ಸ್ಥಳದಲ್ಲಿ ಹಿಂದೂ ದೇವಾಲಯವು ಅಸ್ತಿತ್ವದಲ್ಲಿತ್ತು ಎಂಬ ಹೇಳಿಕೆಗಳನ್ನು ತನಿಖೆ ಮಾಡಲು ಅಧಿಕಾರಿಗಳು ಮಂಗಳವಾರ ಸಂಜೆ ಚಂದೌಸಿ ಪಟ್ಟಣದ ಶಾಹಿ ಜಾಮಾ ಮಸೀದಿಯನ್ನು ಸಮೀಕ್ಷೆ ನಡೆಸಿದ್ದಾರೆ. 500 ವರ್ಷಗಳಷ್ಟು

1526 ರಲ್ಲಿ ಮುಸ್ಲಿಂ ರಾಜರು ದೇವಸ್ಥಾನವನ್ನು ಕೆಡವಿ ಆ ಸ್ಥಳದಲ್ಲಿ ಮಸೀದಿಯನ್ನು ನಿರ್ಮಿಸಿದ್ದಾರೆ ಎಂದು ಆರೋಪಿಸಿ ರಿಷಿರಾಜ್ ಗಿರಿ ಎಂಬ ಹಿಂದೂ ಪೂಜಾರಿಯೊಬ್ಬ ನ್ಯಾಯಾಲಯದ ಮುಂದೆ ಅರ್ಜಿ ಸಲ್ಲಿಸಿದ್ದರು. ಹಾಗಾಗಿ, ಸ್ಥಳೀಯ ನ್ಯಾಯಾಲಯವು ಅಡ್ವೊಕೇಟ್ ಕಮಿಷನರ್ ರಮೇಶ್ ಚಂದ್ ರಾಘವ್



ಅವರನ್ನು ಸಮೀಕ್ಷೆ ನಡೆಸುವಂತೆ ಆದೇಶಿಸಿದೆ. ಸಮೀಕ್ಷೆ ನಡೆಸಲು ಅಧಿಕಾರಿಗಳು ಮಸೀದಿಗೆ ಆಗಮಿಸುತ್ತಿದ್ದಂತೆ, ನೂರಾರು ಮುಸ್ಲಿಮರು ಕ್ರಮವನ್ನು ಪ್ರತಿಭಟಿಸಲು ಜಮಾಯಿಸಿದ್ದಾರೆ. ಶಾಂತಿ ಕಾಪಾಡಲು ಹೆಚ್ಚಿನ ಸಂಖ್ಯೆಯ ಪೊಲೀಸ್ ಸಿಬ್ಬಂದಿಯನ್ನು ನಿಯೋಜಿಸಲಾಗಿದೆ ಎಂದು ಪೊಲೀಸ್ ವರಿಷ್ಠಾಧಿಕಾರಿ ಕೃಷ್ಣ ಕುಮಾರ್ ತಿಳಿಸಿದ್ದಾರೆ.

ಸ್ಥಳೀಯ ಮುಸ್ಲಿಂ ಮುಖಂಡರೊಂದಿಗೆ ಅಧಿಕಾರಿಗಳು ಸಂಪರ್ಕದಲ್ಲಿದ್ದು, ಕೋಮು ಸೌಹಾರ್ದತೆಗೆ ಧಕ್ಕೆಯಾಗುವುದಿಲ್ಲ ಎಂದು ಒಪ್ಪಿಕೊಂಡಿದ್ದಾರೆ ಎಂದು ಜಿಲ್ಲಾಧಿಕಾರಿ ರಾಜೇಂದ್ರ ಪೆನ್ಸಿಯಾ ತಿಳಿಸಿದ್ದಾರೆ. ಸಾಮಾಜಿಕ ಮಾಧ್ಯಮಗಳ ಮೂಲಕ ಅಥವಾ ಯಾವುದೇ ರೀತಿಯಲ್ಲಿ ವದಂತಿಗಳನ್ನು ಹರಡುವುದು ಕಂಡುಬಂದರೆ ಕಾನೂನು ಕ್ರಮವನ್ನು ಎದುರಿಸಬೇಕಾಗುತ್ತದೆ ಎಂದು ಪೆನ್ಸಿಯಾ ಎಚ್ಚರಿಕೆ ನೀಡಿದ್ದಾರೆ.

ನವೆಂಬರ್ 29ರೊಳಗೆ ನ್ಯಾಯಾಲಯ ವರದಿ ಕೇಳಿದ್ದರೂ ತರಾತುರಿಯಲ್ಲಿ ಸರ್ವೆ ನಡೆಸಲಾಗಿದೆ ಎಂದು ಮಸೀದಿ ಆಡಳಿತ ಪರ ವಕೀಲ ಜಾಫರ್ ಅಲಿ ತಿಳಿಸಿದ್ದಾರೆ. ಅಗತ್ಯವಿದ್ದರೆ ನ್ಯಾಯಾಲಯದ ಆದೇಶವನ್ನು ಮಸೀದಿ ಅಧಿಕಾರಿಗಳು ಪ್ರಶ್ನಿಸಲಿದ್ದಾರೆ ಎಂದು ಅವರು ಹೇಳಿದ್ದಾರೆ. ಈ ಕ್ರಮವನ್ನು ಜಮೀಯತ್ ಉಲಮಾ–ಇ–ಹಿಂದ್ ವಿರೋಧಿಸಿದ್ದು, ಅಯೋಧ್ಯೆಯ ಬಾಬರಿ ಮಸೀದಿ ಧ್ವಂಸದ ಗಾಯಗಳಿಂದ ದೇಶ ನರಳುತ್ತಲೇ ಇದೆ ಎಂದು ಎಂದು ಹೇಳಿದ್ದಾರೆ. ಬಾಬರಿ ಮಸೀದಿಯಂತಹ ವಿವಾದಗಳು ಮರುಕಳಿಸದಂತೆ ತಡೆಯಲು 1991 ರಲ್ಲಿ ಪೂಜಾ ಸ್ಥಳಗಳ ವಿಶೇಷ ನಿಬಂಧನೆಗಳ ಕಾಯ್ದೆಯನ್ನು ಪರಿಚಯಿಸಲಾಯಿತು ಎಂದು ಉಲಮಾ ಇ ಹಿಂದ್ ಮುಖ್ಯಸ್ಥ ಮಹಮೂದ್ ಮದನಿ ಹೇಳಿದ್ದಾರೆ.

ಬಾಬರಿ ಮಸೀದಿ ಒಡೆದ ಪ್ರಕರಣದ ತೀರ್ಪಿನಲ್ಲಿ ಸುಪ್ರೀಂ ಕೋರ್ಟ್ ಕೂಡ ಈ ಕಾನೂನಿನ ಮಹತ್ವವನ್ನು ಒತ್ತಿಹೇಳಿದೆ. ಆದಾಗ್ಯೂ, ಇತ್ತೀಚಿನ ನ್ಯಾಯಾಂಗ ಕ್ರಮಗಳಲ್ಲಿ ಈ ಕಾನೂನನ್ನು ಕಡೆಗಣಿಸುತ್ತಿರುವುದು ಆತಂಕಕಾರಿಯಾಗಿದೆ. ಹಿಂದಿನದನ್ನು ಅಗೆಯುತ್ತಲೇ ಇದ್ದರೆ, ಅದಕ್ಕೆ ಅಂತ್ಯವೇ ಇರುವುದಿಲ್ಲ ಎಂದು ಅವರು ಹೇಳಿದ್ದಾರೆ. ಇದೇ ರೀತಿಯ ವಾದಗಳೊಂದಿಗೆ ಬಾಬರಿ ಮಸೀದಿಯನ್ನು 1992 ರಲ್ಲಿ ಹಿಂದೂ ಉಗ್ರಗಾಮಿಗಳು ಧ್ವಂಸಗೊಳಿಸಿದ್ದರು. ಅದರಂತೆ ಕೆಡವಲಾದ ಮಸೀದಿಯ ಸ್ಥಳದಲ್ಲಿ ಈಗ ಬೇರೆ ಕಟ್ಟಡವನ್ನು ನಿರ್ಮಿಸಲು ಸುಪ್ರೀಂಕೋರ್ಟ್ ತೀರ್ಪು ನೀಡಿತ್ತು. ಜನವರಿ 22 ರಂದು ಪ್ರಧಾನಿ ನರೇಂದ್ರ ಮೋದಿ ನೇತೃತ್ವದಲ್ಲಿ ನಡೆದ ಸಮಾರಂಭದಲ್ಲಿ ಈ ಕಟ್ಟಡವನ್ನು ಉದ್ಘಾಟಿಸಲಾಗಿದೆ.

ಬಾಬರಿ ಮಸೀದಿ ಪ್ರಕರಣದ ಸುಪ್ರೀಂ ಕೋರ್ಟ್ನ ತೀರ್ಪು ಭಾರತದಾದ್ಯಂತ ಮುಸ್ಲಿಂ ಪ್ರಾರ್ಥನಾ ಸ್ಥಳಗಳನ್ನು ಗುರಿಯಾಗಿಸಲು ಹಿಂದುತ್ವ ಗುಂಪುಗಳಿಗೆ ಧೈರ್ಯ ನೀಡಿದೆ ಎಂದು ಆಲ್ ಇಂಡಿಯಾ ಮಜ್ಲಿಸ್–ಎ–ಇತ್ತೆಹಾದುಲ್ ಮುಸ್ಲಿಮೀನ್ ಮುಖ್ಯಸ್ಥ ಅಸಾದುದ್ದೀನ್ ಓವೈಸಿ ಹೇಳಿದ್ದಾರೆ. ಚಂಡೌಸಿಯಲ್ಲಿ ನಡೆದ ಸಮೀಕ್ಷೆಯ ವೇಗವನ್ನು ಪ್ರಶ್ನಿಸಿದ ಅವರು, ಸಾಮಾನ್ಯ ಪ್ರಕರಣಗಳಲ್ಲಿ ಇಂತಹ ಕ್ಷಿಪ್ರತನ ಕಂಡುಬರುವುದಿಲ್ಲ ಎಂದು ಟೀಕಿಸಿದ್ದಾರೆ.

ನ್ಯಾಯಾಲಯಗಳು ಇಂತಹ ಆದೇಶಗಳನ್ನು ಮುಂದುವರಿಸಿದರೆ, ಆರಾಧನಾ ಸ್ಥಳಗಳ ಕಾಯಿದೆಯು ಕೇವಲ ಸತ್ತ ಪತ್ರವಾಗಿ ಮಾತ್ರ ಉಳಿಯಲಿದೆ. ಅಂತಹ ಮೊಕದ್ದಮೆಗಳು ನ್ಯಾಯಾಲಯಗಳನ್ನು ತಲುಪುವುದನ್ನು ತಡೆಯಲು ಕೂಡಾ ಈ ಕಾಯಿದೆಯ ಉದ್ದೇಶವಾಗಿದೆ. ಎಂದು ಅವರು ಹೇಳಿದ್ದಾರೆ. 1991ರ ಆರಾಧನಾ ಸ್ಥಳಗಳ ಕಾಯಿದೆಯು, ಪವಿತ್ರ ಸ್ಥಳಗಳ ಧಾರ್ಮಿಕ ಸ್ವರೂಪ ಆಗಸ್ಟ್ 15, 1947ರ ಸ್ವಾತಂತ್ರ್ಯದ ದಿನದಂದು ಹೇಗಿತ್ತೊ, ಹಾಗೆಯೇ ಉಳಿಯಬೇಕು ಎಂಬ ಷರತ್ತು ವಿಧಿಸುತ್ತದೆ. ಆದರೆ ಈ ಕಾನೂನಿನಿಂದ ಬಾಬರಿ ಮಸೀದಿಯನ್ನು ಹೊರಗಿಡಲಾಗಿತ್ತು.

## 16ನೇ ಬಿಜಿಎಸ್ ಸಂಸ್ಥಾಪಕರ ದಿನಾಚರಣೆ-ಬಿಜಿಎಸ್ ಉತ್ಸವಕ್ಕೆ ಚಾಲನೆ



**ಬೆಂಗಳೂರು, ನ. 21 :** ಬಿಜಿಎಸ್ ಆರೋಗ್ಯ ಮತ್ತು ಶಿಕ್ಷಣ ಸಂಸ್ಥೆಯ ಆಶ್ರಯದಲ್ಲಿ ಇಂದು ಎರಡು ದಿನಗಳ ಕಾಲ 16ನೇ ಬಿಜಿಎಸ್ ಸಂಸ್ಥಾಪಕರ ದಿನಾಚರಣೆ ಮತ್ತು ಬಿಜಿಎಸ್ ಉತ್ಸವಕ್ಕೆ ಅದ್ದೂರಿ ಚಾಲನೆ ನೀಡಲಾಯಿತು.

ಇದೇ ವೇಳೆ ಬಿಜಿಎಸ್ ಜಿಮ್‌ನ ಹೊಸ ಆಸ್ಪತ್ರೆ ಮತ್ತು ಹೊಸ ಕಾಲೇಜು ಬ್ಲಾಕ್‌ಗಳಿಗೆ ಶ್ರೀ ಆದಿಚುಂಚನಗಿರಿ ಮಠದ ಪೀಠಾಧ್ಯಕ್ಷರಾದ ಡಾ.ನಿರ್ಮಲಾ ನಂದನಾಥ ಸ್ವಾಮೀಜಿ ಹಾಗೂ ಬಿಜಿಎಸ್ ಮತ್ತು ಎಸ್ಜೆಬಿ ಸಮೂಹ ಶಿಕ್ಷಣ ಸಂಸ್ಥೆಗಳ ಮುಖ್ಯ ವ್ಯವಸ್ಥಾಪಕ ನಿರ್ದೇಶಕರಾದ ಡಾ.ಪ್ರಕಾಶನಾಥ ಸ್ವಾಮೀಜಿ, ಮಲ್ಲೇಶ್ವರಂ ಶಾಸಕ ಡಾ.ಅಶ್ವಥ್ ನಾರಾಯಣ್‌ರವರು ಶಿಲಾನ್ಯಾಸ ನೆರವೇರಿಸಿದರು.

ಬಿಜಿಎಸ್ ಉತ್ಸವದಲ್ಲಿ ಪರಮಪೂಜ್ಯ ಜಗದ್ಗುರು ಶ್ರೀ ಡಾ.ಬಾಲಗಂಗಾಧರನಾಥ ಮಹಾಸ್ವಾಮೀಜಿರವರ ಭಾವಚಿತ್ರಕ್ಕೆ ಅಶ್ವಿನಿ ಪುನೀತ್ ರಾಜ್ ಕುಮಾರ್ ಪುಷ್ಪ ನಮನ ಸಲ್ಲಿಸಿ ಜ್ಯೋತಿ ಬೆಳಗಿಸಿ ಚಾಲನೆ ನೀಡಿದರು.

ಶಿಕ್ಷಣ ಟ್ರಸ್ಟ್‌ನಲ್ಲಿ ಅನನ್ಯ ಸೇವೆಗಾಗಿ ಹಲವು ಗಣ್ಯರನ್ನು ಸೇವಾರತ್ನ ಪ್ರಶಸ್ತಿ ನೀಡಿ ಗೌರವಿಸಲಾಯಿತು. ಕೇಂದ್ರ, ಬೃಹತ್ ಕೈಗಾರಿಕ ಸಚಿವ ಹೆಚ್.ಡಿ. ಕುಮಾರಸ್ವಾಮಿ ಮಾತನಾಡಿ, ಪೂಜ್ಯ ಮೀಜಿಯವರ ದಿವ್ಯ ಶಕ್ತಿಯ ಮುಖಾಂತರ ದೇಶದಲ್ಲಿ ದೊಡ್ಡ ಮಟ್ಟದಲ್ಲಿ ಬಿಜಿಎಸ್ ಶಿಕ್ಷಣ ಸಂಸ್ಥೆ ಬೆಳೆದಿದೆ. ಸಾವಿರಾರು ವಿದ್ಯಾರ್ಥಿಗಳಿಗೆ ಅತ್ಯುನ್ನತ ವಿದ್ಯೆ ನೀಡಿದ ಸಂಸ್ಥೆಯಾಗಿ ನಾಡಿಗೆ ದೊಡ್ಡ ಮಟ್ಟದಲ್ಲಿ ಅಪಾರ ಕೊಡಿಗೆ ನೀಡಿದೆ.

ಒಂದೂವರೆ ಲಕ್ಷಕ್ಕೂ ಹೆಚ್ಚು ವಿದ್ಯಾರ್ಥಿಗಳಿಗೆ ಶಿಕ್ಷಣ ಒದಗಿಸಿವುದು ಶ್ಲಾಘನೀಯ, ಜಾತಿ ಧರ್ಮದ ಭೇದವಿಲ್ಲದೆ ಎಲ್ಲಾ ಸಮುದಾಯವನ್ನು ಮುಖ್ಯ ವಾಹಿನಿಗೆ ತರಲು ಶ್ರಮಿಸುತ್ತಿರುವ ಮಠದ ಸೇವೆ ಅನನ್ಯ ಎಂದು ಬಣ್ಣಿಸಿದರು. ಆರೋಗ್ಯ ಕ್ಷೇತ್ರದಲ್ಲಿ ಹಾಗೂ ಸಂಶೋಧನೆಗೂ, ದೇಶ ವಿದೇಶದಲ್ಲೂ ಉತ್ತಮ ಸಾಧನೆ ತೋರಿರುವುದು, ದೊಡ್ಡ ಮಟ್ಟದ ಕೊಡುಗೆ ನೀಡಿರುವುದು ಶ್ಲಾಘನೀಯ ಎಂದರು. ಸಂಸ್ಥೆ ಇನ್ನಷ್ಟು ಸಮಾಜಕ್ಕೆ ಹಾಗೂ ದೇಶದ ಪ್ರಗತಿಗೆ ದೊಡ್ಡ ಮಟ್ಟದ ಕೊಡುಗೆ ನೀಡಲಿ ಎಂದರು.

ಶ್ರೀ ಆದಿಚುಂಚನಗಿರಿ ಮಠದ ಪೀಠಾಧ್ಯಕ್ಷ ನಿರ್ಮಲಾನಂದ ನಾಥ ಸ್ವಾಮೀಜಿ ಮಾತನಾಡಿ, ವಿದ್ಯಾರ್ಥಿಗಳ ಜ್ಞಾನ ಸಂಪಾದನೆಗಾಗಿ ನಮ್ಮ ನಾಡಿನಲ್ಲಿ ಉನ್ನತ ಶಿಕ್ಷಣ ಲಭಿಸಲು ನೂರಾರು ವಿದ್ಯಾಸಂಸ್ಥೆ ಗಳನ್ನು ಸ್ಥಾಪಿಸಿದ ದಿ. ಶ್ರೀ ಬಾಲಗಂಗಾಧರನಾಥ ಮಹಾಸ್ವಾಮೀಜಿಯ ತ್ಯಾಗದ ಅರ್ಥ ತಿಳಿಸುವ, ಸರಿಸುವ ಕಾರ್ಯಕೆ: ಸೇರಿಸುವ ಕಾರ್ಯಕ್ರಮವೇ ಬಿಜಿಎಸ್ ಸಂಸ್ಥಾಪಕರ ದಿನಾಚರಣೆ ಎಂದರು.

ಹಲವು ಸಾಂಸ್ಕೃತಿಕ

## ನಟ ದರ್ಶನ್‌ಗೆ ಮಧ್ಯಂತರ ಜಾಮೀನು: ನವೆಂಬರ್ 26ಕ್ಕೆ ನಿಗದಿ

**ಬೆಂಗಳೂರು ನ. 21:** ಚಿತ್ರದುರ್ಗದ ರೇಣುಕಾಸ್ವಾಮಿ ಕೊಲೆ ಪ್ರಕರಣದ ಆರೋಪಿಯಾಗಿರುವ ನಟ ದರ್ಶನ್ ಆರೋಗ್ಯಕ್ಕೆ ಸಂಬಂಧಿಸಿದಂತೆ ವೈದ್ಯಕೀಯ ವರದಿಯನ್ನು ಅವರ ಪರ ವಕೀಲರು ಹೈಕೋರ್ಟ್ಗೆ ಸಲ್ಲಿಸಿದ್ದಾರೆ. ರೇಣುಕಾಸ್ವಾಮಿ ಕೊಲೆ ಆರೋಪದಲ್ಲಿ ಜಾಮೀನು ಕೋರಿ ದರ್ಶನ್ ಸಲ್ಲಿಸಿರುವ ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಮೂರ್ತಿ ವಿಶ್ವಜಿತ್ ಶೆಟ್ಟಿ ಅವರಿದ್ದ ನ್ಯಾಯಪೀಠಕ್ಕೆ ಅರ್ಜಿದಾರರ ಪರ ವಕೀಲರು ಮುಚ್ಚಿದ ಲಕೋಟೆಯಲ್ಲಿ ವರದಿ ಸಲ್ಲಿಸಿದರು.

ಈ ವರದಿಗೆ ಸಂಬಂಧಿಸಿದಂತೆ ಆಕ್ಷೇಪಣೆ ಸಲ್ಲಿಸಲು ವಿಶೇಷ ಪಬ್ಲಿಕ್ ಪ್ರಾಸಿಕ್ಯೂಟರ್ (ಎಸ್ಪಿಪಿ) ಪಿ.ಪ್ರಸನ್ನಕುಮಾರ್ ಅವರಿಗೆ ಸೂಚನೆ ನೀಡಿದ ನ್ಯಾಯಪೀಠ, ವಿಚಾರಣೆಯನ್ನು ಮುಂದೂಡಿತು. ವಿಚಾರಣೆ ವೇಳೆ ಎಸ್ಪಿಪಿ ವಾದ ಮಂಡಿಸಿ, ಪ್ರಕರಣ ಸಂಬಂಧ ಹೆಚ್ಚುವರಿ ಆರೋಪ ಪಟ್ಟಿಯನ್ನು ವಿಚಾರಣಾ ನ್ಯಾಯಾಲಯಕ್ಕೆ ಸಲ್ಲಿಕೆ ಮಾಡಲಾಗಿದೆ. ಈ ಸಂಬಂಧ ನ್ಯಾಯಾಲಯ ವಿಚಾರಣೆ ಆರಂಭಿಸಲಿದೆ ಎಂದು ತಿಳಿಸಿದರು. ದರ್ಶನ್ ಆರೋಗ್ಯಕ್ಕೆ ಸಂಬಂಧಿಸಿದಂತೆ ಹೆಚ್ಚುವರಿ ವರದಿ ನಮ್ಮ ಕೈಸೇರಿಲ್ಲ. ಈ ಹಿಂದೆ ನಡೆದ ವಿಚಾರಣೆ ವೇಳೆ ಶಸ್ತ್ರಚಿಕಿತ್ಸೆಗೆ ಒಳಗಾಗಬೇಕು ಎಂದು ಅರ್ಜಿದಾರರು ತಿಳಿಸಿದ್ದಾರೆ. ಆದರೆ, ಯಾವತ್ತು ಶಸ್ತ್ರಚಿಕಿತ್ಸೆ ನಡೆಸಬೇಕು ಎಂಬುದರ ಕುರಿತ ದಿನಾಂಕವನ್ನು ತಿಳಿಸಿಲ್ಲ ಎಂದು ಪೀಠಕ್ಕೆ ವಿವರಿಸಿದರು. ವಾದ ಆಲಿಸಿದ ನ್ಯಾಯಪೀಠ ಅರ್ಜಿಯ ವಿಚಾರಣೆಯನ್ನು ನವೆಂಬರ್ 26ಕ್ಕೆ ನಿಗದಿಪಡಿಸಿತು.

ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ಜೈಲಿನಲ್ಲಿದ್ದ ನಟ ದರ್ಶನ್‌ಗೆ ನಗರದ ಸಿಟಿ ಸಿವಿಲ್ ಮತ್ತು ಸೆಷನ್ಸ್ ನ್ಯಾಯಾಲಯಗಳು ಜಾಮೀನು ತಿರಸ್ಕರಿಸಿದ್ದ ಹಿನ್ನೆಲೆಯಲ್ಲಿ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದರು. ತನಿಖೆ ಈಗಾಗಲೇ ಪೂರ್ಣಗೊಂಡಿದ್ದು, ಹೆಚ್ಚಿನ ತನಿಖೆ ಅಗತ್ಯ ಇಲ್ಲವಾಗಿದೆ. ಹಾಗೆಯೇ, ತಾನು ಬೆನ್ನುಹುರಿ ನೋವಿನಿಂದ ಬಳಲುತ್ತಿದ್ದು, ಅಗತ್ಯ ಚಿಕಿತ್ಸೆ ಪಡೆಯಲು ಜಾಮೀನು ಮಂಜೂರು ಮಾಡಬೇಕು ಎಂದು ಅರ್ಜಿಯಲ್ಲಿ ಕೋರಿದ್ದರು. ದರ್ಶನ್ ಆರೋಗ್ಯ ತಪಾಸಣೆಗಾಗಿ ಹೈಕೋರ್ಟ್ 6 ವಾರಗಳ ಕಾಲ ಷರತ್ತುಬದ್ಧ ಮಧ್ಯಂತರ ಜಾಮೀನು ಮಂಜೂರು ಮಾಡಿತ್ತು.

ಜಾಮೀನು ಅರ್ಜಿಯಲ್ಲಿ ಆರೋಗ್ಯ ತಪಾಸಣೆಗಾಗಿ ಮಧ್ಯಂತರ ಜಾಮೀನು ಮಂಜೂರು ಮಾಡುವಂತೆ ಕೋರಿ ದರ್ಶನ್ ಸಲ್ಲಿಸಿದ್ದ ಅರ್ಜಿ ವಿಚಾರಣೆ ನಡೆಸಿದ ನ್ಯಾಯಮೂರ್ತಿ ವಿಶ್ವಜಿತ್ ಶೆಟ್ಟಿ ಅವರಿದ್ದ ನ್ಯಾಯಪೀಠ 8 ಷರತ್ತುಗಳನ್ನು ವಿಧಿಸಿ ಜಾಮೀನು ನೀಡಿತ್ತು.



ಬೆಂಗಳೂರು ಟೆಕ್ ಶೃಂಗಸಭೆ 2024 ಪ್ರದರ್ಶನಗಳು ಮತ್ತು ಮಳಿಗೆಗಳು ಗುರುವಾರ ಬೆಂಗಳೂರಿನ ಬೆಂಗಳೂರು ಅರಮನೆಯಲ್ಲಿ ಸಂದರ್ಶಕರನ್ನು ಆಕರ್ಷಿಸುತ್ತವೆ

## ಕೃಷ್ಣವೇಣಿ ಮನೆ ಮೇಲೆ ಬೆಳ್ಳಂಬೆಳಿಗ್ಗೆ ಲೋಕಾಯುಕ್ತ ಅಧಿಕಾರಿಗಳ ದಾಳಿ

**ಬೆಂಗಳೂರು ನ. 21 :** ಚಿಕ್ಕಬಳ್ಳಾಪುರ ಗಣಿ ಮತ್ತು ಭೂ ವಿಜ್ಞಾನ ಇಲಾಖೆಯ ಅಧಿಕಾರಿ ಕೃಷ್ಣವೇಣಿಯವರ ಫ್ಲಾಟ್ ಮೇಲೆ ಬೆಳ್ಳಂಬೆಳಿಗ್ಗೆ ಲೋಕಾಯುಕ್ತ ಅಧಿಕಾರಿಗಳು ದಾಳಿಮಾಡಿ ದಾಖಲೆಗಳನ್ನು ಪರಿಶೀಲನೆ ಮಾಡುತ್ತಿರುವ ಬಗ್ಗೆ ವರದಿಯಾಗಿದೆ. ಚಿಕ್ಕಬಳ್ಳಾಪುರ ಜಿಲ್ಲೆಯ ಗಣಿ ಮತ್ತು ಭೂ ವಿಜ್ಞಾನ ಇಲಾಖೆಯ ಅಧಿಕಾರಿಯಾಗಿರುವ ಕೃಷ್ಣವೇಣಿ ರವರಿಗೆ ಸೇರಿದ ಮನೆಯ ಮೇಲೆ ದಾಳಿ ಮಾಡಿರುವ ಲೋಕಾಯುಕ್ತ ಅಧಿಕಾರಿಗಳು ಮನೆಯಲ್ಲಿ ಶೋಧಕಾರ್ಯ ಮುಂದುವರಿಸಿದ್ದು ಮನೆಯಲ್ಲಿರುವ ದಾಖಲೆ ಪತ್ರಗಳು, ಹಣ, ಚಿನ್ನಭರಣ ಲೆಕ್ಕ ಹಾಕುತ್ತಿರುವ ಬಗ್ಗೆ ಮಾಹಿತಿ ಬಂದಿದೆ.

ಹಾಸನದಲ್ಲಿ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಕಚೇರಿ ಮೇಲೆ ಲೋಕಾಯುಕ್ತ ದಾಳಿ ಅಲ್ಲದೆ ಮೈನಿಂಗ್ ಅಧಿಕಾರಿ ಎಂ.




ಸಿ.ಕೃಷ್ಣವೇಣಿ ರವರಿಗೆ ಸೇರಿದ ಯಲಹಂಕ ಬಳಿ ಇರುವ ಫ್ಲಾಟ್ ಮೇಲೆ ದಾಳಿ ಮಾಡಿದ ಅಧಿಕಾರಿಗಳು ದಾಖಲೆ ಪರಿಶೀಲನೆ ನಡೆಸಿದ್ದಾರೆ. ಜೊತೆಗೆ ಮಂಗಳೂರು, ಬೆಂಗಳೂರು ಹಾಗೂ ಮೈಸೂರು ನಲ್ಲಿ ಏಕ ಕಾಲದಲ್ಲಿ ದಾಳಿ ಮಾಡಿರುವ ಅಧಿಕಾರಿಗಳಿಗೆ ಕೋಟ್ಯಂತರ ರೂಪಾಯಿ ಮೌಲ್ಯದ ಅಸ್ತಿ ಪಾಸ್ತಿ ಪತ್ತೆಯಾಗಿರುವ ಬಗ್ಗೆ ಮಾಹಿತಿಯೂ ಇದೆ. ಲೋಕಾಯುಕ್ತ ಅಧಿಕಾರಿಗಳು ರಾಜ್ಯದ ಸುಮಾರು 25 ಕಡೆಗಳಲ್ಲಿ. ಲೋಕಾಯುಕ್ತ ಅಧಿಕಾರಿಗಳು ದಾಳಿ ಮಾಡಿ ಭ್ರಷ್ಟ ಅಧಿಕಾರಿಗಳಿಗೆ ಬಿಸಿ ಮುಟ್ಟಿಸಿದ್ದಾರೆ.

ಬೆಂಗಳೂರು, ಚಿಕ್ಕಬಳ್ಳಾಪುರ, ಮಂಡ್ಯ, ಮಂಗಳೂರು ಸೇರಿದಂತೆ ಹಲವು ಕಡೆ ಲೋಕಾಯುಕ್ತ ಪೊಲೀಸರು ದಾಳಿ ನಡೆಸಿ ಪ್ರಮುಖ ನಾಲ್ವರು ಅಧಿಕಾರಿಗಳ ಕಚೇರಿ ಹಾಗೂ ನಿವಾಸದಲ್ಲಿ ಶೋಧ ನಡೆಸುತ್ತಿದ್ದಾರೆ. ನಾಲ್ವರು ಅಧಿಕಾರಿಗಳಿಗೆ ಸಂಬಂಧಿಸಿದ ಒಟ್ಟು 25 ಕಡೆಗಳಲ್ಲಿ ಏಕಕಾಲಕ್ಕೆ ದಾಳಿ ನಡೆಸಿರುವ ಲೋಕಾಯುಕ್ತ ಅಧಿಕಾರಿಗಳು ದಾಖಲೆಗಳನ್ನು ಪರಿಶೀಲನೆ ಮಾಡುತ್ತಿದ್ದಾರೆ. ಲಂಚ ಸ್ವೀಕರಿಸುವ ವೇಳೆ ಲೋಕಾಯುಕ್ತ ಬಲೆಗೆ ಬಿದ್ದ ಸಾಗರ ತಾಲೂಕು ಕಚೇರಿ ಅಟೆಂಡರ್" ಬೆಂಗಳೂರಿನಲ್ಲಿ ಟೌನ್ ಮತ್ತು ಕಂಟ್ರಿ ಪ್ಲಾನಿಂಗ್ ನಿರ್ದೇಶಕ ತಿಪ್ಪೇಸ್ವಾಮಿ ಮನೆ ಮೇಲೆ ಲೋಕಾಯುಕ್ತ ಅಧಿಕಾರಿಗಳು ದಾಳಿ ನಡೆಸಿದ್ದಾರೆ. ಬೆಂಗಳೂರಿನಲ್ಲಿ ಅಬಕಾರಿ ಇಲಾಖೆ ಎಸ್ಪಿ ಮೋಹನ್ ಮನೆ ಮೇಲೆಯೂ ರೇಡ್ ನಡೆದಿದೆ. ಕಾವೇರಿ ನೀರಾವರಿ ನಿಗಮ ಎಂಡಿ ಮಹೇಶ್, ಸಂಬಂಧಿಕರ ಮನೆ ಮೇಲೆ ದಾಳಿ ಮಾಡಲಾಗಿದೆ.

ಮಂಡ್ಯ ಜಿಲ್ಲೆ ಮಳವಳ್ಳಿಯಲ್ಲಿ ಮಹೇಶ್ ಮನೆ, ಸಂಬಂಧಿಕರ ಮನೆ ಮೇಲೆ ಅಧಿಕಾರಿಗಳು ದಾಳಿ ಮಾಡಿ ಪರಿಶೀಲನೆ ನಡೆಸಿದ್ದಾರೆ. ಮಂಗಳೂರು ಲೋಕಯುಕ್ತ ಎಸ್ಪಿ ನಟರಾಜ್ ನೇತೃತ್ವದಲ್ಲಿ ದಾಳಿ ನಡೆದಿದೆ. ಮಂಗಳೂರು ಹಾಗೂ ಚಿಕ್ಕಬಳ್ಳಾಪುರ ಲೋಕಾಯುಕ್ತ ಅಧಿಕಾರಿಗಳ ತಂಡ ಜಂಟಿಯಾಗಿ ಕಾರ್ಯಾಚರಣೆ ನಡೆಸಿದೆ. ಹನೂರು ನಿವೃತ್ತ ಶಿಕ್ಷಕನ ಬಳಿ 15,000 ಲಂಚಕ್ಕೆ ಬೇಡಿಕೆ ಬಿಇಒ, ಸಿಆರ್‌ಪಿ ಲೋಕಾಯುಕ್ತ ಬಲೆಗೆ" ಅಲ್ಲದೆ ಮಂಡ್ಯದಲ್ಲಿ ಕೋಲಾಯುಕ್ತ ಎಸ್ಪಿ ಸುರೇಶ್ ಬಾಬು ನೇತೃತ್ವದಲ್ಲಿ ದಾಳಿ ಮಾಡಲಾಗಿದೆ. ಒಟ್ಟು ಏಳು ಕಡೆಗಳಲ್ಲಿ ಲೋಕಾಯುಕ್ತ ಅಧಿಕಾರಿಗಳು ದಾಳಿನಡೆಸಿದ್ದಾರೆ.

## ಯಾರಿಗೆ ವಿಜಯ ಮಾಲೆ, ಯಾರಿಗೆ ಸೋಲು ಎಂಬ ಕುತೂಹಲ

**ಬೆಂಗಳೂರು, ನ.21 :** ಚನ್ನಪಟ್ಟಣ, ಸಂಡೂರು ಮತ್ತು ಶಿಗ್ಗಾವಿ ಕ್ಷೇತ್ರಗಳ ಉಪಚುನಾವಣೆಯ ಮತ ಎಣಿಕೆ ಶನಿವಾರ ನಡೆಯಲಿದ್ದು, ಯಾರಿಗೆ ವಿಜಯ ಮಾಲೆ, ಯಾರಿಗೆ ಸೋಲು ಎಂಬ ಕುತೂಹಲ ತೀವ್ರಗೊಂಡಿದೆ. ಮತದಾನೋತ್ತರ ಸಮೀಕ್ಷೆ ಏನೇ ಇದ್ದರೂ ಮೂರು ಪಕ್ಷಗಳ ಅಭ್ಯರ್ಥಿಗಳು ಗೆಲುವಿನ ಉತ್ಸಾಹದಲ್ಲಿದ್ದಾರೆ. ಭಾರೀ ಜಿದ್ದಾಜಿದ್ದಿನ ಪೈಪೋಟಿಗೆ ಕಾರಣವಾಗಿರುವ ಚೆನ್ನಪಟ್ಟಣದಲ್ಲಿ ಜೆಡಿಎಸ್ ನ ನಿಖಿಲ್ ಕುಮಾರ ಸ್ವಾಮಿ ಗೆಲುವು ಸಾಧಿಸಲಿದ್ದಾರೆ ಎಂದು ಸಮೀಕ್ಷೆಗಳು ಹೇಳಿವೆ. ಹೀಗಾಗಿ ಜೆಡಿಎಸ್ ಪಾಳಯದಲ್ಲಿ ರಣೋತ್ಸಾಹ ಕಂಡು ಬಂದಿದೆ. ಆದರೆ ಕಾಂಗ್ರೆಸ್ ಅಭ್ಯರ್ಥಿ, ಮಾಜಿ ಸಚಿವ ಸಿ.ಪಿ. ಯೋಗೇಶ್ವರ್ ಮಾತ್ರ ವಿಚಲಿತರಾಗಿಲ್ಲ. ಫೋಟೋ ಫಿನಿಶ್‌ನಲ್ಲಿ ಗೆಲುವು ಸಾಧಿಸುವ ಅದಮ್ಯ ವಿಶ್ವಾಸದಲ್ಲಿದ್ದಾರೆ. ಕ್ಷೇತ್ರದ ಬಗ್ಗೆ, ಮತದಾರರ ಒಲವು, ನಿಲುವುಗಳ ಬಗ್ಗೆ ಸಮಗ್ರವಾಗಿ ಅಧ್ಯಯನ ಮಾಡಿರುವ ಯೋಗೇಶ್ವರ್ ಗೆಲುವು ತಮ್ಮದೇ ಎನ್ನುತ್ತಿದ್ದಾರೆ.

ಯೋಗೇಶ್ವರ್ ಆಪ್ತ ಬಣ ಕೂಡ ಎದೆಗುಂದಿಲ್ಲ ಎಂಬುದು ವಿಶೇಷ. ಚನ್ನಪಟ್ಟಣದಲ್ಲಿ ಕಾಂಗ್ರೆಸ್ನ ಸಿ ಪಿ ಯೋಗೇಶ್ವರ್ ಮತ್ತು ಮಾಜಿ ಪ್ರಧಾನಿ ಎಚ್.ಡಿ ದೇವೇಗೌಡರ ಮೊಮ್ಮಗ ಹಾಗೂ ಕೇಂದ್ರ ಸಚಿವ ಎಚ್ ಡಿ ಕುಮಾರಸ್ವಾಮಿ ಪುತ್ರ ನಿಖಿಲ್ ಕುಮಾರಸ್ವಾಮಿ ನಡುವಿನ ಹೈವೋಲ್ಟೇಜ್ ಫೈಟ್ ಫೋಟೋ ಫಿನಿಶ್‌ನಲ್ಲಿ ಕೊನೆಗೊಳ್ಳುವ ಸಾಧ್ಯತೆ ಇದೆ. ಯೋಗೇಶ್ವರ ಅವರೇ ಈ ಬಗ್ಗೆ ಭವಿಷ್ಯ ನುಡಿದಿದ್ದರು. ವಸತಿ ಸಚಿವ ಝುಮೀರ್ ಅಹ್ಮದ್ ಖಾನ್ ಅವರು ಕುಮಾರಸ್ವಾಮಿ ವಿರುದ್ಧ ಮಾಡಿದ ಜನಾಂಗೀಯ ನಿಂದನೆ ಹೇಳಿಕೆಗಳು ಫಲಿತಾಂಶದ ಮೇಲೆ ಪರಿಣಾಮ ಬೀರಿದೆಯೇ, ಅದು ನಿಖಿಲ್ ಅಥವಾ ಯೋಗೇಶ್ವರ ಅವರಿಗೆ ಒಲವು ತೋರಿದೆಯೇ ಎಂಬುದು ಫಲಿತಾಂಶದ ನಂತರ ತಿಳಿಯಲಿದೆ. ಉಪಚುನಾವಣೆ ಫಲಿತಾಂಶ ಪ್ರಕಟವಾಗಲು ಕ್ಷಣಗಣನೆ ಆರಂಭವಾಗಿದ್ದು, ಕಾಂಗ್ರೆಸ್ ಪಾಳಯದಲ್ಲಿ ಉತ್ಸಾಹ ಮೂಡಿದ್ದು, ಮೂರೂ ಸ್ಥಾನಗಳನ್ನು ಗೆಲ್ಲುವ ನಿರೀಕ್ಷೆಯಲ್ಲಿದೆ.

ಎರಡು ಸ್ಥಾನಗಳಲ್ಲಿ ಪ್ರಬಲ ಸ್ಪರ್ಧೆಯಿದ್ದು ಫಲಿತಾಂಶದ ಲೆಕ್ಕಾಚಾರ ತಲೆಕೆಳಗಾಗುವ ಸಾಧ್ಯತೆಯಿದೆ ಎಂದು ರಾಜಕೀಯ ವಿಶ್ಲೇಷಕರು ಹೇಳಿದ್ದಾರೆ. ಬಿಜೆಪಿ, ಕಾಂಗ್ರೆಸ್ ಮತ್ತು ಜೆಡಿಎಸ್ ತಲಾ ಒಂದನ್ನು ಗೆಲ್ಲುವ ಸಾಧ್ಯತೆಯಿದೆ ಎಂಬುದು ರಾಜಕೀಯ ಪಂಡಿತರ ಅಭಿಪ್ರಾಯವಾಗಿದೆ. ನವೆಂಬರ್ 13 ರಂದು ಮತದಾನ ನಡೆದಿದ್ದು, ನ.23 ರಂದು ಮತ ಎಣಿಕೆ ನಡೆಯಲಿದೆ. ಸಂಡೂರಿನಲ್ಲಿ ಬಿಜೆಪಿಯಲ್ಲಿನ ಆಂತರಿಕ ಕಚ್ಚಾಟವನ್ನು ಕಾಂಗ್ರೆಸ್ ಲಾಭವಾಗಿಸಿಕೊಂಡಿದೆ. ಬಿಜೆಪಿ ಮಾಜಿ ಸಚಿವ ಜನಾರ್ದನ ರೆಡ್ಡಿಗೆ ಸಂಡೂರು ಉಪ ಚುನಾವಣೆ ಗೆಲ್ಲುವ ಜವಾಬ್ದಾರಿಯನ್ನು ನೀಡಿತ್ತು. ಆದರೆ ಗಂಗಾವತಿ ಶಾಸಕ ಗಾಲಿ ಜನಾರ್ದನ ರೆಡ್ಡಿ ಸ್ಥಳೀಯ ಕೆಲ ಮುಖಂಡರ ಮನಗೆದ್ದಿಲ್ಲ ಎಂಬ ಆರೋಪ ಕೇಳಿ ಬಂದಿದೆ. ಬಳ್ಳಾರಿ ಸಂಸದ ಇ.ತುಕಾರಾಂ ಅವರ ಪತ್ನಿ, ಕಾಂಗ್ರೆಸ್ ಅಭ್ಯರ್ಥಿ ಇ ಅನ್ನಪೂರ್ಣ ಅವರಿಗೆ ಇದು ವರವಾಗಿದೆ ಎಂದು ಕಾಂಗ್ರೆಸ್ ಮುಖಂಡರೊಬ್ಬರು ವಿಶ್ವಾಸ ವ್ಯಕ್ತಪಡಿಸಿದರು.

ಬಿಜೆಪಿಯ ಬಂಗಾರು ಹನುಮಂತು ಪ್ರಬಲ ಪೈಪೋಟಿ ನೀಡಿದ್ದರೂ ಬೆಟ್ಟಿಂಗ್ ಕಟ್ಟುವವರಿಗೆ ಅನ್ನಪೂರ್ಣ ಫೇವರಿಟ್ ಆಗಿದ್ದಾರೆ ಎಂದು ಮೂಲಗಳು ತಿಳಿಸಿವೆ. ಇನ್ನೂ ಶಿಗ್ಗಾಂವಿಯಲ್ಲಿ ಚುನಾವಣಾ ಸನ್ನಿವೇಶ ಸಂಪೂರ್ಣ ಬದಲಾಗಿದೆ. ಆರಂಭದಲ್ಲಿ ಭರತ್ ಪರವಾಗಿ ಏಕಪಕ್ಷೀಯವಾಗಿ ಕಾಣುತ್ತಿದ್ದ ಸ್ಪರ್ಧೆ ಕ್ರಮೇಣ ಟ್ವಿಸ್ಟ್ ಪಡೆಯಿತು. ಈ ಹಿಂದೆ ಕಾಂಗ್ರೆಸ್ನ ಮತ್ತೋರ್ವ ಆಕಾಂಕ್ಷಿಯಾಗಿದ್ದ ಸೈಯದ್ ಅಜೀಂಪೀರ್ ಖಾದ್ರಿ ಅವರಿಗೆ ಟಿಕೆಟ್ ನೀಡದಿದ್ದಕ್ಕೆ ಬೇಸರಗೊಂಡಿದ್ದರು, ಆದರೆ ನಂತರ ಬಿಜೆಪಿಯಲ್ಲಿ ಆಂತರಿಕ ಕಚ್ಚಾಟ ನಡೆದಿದ್ದರಿಂದ ಪರಿಸ್ಥಿತಿ ಕಾಂಗ್ರೆಸ್ ಪರವಾಗಿ ತಿರುಗಿತು ಎಂದು ಮೂಲಗಳು ತಿಳಿಸಿವೆ.

2024ರ ಲೋಕಸಭೆ ಚುನಾವಣೆಯಲ್ಲಿ ಧಾರವಾಡ ಲೋಕಸಭಾ ಕ್ಷೇತ್ರಕ್ಕೆ ಒಳಪಡುವ ಬೊಮ್ಮಾಯಿ ಅವರಿದ್ದ ಶಿಗ್ಗಾಂವ ವಿಧಾನಸಭಾ ಕ್ಷೇತ್ರದಲ್ಲಿ ಕಾಂಗ್ರೆಸ್ 8,500 ಮತಗಳ ಮುನ್ನಡೆ ಸಾಧಿಸಿತ್ತು. ಆದರೆ, ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಗೆಲುವು ಸಾಧಿಸುವಲ್ಲಿ ಯಶಸ್ವಿಯಾದರು. ಇದೇ ರೀತಿ ಮುಂದುವರಿದರೆ ಶಿಗ್ಗಾಂವ್ನಲ್ಲಿ ಫೋಟೊ ಫಿನಿಶ್ ಆಗಲಿದೆ ಎಂದು ಬಲ್ಲ ಮೂಲಗಳು ತಿಳಿಸಿವೆ. 2023ರ ವಿಧಾನಸಭಾ ಚುನಾವಣೆ ಫಲಿತಾಂಶ ಗಮನಿಸಿದರೇ ಎಲ್ಲಾ ಮೂರು ಪಕ್ಷಗಳು ತಲಾ ಒಂದು ಸ್ಥಾನವನ್ನು ಗೆಲ್ಲುವ ಸಾಧ್ಯತೆಯಿದೆ ಎಂದು ರಾಜಕೀಯ ವಿಶ್ಲೇಷಕರು ಹೇಳಿದ್ದಾರೆ. ಸಂಡೂರು ಹೊರತು ಪಡಿಸಿ ಶಿಗ್ಗಾಂವ್ ಮತ್ತು ಚನ್ನಪಟ್ಟಣದಲ್ಲಿ ಎನ್ ಡಿ ಎ ಅಭ್ಯರ್ಥಿ ಗೆಲ್ಲಬಹುದು ಎಂದು ಬಿಜೆಪಿ ನಾಯಕರು ತಿಳಿಸಿದ್ದಾರೆ.

## ಬಿಪಿಎಲ್ ಕಾರ್ಡ್ ರದ್ದು ಮಾಡಿಲ್ಲ: ಎಂ.ಲಕ್ಷ್ಮಣ್



**ಮೈಸೂರು, ನ.21 :** ಸ್ನೇಹಮಯಿ ಕೃಷ್ಣ ಈಗ ಹುಚ್ಚರಾಗಿದ್ದಾರೆ. ರಾತ್ರಿ ವೇಳೆಯಲ್ಲೂ ಲೋಕಾಯುಕ್ತ ಕಚೇರಿಯ ಸುತ್ತ ಸುತ್ತುತ್ತಿದ್ದಾರೆ. ಅವರ ಇನ್ನೊಂದು ಆಡಿಯೋ ನನಗೆ ಸಿಕ್ಕಿದೆ. ಈ ಬಗ್ಗೆ ಕಾನೂನಾತ್ಮವಾಗಿ ಹೋರಾಟ ಮಾಡುತ್ತೇನೆ. ಸ್ನೇಹಮಯಿ ಕೃಷ್ಣ ವಿರುದ್ಧ ಮತ್ತೊಂದು ದೂರನ್ನ ದಾಖಲಿಸುತ್ತೇನೆ ಎಂದು ಕೆಪಿಸಿಸಿ ಮಾಧ್ಯಮ ವಕ್ತಾರ ಎಂ. ಲಕ್ಷ್ಮಣ್ ಹೇಳಿದ್ದಾರೆ.

ನಗರದ ಕಾಂಗ್ರೆಸ್ ಭವನದಲ್ಲಿ ಮಾಧ್ಯಮಗೋಷ್ಠಿ ನಡೆಸಿ ಮಾತನಾಡಿದ ಅವರು, ಕೆ.ಆರ್ ಕ್ಷೇತ್ರದ ಶಾಸಕ ಶ್ರೀವತ್ಸ, ಸಿಎಂ ಸಿದ್ದರಾಮಯ್ಯ ಅವರು ಮುಡಾದ 14 ಸೈಟಗಳನ್ನ ವಾಪಸ್ ಕೊಡುವವರೆಗೆ ಹೋರಾಟ ಮಾಡಿ ಈಗ ಸುಮ್ಮನಿದ್ದಾರೆ ಎಂದರು. ಬಿಜೆಪಿ ರಾಜ್ಯದಲ್ಲಿ ಬಿಪಿಎಲ್ ಕಾರ್ಡ್ ರದ್ದತಿ ಬಗ್ಗೆ ಜನರಲ್ಲಿ ಗೊಂದಲ ಸೃಷ್ಟಿ ಮಾಡುತ್ತಿದೆ. ಬಿಪಿಎಲ್ ಕಾರ್ಡ್ ಅನ್ನು ರದ್ದು ಮಾಡಿಲ್ಲ, ಬದಲಾಯಿಸಿದ್ದೇವೆ ಅಷ್ಟೇ. ಆದರೆ ಬಿಜೆಪಿಯವರು ರಾಜ್ಯದ ಜನರಿಗೆ ಈ ವಿಚಾರದಲ್ಲಿ ಗೊಂದಲ ಉಂಟು ಮಾಡುತ್ತಿದ್ದಾರೆ ಎಂದು ಹೇಳಿದರು. ಬಿಪಿಎಲ್‌ನಿಂದ ಎಪಿಎಲ್‌ಗೆ ವರ್ಗಾವಣೆ ಮಾಡಲು ಐದು ಮಾನದಂಡಗಳನ್ನು ಕೇಂದ್ರ ಸರ್ಕಾರ ನೀಡಿದೆ. ಅದರಲ್ಲಿ ಐಟಿ ರಿಟರ್ನ್ಸ್ ಆಗಿರಬಾರದು. 8 ಎಕರೆಗಿಂತ ಹೆಚ್ಚು ಜಮೀನು ಇರಬಾರದು. ಕಾರು ಹೊಂದಿರಬಾರದು. ಜತೆಗೆ ವಾರ್ಷಿಕ ವರಮಾನ 2 ಲಕ್ಷ ರೂ. ಮೀರುವಂತೆ ಇರಬಾರದು ಎಂಬ ಮಾನದಂಡದಲ್ಲಿ ಬಿಪಿಎಲ್ ಕಾರ್ಡಗಳನ್ನು ರದ್ದು ಮಾಡುವಂತೆ ರಾಜ್ಯಕ್ಕೆ ಕೇಂದ್ರ ಸರ್ಕಾರ ಸೂಚನೆ ನೀಡಿದೆ.

ರಾಜ್ಯ ಸರ್ಕಾರ 80 ಸಾವಿರ ಬಿಪಿಎಲ್ ಕಾರ್ಡಗಳನ್ನು ಎಪಿಎಲ್ ಕಾರ್ಡಗಳಾಗಿ ಪರಿವರ್ತನೆ ಮಾಡಿದೆ. ಇದನ್ನೇ ಇಟ್ಟುಕೊಂಡು ಬಿಜೆಪಿಯವರು ಜನರ ದಿಕ್ಕು ತಪ್ಪಿಸುತ್ತಿದ್ದಾರೆ ಎಂದು ಆರೋಪಿಸಿದರು.

ಪ್ರತಾಪ್ ಸಿಂಹ ವಕ್ಫ್ ಬೋರ್ಡ್ ವಿಚಾರದಲ್ಲಿ ಜನರಿಗೆ ಸುಳ್ಳನ್ನ ಹೇಳುತ್ತಿದ್ದಾರೆ. ಅವರು ಮುಕ್ತವಾಗಿ ಚರ್ಚೆಗೆ ಬರಲಿ. ವಕ್ಫ್ ಹೆಸರಿನಲ್ಲಿ ಸ್ಮಶಾನ, ದೇವಸ್ಥಾನಗಳನ್ನ ಕಬಳಿಸಲು ಯತ್ನಿಸುತ್ತಿದ್ದಾರೆ ಎಂಬ ಆರೋಪ ಸರಿಯಲ್ಲ ಎಂದು ಲಕ್ಷ್ಮಣ್ ವಾಗ್ದಾಳಿ ನಡೆಸಿದರು.

## ಕೆಪಿಟಿಸಿಎಲ್ ಹುದ್ದೆಗಳಿಗೆ ಅರ್ಜಿ – ಶುಲ್ಕ ಪಾವತಿ ದಿನಾಂಕ ವಿಸ್ತರಣೆ

**ಬೆಂಗಳೂರು, ನ. 21 :** ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ ಮತ್ತು ಎಸ್ಕಾಂಗಳಲ್ಲಿ ಕೈಗೊಳ್ಳಲಾಗಿರುವ ಕಿರಿಯ ಸ್ಟೇಷನ್ ಪರಿಚಾರಕ ಮತ್ತು ಕಿರಿಯ ಪವರ್ ಮ್ಯಾನ್ ಹುದ್ದೆಗಳ ನೇಮಕಾತಿಗೆ, ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳಿಗೆ ಇ–ಸಹಿ ಮಾಡಿ ಅಂಚೆ ಚಲನ್ ಪಡೆಯುವ ದಿನಾಂಕವನ್ನು ಹಾಗೂ ಅರ್ಜಿ ಶುಲ್ಕ ಪಾವತಿ ಮಾಡುವ ದಿನಾಂಕವನ್ನು ಕ್ರಮವಾಗಿ ಡಿ.5 ಹಾಗೂ ಡಿ. 10 ರವರೆಗೆ ವಿಸ್ತರಿಸಲಾಗಿದೆ.

ಕೆಪಿಟಿಸಿಎಲ್ ಹಾಗೂ ಎಸ್ಕಾಂಗಳಲ್ಲಿ ಸದರಿ ಹುದ್ದೆಗಳ ಭರ್ತಿಗಾಗಿ 2024ರ ಅಕ್ಟೋಬರ್ 14ರಂದು ಉದ್ಯೋಗ ಪ್ರಕಟಣೆ ಹೊರಡಿಸಲಾಗಿತ್ತು. ಅದರಂತೆ, ನೇಮಕಾತಿಗೆ ಅರ್ಜಿ ಸಲ್ಲಿಸಲು 2024ರ ನವೆಂಬರ್ 20 ಹಾಗೂ ಅರ್ಜಿ ಶುಲ್ಕ ಪಾವತಿಸಲು ನವೆಂಬರ್ 25ಕ್ಕೆ ಕೊನೆಯ ದಿನಾಂಕವೆಂದು ನಿಗದಿ ಪಡಿಸಲಾಗಿತ್ತು.

ಆನ್‌ಲೈನ್ ಅರ್ಜಿ ಸಲ್ಲಿಸುವ ಪ್ರಕ್ರಿಯೆಯನ್ನು ಅಭ್ಯರ್ಥಿಗಳು ಹಂತ ಹಂತವಾಗಿ ಮಾಡಬೇಕಿದ್ದು, ಅರ್ಜಿ ನಮೂನೆಯಲ್ಲಿ ಮಾಹಿತಿ ಸಲ್ಲಿಸುವುದು, ಅರ್ಜಿ ಶುಲ್ಕ ಪಾವತಿಗೆ ಅಂಚೆ ಇಲಾಖೆಯ ಚಲನ್ ಡೌನ್ಲೋಡ್ ಮಾಡಿಕೊಂಡು ಅರ್ಜಿ ಶುಲ್ಕ ಪಾವತಿಸಬೇಕಿದೆ. ಅದಕ್ಕೂ ಮುನ್ನ ಅಭ್ಯರ್ಥಿಗಳು ಇ–ಸಹಿ ಪ್ರಕ್ರಿಯ ಪೂರ್ಣಗೊಳಿಸಬೇಕಿರುತ್ತದೆ. ಆದರೆ, ನಿಗದಿಪಡಿಸಿದ ಅವಧಿಯಲ್ಲಿ ಈ ಪ್ರಕ್ರಿಯೆ ಪೂರ್ಣಗೊಳಿಸಲು ಸಾಧ್ಯವಾಗುತ್ತಿಲ್ಲ ಎಂದು ಹಲವು ಅಭ್ಯರ್ಥಿಗಳು ತಿಳಿಸಿರುವ ಹಿನ್ನೆಲೆಯಲ್ಲಿ, ದಿನಾಂಕವನ್ನು ವಿಸ್ತರಿಸಲಾಗಿದೆ ಎಂದು ಕಪಿಟಿಸಿಎಲ್ ಪ್ರಕಟಣೆ ತಿಳಿಸಿದೆ.

ಅಭ್ಯರ್ಥಿಗಳ ಮನವಿ ಪರಿಗಣಿಸಿ ಅರ್ಜಿ ಸಲ್ಲಿಕೆಯ ಮೊದಲೆರಡು ಹಂತ ಪೂರ್ಣಗೊಳಿಸಿರುವಂತಹ ಅಭ್ಯರ್ಥಿಗಳಿಗೆ ಸೀಮಿತೊಳಿಸಿ, ಇ–ಸಹಿ ಪ್ರಕ್ರಿಯೆ, ಅಂಚೆ ಕಚೇರಿ ಚಲನ್ ಡೌನ್ಲೋಡ್ ಮತ್ತು ಅರ್ಜಿ ಶುಲ್ಕ ಪಾವತಿ ದಿನಾಂಕಗಳನ್ನು ವಿಸ್ತರಿಸಲಾಗಿದೆ. ಎಂದು ಕೆಪಿಟಿಸಿಎಲ್‌ನ ವ್ಯವಸ್ಥಾಪಕ ನಿರ್ದೇಶಕ ಪಂಕಜ್ ಕುಮಾರ್ ಪಾಂಡೆ ತಿಳಿಸಿದ್ದಾರೆ. ವಿಸ್ತರಿಸಲಾಗಿರುವ ಅವಧಿಯ ಸದುಪಯೋಗ ಪಡೆದು, ಅಭ್ಯರ್ಥಿಗಳು ತಮ್ಮ ಅರ್ಜಿ ಸಲ್ಲಿಕೆಯ ಪ್ರಕ್ರಿಯೆಯನ್ನು ಅಂತಿಮಗೊಳಿಸುವಂತೆ ಮತ್ತು ಅರ್ಜಿ ಶುಲ್ಕ ಪಾವತಿಸುವಂತೆ ಕೋರಲಾಗಿದೆ.

## ಧರ್ಮಾಚರಣೆಯಿಂದ ಸುಖ-ಶಾಂತಿ ಪ್ರಾಪ್ತಿ : ಶ್ರೀ ರಂಭಾಪುರಿ ಜಗದ್ಗುರುಗಳು



**ಬಸವಾಪಟ್ಟಣ, ನ. 21 :** ಮನುಷ್ಯ ಯಾವಾಗಲೂ ಸುಖಾಪೇಕ್ಷಿ. ಸುಖ ಶಾಂತಿ ಜೀವನ ಪ್ರಾಪ್ತವಾಗಲು ಮೊದಲು ಧರ್ಮಾಚರಣೆಯನ್ನು ಮಾಡಬೇಕಾಗುತ್ತದೆ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಗುರುವಾರ ತೊಟ್ಟಿಮನೆ ವಂಶಸ್ಥರು ನಿರ್ಮಿಸಿದ ಶ್ರೀ ಗಂಗಾಧರೇಶ್ವರಸ್ವಾಮಿ ನೂತನ ದೇವಾಲಯ ಉದ್ಘಾಟಿಸಿ ಪ್ರಾಣ ಪ್ರತಿಷ್ಠಾಪನೆ ನೆರವೇರಿಸಿ ನಂತರ ಜರುಗಿದ ಧರ್ಮ ಜಾಗೃತಿ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.


ಬಾಳ ಬದುಕಿಗೆ ಧರ್ಮದ ಬೆಳಕು ಬೇಕು. ಬೆಳಕಿಲ್ಲದ ಬಾಳಿಗೆ ಬೆಲೆ ನೆಲೆಯಿಲ್ಲ. ಬೆಳಕಿದ್ದರೆ ಯಾವುದರ ಭಯವೂ ಮನುಷ್ಯನಿಗೆ ಇರುವುದಿಲ್ಲ. ಇಹ ಪರ ಜೀವನದ ಶ್ರೇಯಸ್ಸಿಗೆ ಧರ್ಮವೇ ಮೂಲವೆಂದು ಶ್ರೀ ಜಗದ್ಗುರು ರೇಣುಕಾಚಾರ್ಯರು ನಿರೂಪಿಸಿದ್ದಾರೆ. ಅಹಿಂಸಾದಿ ಧ್ಯಾನ ಪರ್ಯಂತರವಾದ ದಶಧರ್ಮ ಸೂತ್ರಗಳು ಬದುಕಿ ಬಾಳುವ ಜನಾಂಗಕ್ಕೆ ದಾರಿದೀಪ. ಅರಿವಿನ ದಾರಿಯಲ್ಲಿ ಮುನ್ನಡೆಸುವುದೇ ಗುರುವಿನ ಪರಮ ಧರ್ಮವಾಗಿದೆ. ಒಂದು ನಿಶ್ಚಿತ ಗುರಿ ಮತ್ತು ಒಬ್ಬ ಶ್ರೇಷ್ಠ ಗುರುವಿನ ಸಹಯೋಗದಿಂದ ಬದುಕು ಉಜ್ವಲಗೊಳ್ಳುತ್ತದೆ. ಸುಖ ಬಯಸುವ ಮನುಷ್ಯ ಧರ್ಮಾಚರಣೆ ಮಾಡಲು ಹಿಂಜರಿಯುತ್ತಾನೆ. ದು:ಖವನ್ನು ಯಾರೂ ಬಯಸುವುದಿಲ್ಲ. ಆದರೆ ಧರ್ಮ ಪರಿಪಾಲನೆ ಮಾಡಲಾರನು. ಸತ್ಯ ಶುದ್ಧ ಸೈದ್ಧಾಂತಿಕ ತಳಹದಿಯ ಮೇಲೆ ಮಾನವ ಜೀವನ ರೂಪಿತಗೊಳ್ಳಬೇಕಾಗಿದೆ.

ತೊಟ್ಟಿಮನೆ ವಂಶಸ್ಥರು ಧರ್ಮ ದೇವರು ಮತ್ತು ಗುರುವಿನಲ್ಲಿ ಅಪಾರ ಶ್ರದ್ಧಾ ನಿಷ್ಠೆಯನ್ನು ಹೊಂದಿದವರು. ಅವರ ಆ ದೈವ ಭಕ್ತಿಯಿಂದಾಗಿ ಇಷ್ಟೊಂದು ಉತ್ತಮ ಕಾರ್ಯ ಮಾಡಲು ಸಾಧ್ಯವಾಗಿದೆ ಎಂದರು.

ಕರ್ಪೂರವಳ್ಳಿ ಚಂದ್ರಶೇಖರ ಶಿವಾಚಾರ್ಯರು ಸಮಾರಂಭದಲ್ಲಿ ಪಾಲ್ಗೊಂಡಿದ್ದರು. ಬಿ.ಸಿ.ನಂಜುಂಡ ಶೆಟ್ಟಿ, ಬಿ.ಎಸ್.ಮಹದೇವಪ್ಪ, ಬಿ.ಜಿ.ಕರುಣೇಶ್, ಬಿ.ಜಿ.ಶ್ರೀಕಂಠಶೆಟ್ಟಿ, ಬಿ.ಜಿ.ಷಡಕ್ಷರಶೆಟ್ಟರ ಹಾಗೂ ಬಿ.ಜಿ.ದೊಡ್ಡೇಶ ಬಾಬು ಮೊದಲಾದವರು ಉಪಸ್ಥಿತರಿದ್ದು ಶ್ರೀ ರಂಭಾಪುರಿ ಜಗದ್ಗುರುಗಳ ಆಶೀರ್ವಾದ ಪಡೆದರು. ತೊಟ್ಟಿಮನೆ ಮಹದೇವಪ್ಪನವರು ಸರ್ವರನ್ನು ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು.

ಸಮಾರಂಭಕ್ಕೂ ಮುನ್ನ ನೂತನ ದೇವಾಲಯದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು ಇಷ್ಟಲಿಂಗ ಮಹಾಪೂಜೆಯನ್ನು ನೆರವೇರಿಸಿದರು.

## ಬೆಂಗಳೂರು ತಂತ್ರಜ್ಞಾನ ಶೃಂಗಸಭೆಯಲ್ಲಿ ಭಾರತದ ಮೊದಲ ಜಿಸಿಸಿ ನೀತಿಯ ಬಿಡುಗಡೆ



**ಬೆಂಗಳೂರು ನ. 21 :** 27 ವರ್ಷಗಳಲ್ಲಿ ಮೊದಲ ಬಾರಿಗೆ ಎಲೆಕ್ಟ್ರಾನಿಕ್ಸ್ ಮತ್ತು ಸೆಮಿಕಂಡಕ್ಟರ್ ಟ್ರ್ಯಾಕ್ ಅನ್ನು ಪರಿಚಯಿಸುವ ಮೂಲಕ ಐತಿಹಾಸಿಕ ಮೈಲಿಗಲ್ಲನ್ನು ಸಾಧಿಸಲಾಗಿದೆ ಎಂದು ಇಂಡಿಯನ್ ಎಲೆಕ್ಟ್ರಾನಿಕ್ ಮತ್ತು ಸೆಮಿಕಂಡಕ್ಟರ್ ಅಸೋಸಿಯೇಷನ್ ಅಧ್ಯಕ್ಷ ಅಶೋಕ್ ಚಂದಕ್ ಹೇಳಿದರು. 2024ರ ಬೆಂಗಳೂರು ತಂತ್ರಜ್ಞಾನ ಶೃಂಗಸಭೆಯ ಅಂತಿಮ ದಿನವಾದ ಮಾತನಾಡಿದ ಅವರು, ಎಲೆಕ್ಟ್ರಾನಿಕ್ಸ್ ಮತ್ತು ಸೆಮಿಕಂಡಕರ್‌ಗಳ ವಿನ್ಯಾಸ ಮತ್ತು ಉತ್ಪಾದನೆಯಲ್ಲಿ ಕರ್ನಾಟಕ ಮತ್ತು ಭಾರತದ ನಾಯಕತ್ವವನ್ನು ಟೆಕ್ ಸಮ್ಮಿಟ್ ಒತ್ತಿ ಹೇಳಿದೆ. ಇಲ್ಲಿನ ಎಲೆಕ್ಟ್ರೋ–ಸೆಮಿಕಾನ್ ಟ್ರ್ಯಾಕ್ನ ಸರ್ಕ್ಯೂಟ್ ಹಂತ ನಾವೀನ್ಯತೆಯನ್ನು ಹೆಚ್ಚಿಸಲು, ಬೆಳವಣಿಗೆಯನ್ನು ಉತ್ತೇಜಿಸಲು ಮತ್ತು ಜಾಗತಿಕ ಉದ್ಯಮದಲ್ಲಿ ಭಾರತದ ಸ್ಥಾನವನ್ನು ಗಟ್ಟಿಗೊಳಿಸಲು ಸಹಕಾರಿಯಾಗಿದೆ ಎಂದು ಅಭಿಪ್ರಾಯಪಟ್ಟರು.

ಶೃಂಗಸಭೆಯಲ್ಲಿ 24 ಪ್ರತಿಷ್ಠಿತ ಸ್ಪೀಕರ್‌ಗಳ ವಿಚಾರ ವಿನಿಮಯ ಎಲೆಕ್ಟ್ರಾನಿಕ್ ಮತ್ತು ಸೆಮಿಕಂಡಕ್ಟರ್‌ಗಳ ಹೆಚ್ಚಿನ ಕಲ್ಪನೆ ಮತ್ತು ಜ್ಞಾನ ಹಂಚಿಕೆಯ ಸಂಗಮಕ್ಕೆ ಕೊಡುಗೆ ನೀಡಿದೆ. ಒಟ್ಟಾರೆ, ಟೆಕ್ ಸಮ್ಮಿಟ್ ನಿಜವಾಗಿಯೂ ತಾಂತ್ರಿಕ ಶ್ರೇಷ್ಠತೆಯ ಆಚರಣೆಯಾಗಿದೆ ಹೊರಹೊಮ್ಮಿದೆ ಎಂದು ಅಶೋಕ್ ಚಂದಕ್ ಶ್ಲಾಘಿಸಿದರು.

ಬೆಂಗಳೂರು ತಂತ್ರಜ್ಞಾನ ಶೃಂಗಸಭೆಯಲ್ಲಿ ಭಾರತದ ಮೊದಲ ಜಿಸಿಸಿ ನೀತಿಯ ಬಿಡುಗಡೆಯಾಗಿದ್ದು, ಇದು ದೇಶದ ತಾಂತ್ರಿಕ ಪ್ರಗತಿಯಲ್ಲಿ ಮಹತ್ವದ ಮೈಲಿಗಲ್ಲನ್ನು ಸೃಷ್ಟಿಸಲಿದೆ. ಈ ಕಾರ್ಯತಂತ್ರದಿಂದ ಉದ್ಯಮದ ಬೇಡಿಕೆ, ಆರ್ ಮತ್ತು ಡಿ, ಮೂಲ ಸೌಕರ್ಯ ಅಭಿವೃದ್ಧಿ, ವೆಚ್ಚದ ದಕ್ಷತೆ, ಜಾಗತಿಕ ಮಾರುಕಟ್ಟೆ ಪ್ರವೇಶ, ಸೆಮಿಕಂಡಕ್ಟರ್ ಕಂಪನಿಗಳಿಗೆ ಉತ್ತಮ ಪರಿಸರದ ವ್ಯವಸ್ಥೆ, ಸಾಮರ್ಥ್ಯ ವೃದ್ಧಿ, ನೆಟ್ವರ್ಕ್ ಮತ್ತು ಸಂಪನ್ಮೂಲಗಳ ವಿನ್ಯಾಸ, ಉತ್ಪಾದನೆ ಮತ್ತು ಉತ್ಪಾದನಾ ಸಾಮರ್ಥ್ಯಗಳನ್ನು ಬಳಸಿಕೊಳ್ಳುವ ಮೂಲಕ ಪ್ರಮುಖ ಎಲೆಕ್ಟ್ರಾನಿಕ್ಸ್ ಮತ್ತು ಸೆಮಿಕಂಡಕ್ಟರ್ ವಲಯದಲ್ಲಿ ರಾಜ್ಯದ ಸ್ಥಾನಮಾನ ಹೆಚ್ಚಲಿದೆ ಎಂದು ತಿಳಿಸಿದರು.

ಟೆಕ್ ಶೃಂಗಸಭೆ ಕೊನೆಯ ದಿನದಂದು, ಎಲೆಕ್ಟ್ರಾನಿಕ್ಸ್ ಮತ್ತು ಸೆಮಿಕಂಡಕ್ಟರ್ ದುಂಡುಮೇಜಿನ ಚರ್ಚೆ ನಡೆಯಿತು. ಇದರಲ್ಲಿ ಉತ್ಪಾದನೆ, ಇ–ತ್ಯಾಜ್ಯ ನೀತಿ, ಸೌರ ಫಲಕ ತಯಾರಿಕೆ, ಕೌಶಲ್ಯ ಮತ್ತು ಮೌಲ್ಯ ಸರಪಳಿ ವರ್ಧನೆಯಂತಹ ನಿರ್ಣಾಯಕ ವಿಷಯಗಳನ್ನು ಹೈಲೈಟ್ ಮಾಡಲಾಯಿತು.

ಚರ್ಚೆಯ ಸಮಯದಲ್ಲಿ ಸೆಮಿಕಂಡಕ್ಟರ್ಗಳ ಪ್ರಧಾನ ಉದ್ಯಮ ಸಂಸ್ಥೆಗಳು ಮತ್ತು ಭಾರತದಲ್ಲಿನ ದೇಶೀಯ ಬೇಡಿಕೆಯನ್ನು ಪೂರೈಸಲು ಮೈಸೂರಿನಂತಹ ಎಲೆಕ್ಟ್ರಾನಿಕ್ಸ್ ಮ್ಯಾನುಫ್ಯಾಕ್ಚರಿಂಗ್ ಕ್ಲಸ್ಟರ್‌ಗಳನ್ನು ಅಭಿವೃದ್ಧಿಪಡಿಸುವ ಮೂಲಕ ಆಮದು ಅವಲಂಬನೆಯಿಂದ ರಫ್ತು ನೇತೃತ್ವದ ಬೆಳವಣಿಗೆಗೆ ಬದಲಾಗುವ ಅಗತ್ಯವನ್ನು ಒತ್ತಿಹೇಳಲಾಯಿತು ಎಂದು ಅಶೋಕ್ ಚಂದಕ್ ವಿವರಿಸಿದರು.



ಬೆಂಗಳೂರಿನ ಅರಮನೆ ಮೈದಾನದಲ್ಲಿ ನಡೆಯುತ್ತಿರುವ "ಬೆಂಗಳೂರು ಟೆಕ್ ಶೃಂಗಸಭೆ 2024"ಯಲ್ಲಿ ಪ್ರದರ್ಶನ ಮತ್ತು ಮಳಿಗೆಗಳಿಗೆ ಗುರುವಾರ ಹೆಚ್ಚಿನ ಸಂಖ್ಯೆಯಲ್ಲಿ ಪ್ರವಾಸಿಗರು ಭೇಟಿನೀಡಿದ್ದರು.

# ಕಳೆದ ಬಾರಿ ಆಪ್ತ ಶಾಸಕರನ್ನು ಸಿದ್ದರಾಮಯ್ಯ ಅವರೇ ಬಿಜೆಪಿಗೆ ಕಳಿಸಿದ್ದರು: ಜೋಶಿ

**ಹುಬ್ಬಳ್ಳಿ, ನ.21–** ಕಾಂಗ್ರೆಸ್ ಶಾಸಕರಿಗೆ ಯಾರು 100 ಕೋಟಿ ಆಫರ್ ಕೊಟ್ಟಿದ್ದಾರೆ ದಾಖಲೆ ಬಿಡುಗಡೆ ಮಾಡಿ ಎಂದ ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ, ಕಳೆದ ಬಾರಿ ಆಪರೇಷನ್ ಕಮಲ ಆಗಲಿಲ್ಲ. ಸಿದ್ದರಾಮ್ಯ ಅವರೇ ತಮ್ಮ ಆಪ್ತ ಶಾಸಕರನ್ನು ಬಿಜೆಪಿಗೆ ಕಳಿಸಿದ್ದರು. ವಾಸ್ತವದಲ್ಲಿ ಅವರಿಗೆ ಕುಮಾರಸ್ವಾಮಿ ಸರ್ಕಾರ ಬೀಳಿಸಬೇಕಿತ್ತು. ಆದ್ದರಿಂದ ತಮ್ಮ ಆಪ್ತ ಶಾಸಕರನ್ನು ಬಿಜೆಪಿಗೆ ಕಳಿಸಿದರು ಮತ್ತು ಅವರಿಗೆ ವ ಂತ್ರಿಯಾಗುಸುವಲ್ಲಿಯೂಪ್ರಮುಖ ಪಾತ್ರ ವಹಿಸಿದ್ದ ಸಿಎಂ ಸಿದ್ದರಾಮಯ್ಯ ಅವರೇ ಎಂದು ಕೇಂದ್ರ ಸಚಿವ ಪ್ರಹ್ಲಾದ ಜೋಶಿ ಹೇಳಿದರು.

ಸುದ್ದಿಗಾರರೊಂದಿಗೆ, ಈಗ ಕಾಂಗ್ರೆಸ್ ಶಾಸಕರಿಗೆ ನೂರು ಕೋಟಿ ಆಮಿಷವೊಡ್ಡಿದ್ದಾರೆಂದು ಹೇಳುತ್ತಿದ್ದಾರೆ. ಅವರ ಶಾಸಕರೇ ನಮಗೆ ಯಾರೂ ಆಮಿಷವೊಡ್ಡಿಲ್ಲವೆಂದು ಹೇಳುತ್ತಿದ್ದಾರೆ. ಯಾರಿಗೆ ಆಮಿಷವೊಡ್ಡಿದ್ದಾರೆ ದಾಖಲೆ ನೀಡಲಿ. ಬರೀ ಬಾಯಿ ಮಾತಿನಲ್ಲಿ ಹೇಳಬೇಡಿ. ಯಾವ ಬಿಜೆಪಿ ನಾಯಕರು ಆಫರ್ ಕೊಟ್ಟಿದ್ದಾರೆ ಎಂಬ ಬಗ್ಗೆ ಮೊದಲು ದಾಖಲೆ ನೀಡಿ ನೋಡೋಣ ಎಂದು ಸವಾಲೆಸೆದರು.

100 ಕೋಟಿ ಇರಲಿ, 500 ಕೋಟಿ ಆಫರ್ ಇರಲಿ ದಾಖಲೆ ಇದ್ದರೆ ಬಿಡುಗಡೆ ಮಾಡಿ. ನಿಮ್ಮನ್ನು ಯಾರೂ ತಡೆದಿಲ್ಲ. ಶಾಸಕ ರವಿ ಗಾಣಿಗ ಅವತ್ತಿನಿಂದ ಹೇಳುತ್ತಿದ್ದಾರೆ ಆದರೆ ಇನ್ನೂ ಏಕೆ ದಾಖಲೆ ಏಕೆ ಬಿಡುಗಡೆ ಮಾಡುತ್ತಿಲ್ಲ ಎಂದು ಅವರು ಪ್ರಶ್ನಿಸಿದರು.



ಕೇಂದ್ರ ಕ್ರಮ ಕೈಗೊಳ್ಳಲಿದೆ : ಕಾಂಗ್ರೆಸ್ ಶಾಸಕರಿಗೆ ಯಾರೂ 50 ಕೋಟಿ, 100 ಕೋಟಿ, 500 ಕೋಟಿ ಆಫರ್ ಎಂದೆಲ್ಲ ಮಾತನಾಡಿದ್ದಾರೋ ಅವರ ಮೇಲೆ ಭಾರತ ಸರ್ಕಾರ ಕ್ರಮ ಕೈಗೊಳ್ಳಲಿದೆ ಎಂದ ಅವರು, . ಹಿಂದೆ ಬಿಜೆಪಿ ಸರ್ಕಾರ ರಚಿಸುವಾಗ ಇದೇ ಸಿದ್ದರಾಮಯ್ಯ ಅವರೇ ತಮ್ಮ ಆಪ್ತ ಶಾಸಕರನ್ನು ಬಿಜೆಪಿಗೆ ಕಳಿಸಿದ್ದರು ಎಂದು ಜೋಶಿ ಇದೇ ವೇಳೆ ಬಹಿರಂಗಪಡಿಸಿದರು. ಸಿದ್ದರಾಮಯ್ಯ ಅವರಿಗೆ ಜೆಡಿಎಸ್ ಜತೆ ಸರ್ಕಾರ ರಚನೆ ಇಷ್ಟವಿರಲಿಲ್ಲ. ಹಾಗಾಗಿ ತಾವೇ ಮುಂದೆ ನಿಂತು ಕೆಲ ಕಾಂಗ್ರೆಸ್ ಶಾಸಕರನ್ನು ಬಿಜೆಪಿಗೆ ಕಳಿಸಿದ್ದರು ಎಂದು ಆರೋಪಿಸಿದರು.

ಕಳೆದ ಬಾರಿ ಅಪರೇಷನ್ ಕಮಲ ನಡೆಸಲು ಕಾರಣ ರಾಜ್ಯದಲ್ಲಿ ಅತಂತ್ರ ಸ್ಥಿತಿಯತ್ತು. ಆದರೆ, ಈಗ ಪರಿಸ್ಥಿತಿ ಹಾಗಿಲ್ಲ. ಜನ ಕಾಂಗ್ರೆಸ್‌ಗೆ ಬಹುಮತದ ಅಧಿಕಾರ ಕೊಟ್ಟಿದ್ದಾರೆ. ಹಾಗಿದ್ದಾಗ ನಾವೇಕೆ ಮೂಗು ತೂರಿಸೋಣ. ವಿಪಕ್ಷದಲ್ಲಿರಲು ಸ್ಪಷ್ಟ ನಿಲುವು : ರಾಜ್ಯದಲ್ಲಿ 5 ವರ್ಷ ವಿರೋಧ ಪಕ್ಷ ಸ್ಥಾನದಲ್ಲಿ ಇರಲು ಬಿಜೆಪಿ ಸ್ಪಷ್ಟ ನಿಲುವು ತೋರಿದೆ. ವಿಪಕ್ಷದಲ್ಲಿದ್ದು ಜನಪರವಾಗಿ ರಚನಾತ್ಮಕ ಕಾರ್ಯ ಕೈಗೊಳ್ಳುವಂತೆ ನಮ್ಮ ಹೈಕಮಾಂಡ್ ಸಹ ರಾಜ್ಯ ನಾಯಕರಿಗೆ ನಿರ್ದೇಶನ ನೀಡಿದೆ ಎಂದು ಪ್ರಲ್ಹಾದ್ ಜೋಶಿ ತಿಳಿಸಿದರು.

ಆಪರೇಷನ್ ಇಲ್ಲ. ಎಂಥದ್ದೂ ಇಲ್ಲ. ಕಾಂಗ್ರೆಸ್ ಷಡ್ಯಂತ್ರ ಇದೆಲ್ಲ. ರಾಜ್ಯ ಕಾಂಗ್ರೆಸ್ ಸರ್ಕಾರವನ್ನು ನಾವು ಉರುಳಿಸುವುದೂ ಇಲ್ಲ. ಮತ್ತೆ ಆಪರೇಷನ್ ಕಮಲ ನಡೆಸುವುದೂ ಇಲ್ಲ. ಇದೆಲ್ಲ ಕಾಂಗ್ರೆಸ್‌ನವರು ತಮ್ಮ ಹುಳುಕು ಮುಚ್ಚಿಕೊಳ್ಳಲು ಮಾಡುತ್ತಿರುವ ಷಡ್ಯಂತ್ರ ಎಂದು ಆರೋಪಿಸಿದರು. ಹಗರಣಗಳಲ್ಲಿ ಸಿಲುಕಿರುವ ಸಿದ್ದರಾಮಯ್ಯ ಅವರ ವಿರುದ್ಧ ತನಿಖೆಗೆ ಕೋರ್ಟ್ ಸ್ಪಷ್ಟ ತೀರ್ಪು ನೀಡಿದೆ. ಅದರಂತೆ ಲೋಕಾಯುಕ್ತ ವಿಚಾರಣೆ ನಡೆದಿದೆ. ಇದೆಲ್ಲಾ ಡೈವರ್ಟ್ ಮಾಡಲು ಸಿಎಂ ಸಿದ್ದರಾಮಯ್ಯ ಸೇರಿದಂತೆ ಕಾಂಗ್ರೆಸ್ಸಿಗರು ಹೀಗೆ ಅಸಂಬದ್ಧವಾಗಿ ಮಾತನಾಡುತ್ತಿದ್ದಾರೆ ಎಂದು ದೂರಿದರು.

ಸಿಎಂ ಸಿದ್ದರಾಮಯ್ಯ ವಿರುದ್ಧದ ತನಿಖೆ ಆದೇಶಕ್ಕೆ ಕೋರ್ಟ್‌ನಿಂದ ತಡೆಯಜ್ಞೆ ಸಿಕ್ಕಿಲ್ಲ. ನಿಮ್ಮ ವಿರುದ್ಧವೇ ಕೋರ್ಟ್ ಕೇಸ್ ಇದೆ. ಅಂಥದ್ದರಲ್ಲಿ ಮತ್ತೊಬ್ಬರ ಬಗ್ಗೆ ಮಾತನಾಡುತ್ತೀರಿ. ಮೊದಲು ನೀವು ಶುದ್ಧರಾಗಿ ಎಂದು ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಟಾಂಗ್ ಕೊಟ್ಟರು.

# ಬುದ್ಧಗಯಾ ಆಡಳಿತ ಬೌದ್ಧರಿಗೇ ನೀಡಿ ಬದಂತ ಪ್ರಜ್ಞಾಶೀಲ್ ಮಹಾಥೇರೋ

**ಕಲಬುರಗಿ, ನ.21–** ಬಿ.ಟಿ ಕಾಯ್ದೆ–1949 ರದ್ದುಗೊಳಿಸಿ ಬುದ್ಧಗಯಾದ ಮಹಾಬೋಧಿ ಮಹಾವಿಹಾರದ ಆಡಳಿತ ಸಂಪೂರ್ಣ ಬೌದ್ಧರಿಗೆ ನೀಡಲು ಒತ್ತಾಯಿಸಿ ಸಂವಿಧಾನ ದಿನಾಚರಣೆ ಪ್ರಯುಕ್ತ ಬೌದ್ಧರ ಧಾರ್ಮಿಕ ಹಕ್ಕಿಗಾಗಿ 26 ರಂದು ದೇಶಾದ್ಯಂತ ಪ್ರತಿಭಟನೆ ನಡೆಸಲಾಗುವುದು ಎಂದು ಬುದ್ಧ ಗಯಾದ ಶ್ರೀ ಬದಂತ ಪ್ರಜ್ಞಾಶೀಲ ಮಹಾಥೇರೋ ಹೇಳಿದರು.




ನಗರದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಬುದ್ಧಗಯಾ ಜಗತ್ತಿನ ಬೌದ್ಧರಿಗೆ ಪವಿತ್ರ ಸ್ಥಳವಾಗಿದ್ದು, ಇದರ ಆಡಳಿತ ಇದುವರೆಗೂ ಸಂಪೂರ್ಣವಾಗಿ ಬೌದ್ಧರಿಗೆ ನೀಡಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು. ಸಂವಿಧಾನದ ಕಲಂ 25, 26 ಮತ್ತು 29ರ ಪ್ರಕಾರ ಎಲ್ಲ ಜಾತಿ, ಜನಾಂಗದವರು ಸ್ವತಂತ್ರ್ಯವಾಗಿ ದೇವಸ್ಥಾನ, ಮಂದಿರ ಮಾಡಿ ಕೊಳ್ಳಬೇಕೆಂಬ ನಿಯಮ ಇದೆ. ಎಲ್ಲ ಜಾತಿಗಳ ದೇವಸ್ಥಾನ, ಟ್ರಸ್ಟ್‌ಗಳಿಗೆ ಆಯಾ ಜಾತಿಗಳ ಪ್ರಮುಖರು ಆಡಳಿತ ಮಂಡಳಿಗಳಿವೆ. ಆದರೆ, ದು ರಾದೃಷ್ಟದಿಂದ 1.11 ಲಕ್ಷ ಜನಸಂಖ್ಯೆ ಹೊಂದಿರುವ ಬಿಹಾರ ರಾಜ್ಯದಲ್ಲಿರುವ ಬೌದ್ಧ ಗಯಾದಲ್ಲಿ ಇದುವರೆಗೂ ಬೌದ್ಧರಿಗೆ ಆಡಳಿತ ನೀಡಿಲ್ಲ. ಹೊರತಾಗಿ 4 ಬೌದ್ಧರು ಮತ್ತು 4 ಹಿಂದೂಗಳನ್ನು ಸೇರಿಸಿ ಆಡಳಿತ ಮಂಡಳಿ ಮಾಡ ಲಾಗಿದೆ ಎಂದು ಆರೋಪಿಸಿದರು.

ಈ ಸಂವಿಧಾನ ವಿರೋಧಿ ಟಿಟಿ ಕಾಯ್ದೆ 1949ರ ಅಡಿಯಲ್ಲಿ ಮಹಾಬೋಧಿ ಮಹಾವಿಹಾರದ ಆಡಳಿತ ಮಂಡಳಿಯೊಳಗೆ ಸೇರಿಸಿ ಹಿಂದೂ ಪುರೋಹಿತರು ಬೌದ್ಧ ಇತಿಹಾಸ ಮತ್ತು ಸಂಸ್ಕೃತಿ ನಾಶಕ್ಕೆ ಕೈಹಾಕಿದ್ದಾರೆ. ಬುದ್ಧನ ವಿಗ್ರಹದ ಮುಂದೆ ಶಿವಲಿಂಗ ಇದೆ ಎಂದು ಸುಳ್ಳು ಸೃಷ್ಟಿಸಿದ್ದಾರೆ. ಬುದ್ಧ ವಿಹಾರದ ಆವರಣದಲ್ಲಿ ಗಣಪತಿ ವಿಗ್ರಹವಿಟ್ಟಿದ್ದಾರೆ. ಹಲವು ಬೌದ್ಧ ಮೂರ್ತಿಗಳನ್ನು ಹಿಂದೂಕರಣ ಮಾಡಿದ್ದಾರೆ. ಅಲ್ಲಿ ಪಿಂಡದಾನ ಮಾಡಿ ಬೌದ್ಧ ಸಂಸ್ಕೃತಿ ನಾಶ ಮಾಡುತ್ತಿದ್ದಾರೆ. ಈ ಕುರಿತು ಬಿಹಾರ ಸರ್ಕಾರದ ಮತ್ತು ಪ್ರಧಾನ ಮಂತ್ರಿಗಳ ಗಮನಕ್ಕೆ ತರಲಾಗಿದೆ. ಆದರೆ ಪ್ರಯೋಜನವಾಗಿಲ್ಲ. ಬುದ್ಧನ ಬೌದ್ಧಗಯಾದಲ್ಲಿ ನಡೆಯುತ್ತಿರುವ ಅನ್ಯಾಯ ಸಾರ್ವಜನಿಕವಾಗಿ ತಿಳಿಸಲು ನಮ್ಮ ಹೋರಾಟ ನಡೆಯುತ್ತಿದೆ. ಈ ಕುರಿತು ಜನಜಾಗೃತಿ ಮೂಡಿಸಿ ಹೋರಾಟ ತೀವ್ರ ರೂಪಕ್ಕೆ ತರುವ ನಿಟ್ಟಿನಲ್ಲಿ ಆಲ್ ಇಂಡಿಯಾ ಬುದ್ಧಿಷ್ಟ್ ಫೋರಂ ನೇತೃತ್ವದಲ್ಲಿ ಬೌದ್ಧ ಸಂಘ ಸಂಸ್ಥೆಗಳು, ಅಂಬೇಡ್ಕರ್‌ವಾದಿ ಸಂಘ ಸಂಸ್ಥೆಗಳು, ದಲಿತ ಸಂಘಟನೆಗಳು ಸಂವಿಧಾನ ದಿನ 26 ರಂದು ದೇಶಾದ್ಯಂತ ಪ್ರತಿಭಟನೆ ನಡೆಸಲಾಗುವದು ಎಂದರು.

# ತ್ರೈಮಾಸಿಕ ಕೆಡಿಪಿ ಸಭೆಯಲ್ಲಿ ಜಿಲ್ಲೆಯ ಜ್ವಲಂತ ಸಮಸ್ಯೆಗಳ ಪ್ರತಿಧ್ವನಿ

**ಬೀದರ್, ನ.21–** ನಗರದ ಜಿಲ್ಲಾ ಪಂಚಾಯತ್ ಸಭಾಂಗಣ ದಲ್ಲಿಂದು ನಡೆದ ಕೆಡಿಪಿ ತ್ರೈಮಾಸಿಕ ಸಭೆಯಲ್ಲಿ ನಿರೀಕ್ಷೆಯಂತೆ ಜಿಲ್ಲೆಯ ಜ್ವಲಂತ ಸಮಸ್ಯೆಗಳು ಮತ್ತು ಪ್ರಚಲಿತ ವಿಷಯಗಳು ಪ್ರಮುಖವಾಗಿ ಪ್ರತಿಧ್ವನಿಸಿದವು.




ಕಾಂಗ್ರೆಸ್ ಎಮ್‌ಎಲ್‌ಸಿ ಡಾ. ಚಂದ್ರಶೇಖರ್ ಪಾಟೀಲ್ ಬೀದರ್ ಸಹಕಾರ ಸಕ್ಕರೆ ಕಾರ್ಖಾನೆ (ಬಿಎಸ್‌ಎಸ್‌ಕೆ) ಬಂದ್ ಆಗಿರುವ ಜಿಲ್ಲೆಯ ಜಟಿಲ ಸಮಸ್ಯೆ ಪ್ರಸ್ತಾಪಿಸಿ ಸಭೆಯ ಅಧ್ಯಕ್ಷತೆ ವಹಿಸಿದ ಜಿಲ್ಲಾ ಉಸ್ತುವಾರಿ ಮಂತ್ರಿ ಈಶ್ವರ್ ಖಂಡ್ರೆ ಅವರ ಗಮನ ಸೆಳೆದು ಮಂಡಿಸಿದ ವಿಷಯಗಳಿಗೆ ಪೌರಾಡಳಿತ ಸಚಿವ ರಹೀಂ ಖಾನ್, ಕಾಂಗ್ರೆಸ್ ಎಮ್‌ಎಲ್‌ಸಿ ಭೀಮರಾವ್ ಪಾಟೀಲ್, ಬಿಜೆಪಿ ಶಾಸಕರಾದ ಡಾ. ಶೈಲೇಂದ್ರ ಬೆಲ್ದಾಳೆ, ಶರಣು ಸಲಗರ್ ಮತ್ತು ಡಾ. ಸಿದ್ದು ಪಾಟೀಲ್ ದನಿಗೂಡಿಸಿ ಪಕ್ಷಭೇದ ಮರೆತು ಬೆಂಬಲ ಸೂಚಿಸಿದರು.

ಜಿಲ್ಲೆಯ ರೈತರ ಜೀವನಾಡಿ ಬಿಎಸ್‌ಎಸ್‌ಕೆ ಬಂದ್ ಆಗಿದೆ. ಇದರಿಂದಾಗಿ ಕಬ್ಬು ಬೆಳೆಗಾರರು ತಲೆ ಮೇಲೆ ಕೈ ಹೊತ್ತು ಕುಳಿತಿದಿದ್ದಾರೆ. ಜಿಲ್ಲೆಯ ಜನರಿಗೆ ಬೀದರ್ ಏರ್ ಪೋರ್ಟ್ ಪುನರಾರಂಭಿಸುವುದಕ್ಕಿಂತ ಬಿಎಸ್‌ಎಸ್‌ಕೆ ಪುನರಾರಂಭಿಸುವುದು ಹೆಚ್ಚು ಅಗತ್ಯವಾಗಿದೆ ಎಂದು ನುಡಿದರು. ಪ್ರಸಕ್ತ ಸಾಲಿನಲ್ಲಿ ಜಿಲ್ಲೆಯಲ್ಲಿ ಉತ್ತಮ ಮಳೆಯಾಗಿದೆ. ಜಿಲ್ಲೆಯಲ್ಲಿ ಈ ವರ್ಷ ಕಬ್ಬಿನ ಉತ್ತಮ ಇಳವರಿ ಬಂದಿದೆ. ಜಿಲ್ಲೆಯಲ್ಲಿನ ಈಗಿರುವ ಸಕ್ಕರೆ ಕಾರ್ಖಾನೆಗಳು ಒಟ್ಟು 28 ಲಕ್ಷ ಟನ್ ಕಬ್ಬು ಅರೆದರೂ ಕೂಡ ಇನ್ನೂ 6 ಲಕ್ಷ ಟನ್ ಕಬ್ಬು ಉಳಿಯುತ್ತದೆ. ರೈತರಿಗೆ ಕಬ್ಬು ಸಕ್ಕರೆ ಕಾರ್ಖಾನೆಗೆ ಸಾಗಣಾಣೆಯಾದರೆ ಸಾಕು ಎಂಬಂತಾಗಿದೆ. ವಸ್ತುಸ್ಥಿತಿ ಹೀಗಿರು ವಾಗ ಬಿಎಸ್‌ಎಸ್‌ಕೆ ಪುನರಾರಂಭ ಜರೂರು ಆಗಿದೆ ಎಂದು ನುಡಿದರು.

ಹುಮನಾಬಾದ ಶಾಸಕ ಡಾ.ಸಿದ್ದು ಪಾಟೀಲ್ ಮಾತನಾಡಿ, ಕೆಕೆಆರ್‌ಡಿಬಿ ಅನುದಾನದಲ್ಲಿ ನನ್ನ ಶಾಸಕತ್ವದ ನಿಧಿಗೆ ಬಂದ ಅನುದಾನದಲ್ಲಿನ 10 ಕೋಟಿ ರೂ.ಗಳನ್ನು ಬಿಎಸ್‌ಎಸ್‌ಕೆ ಪುನರಾಂಭಿಸುವುದಕ್ಕೆ ನೀಡಲು ಕಾನೂನಿನಲ್ಲಿ ಅವಕಾಶವಿದ್ದರೆ ನಾನು ನೀಡಲು ಸಿದ್ಧ ಎಂದು ಘೋಷಿಸಿದರು.

ಉತ್ತರಿಸಿದ ಮಂತ್ರಿ ಖಂಡ್ರೆ ಬಿಎಸ್‌ಎಸ್‌ಕೆ ಕುರಿತು ನನಗೆ ಭಾವನಾತ್ಮಕ ಸಂಬಂಧವಿದೆ. ಕೇವಲ ಬಿಎಸ್‌ಎಸ್‌ಕೆ ಒಂದೇ ಅಲ್ಲ ಇಡೀ ರಾಜ್ಯದಲ್ಲಿ ಪುನಶ್ಚೇತನಗೊಳಿಸ ಬೇಕಿರುವ ಸಹಕಾರ ವಲಯದ ನಾಲ್ಕಾರು ಸಂಸ್ಥೆಗಳಿವೆ. ಬಿಎಸ್‌ಎಸ್‌ಕೆ 350 ಕೋಟಿ ರೂ.ಗಳ ಸಾಲದ ಕೂಂಪೆಗೆ ಸಿಲುಕಿದೆ. ಈ ಕಾರ್ಖಾನೆಯನ್ನು ಗುತ್ತಿಗೆ ಆಧಾರ ಮೇಲೆ ನೀಡುವುದೇ ಏಕೈಕ ಮಾರ್ಗ. ಇದಕ್ಕೆ ಅನುಕೂಲ ಕಲ್ಪಿಸಲು ಬಿಎಸ್‌ಎಸ್‌ಕೆ ಸಾಲದ ಮೊತ್ತವನ್ನು ಒಂದು ಹಂತದ ತೀರುವಳಿ (ಒನ್ ಟೈಮ್ ಸೆಟ್ಲ್‌ಮೆಂಟ್) ಮೂಲಕ ಋಣ ಭಾರ ತಗ್ಗಿಸುವ ನಿಟ್ಟಿನಲ್ಲಿ ಬೀದರ್ ಡಿಸಿಸಿ ಬ್ಯಾಂಕ್ ಸಂಗಡ ಮಾತುಕತೆ ನಡೆಸುವೆ. ಸಕ್ಕರೆ ಸಚಿವ ಶಿವಾನಂದ ಪಾಟೀಲರನ್ನು ಭೇಟಿ ಮಾಡಿ ಮಾತುಕತೆ ನಡೆಸುವೆ. ಇದಾದ ಬಳಿಕ ತಿಂಗಳಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯನವರ ಬಳಿಗೆ ಹೋಗೋಣ (ನಿಯೋಗ ದೊಂದಿಗೆ) ಎಂದು ನೀಡಿದ ಭರವಸೆಗೆ ಸಭೆ ಮೇಜು ತಟ್ಟಿ ಸ್ವಾಗತಿಸಿತು.

# ವಕ್ಫ್ ಕಾಯ್ದೆ ವಿರೋಧಿಸಿ: ಕಲಬುರಗಿ ಬಂದ್ ಮಠಾಧಿಪತಿಗಳ ನೇತೃತ್ವದಲ್ಲಿ ರೈತರ ಬೃಹತ್ ಪ್ರತಿಭಟನೆ

**ಕಲಬುರಗಿ, ನ.21–** ಅಸಂವಿ ಧಾನಿಕವಾಗಿ ರಚನೆಗೊಂಡಿರುವ ವಕ್ಫ್ ಮಂಡಳಿಯಿಂದ ರೈತರ ಹೊಲ, ಮನೆ, ಮಠ–ಮಂದಿರದ ಆಸ್ತಿಪಾಸ್ತಿಗಳು ಮತ್ತು ಸರ್ಕಾರಿ ಕಚೇರಿ ಕಟ್ಟಡಗಳೂ ಸರ್ಕಾರಿ ಆಸ್ತಿ ಎಂದು ದಾಖಲೆಗಳಲ್ಲಿ ನಮೂದಿಸುವ ವಕ್ಫ್ ಕಾಯ್ದೆಯನ್ನೇ ರದ್ದುಗೊಳಿಸಿ, ರೈತರು ಮತ್ತು ಹಿಂದೂಗಳಲ್ಲಿ ವಕ್ಫ್ ಭಮುಕ್ತಗೊಳಿಸಬೇಕೆಂದು ಆಗ್ರಹಿಸಿ ನೂರಾರು ಮಠಾಧಿಪತಿಗಳ ನೇತೃತ್ವದಲ್ಲಿ ನಗರದಲ್ಲಿಂದು ಕಲಬುರಗಿ ಬಂದ್ ಕರೆ ನೀಡಿ, 'ನಮ್ಮ ಭೂಮಿ ನಮ್ಮ ಹಕ್ಕು' ಎಂದು ಸಹಸ್ರಾರು ರೈತರು ಪ್ರತಿಭಟನೆ ನಡೆಸಿದರು.





ಕಲಬುರಗಿ ನಗರದ ಪ್ರಮುಖ ಬೀದಿಯಲ್ಲಿ ವಕ್ಫ್ ಕಾಯ್ದೆ ವಿರುದ್ಧ ಸಹಸ್ರಾರು ರೈತರು–ಮಠಾಧಿಪತಿಗಳು ಬೃಹತ್ ಪ್ರತಿಭಟನಾ ಮೆರವಣಿಗೆ ನಡೆಸಿದ ದೃಶ್ಯ.

ಇತ್ತೀಚೆಗೆ ರಾಜ್ಯ ಸರ್ಕಾರದ ಅಧಿಸೂಚನೆ ಯಂತೆ ರಾಜ್ಯದಲ್ಲಿ ಸಾವಿರಾರು ಎಕರೆ ಭೂಮಿಯನ್ನು ರೈತರ, ಜನಸಾಮಾನ್ಯರ, ಸರ್ಕಾರದ ಆಸ್ತಿಗಳು ಮತ್ತು ಮಠ–ಮಂದಿರಗಳ ಆಸ್ತಿಗಳನ್ನು ವಕ್ಫ್ ಹೆಸರಿನಲ್ಲಿ ದಾಖಲೆ ನಮೂದಿಸಿ, ರೈತರ ಜನಸಾಮಾನ್ಯರ ನಿದ್ರೆಗೆಡಿಸಿ ಆತಂಕ ಸೃಷ್ಟಿಸಲಾಗಿದೆ.

ಅನೇಕ ದಶಕಗಳಿಂದ ತಲೆತಲಾಂತರ ಗಳಿಂದ ಭೂಮಿಯನ್ನು ಉಳುಮೆ ಮಾಡುತ್ತಿರುವ ರೈತರ ಜಮೀನಿಗೆ ರೈತರ ಆಸ್ತಿ ಎಂದು ಪಹಣಿಯಲ್ಲಿ ನಮೂದಿಸ ಲಾಗಿದೆ. ಕಲಬುರಗಿ ಜಿಲ್ಲೆಯಾದ್ಯಂತ ಎಲ್ಲಾ ತಾಲ್ಲೂಕುಗಳಲ್ಲಿ ಕಂದಾಯ ಇಲಾಖೆಯು ಭೂಮಿಯನ್ನು ವಕ್ಫ್ ಹೆಸರಿನಲ್ಲಿ ವರ್ಗಾಯಿಸಿ ನೋಟೀಸು ಜಾರಿಮಾಡಲಾಗುತ್ತಿದೆ. ರೈತರ, ಸಾಮಾನ್ಯ ನಾಗರಿಕರ ಆತಂಕ, ಧರಣಿ, ಆಂದೋಲನದ ವಿರೋಧದ ಕಾವು ಅರಿತ ಮುಖ್ಯಮಂತ್ರಿಗಳು ಪಹಣಿಯಲ್ಲಿನ ಸದರಿ ನಮೂದು ಹಿಂಪಡೆಯ ಲಾಗಿದೆ ಎಂದು ಸ್ಪಷ್ಟಪಸಿದ್ದರು. ಆದರೆ, ಅಧಿಕಾರಿಗಳು ಕ್ರಮ ಜರುಗಿಸದೇ ಹೊಸದಾಗಿ ನೋಟೀಸು ನೀಡುತ್ತಿರುವುದು ಖಂಡನೀಯ. ಮೊದಲು ವಕ್ಫ್ ಸಂಬಂಧ ಗೆಜೆಟ್ ನೋಟಿಸು ರದ್ದು ಪಡಬೇಕೆಂದು ಪ್ರತಿಭಟನಾಕಾ ರರು ಆಗ್ರಹಿಸಿದರು.

ಸಾಮಾನ್ಯ ತಂಟೆ ತಕರಾರುಗಳು ಬಂದರೆ ದೇಶದ ಜನತೆ ಕೋರ್ಟು ಕಚೇರಿಗಳಿಗೆ ಸುಪ್ರೀಂ ಕೋರ್ಟ್ ವರೆಗೂ ಹೋಗುತ್ತಾರೆ. ಆದರೆ ವಕ್ಫ್ ಬೋರ್ಡಿಗೆ ಸಂಬಂಧಿಸಿದಂತೆ ಯಾವುದೇ ವಿಚಾರಣೆಯಿಲ್ಲದೇ ಏಕಪಕ್ಷೀಯವಾಗಿ ವಕ್ಫ್ ಬೋರ್ಡ್ ನವರು ನಡೆಸು ತ್ತಿದ್ದಾರೆ. ಮಂಡಳಿಯ ವಿರುದ್ಧವೇ ತಕರಾರಿ ದ್ದರೂ ಅದೇ ಮಂಡಳಿ ಸದಸ್ಯರು ಕೈಗೊಳ್ಳುವ ನಿರ್ಧಾರಗಳೇ ಇಲ್ಲಿ ಅಂತಿಮ. ಮಂಡಳಿ ನಿರ್ಧಾರದ ವಿರುದ್ಧ ಬೇರೆಲ್ಲೂ ಮೇಲ್ಮನವಿ ಹೋಗುವಂತಿಲ್ಲ. ಇಂಥದ್ದೊಂದು ಅಸಂವಿಧಾನಿಕ ಕ್ರಮವಾಗಿದೆ. ಅಂಬೇಡಕರ್ ಅವರು ಬರೆದಿರುವ ಸಂವಿಧಾನದಲ್ಲಿಲ್ಲದ ವಕ್ಫ್ ಅನಂತರ ಸೇರ್ಪಡೆ ಮಾಡಿ ಹಿಂದೂಗಳ ವಿರುದ್ಧ ಕೈಕೊಂಡ ಕ್ರಮವಾಗಿದ್ದು, ಕೇಂದ್ರ ಸರ್ಕಾರ ವಕ್ಫ್ ಕಾಯ್ದೆಯನ್ನೇ ರದ್ದುಗೊಳಿಸಬೆಕು ಮತ್ತು ರಾಜ್ಯ ಸರ್ಕಾರ ಹೊರಡಿಸಿರುವ ವಕ್ಫ್ ಸಂಬಂಧಿ ಅಧಿಸೂಚನೆಯನ್ನು ರದ್ದುಪಡಿಸ ಬೇಕೆಂದು ಆಗ್ರಹಿಸುವ ಮನವಿಯನ್ನು ಜಿಲ್ಲಾಧಿಕಾರಿಗಳ ಮೂಲಕ ಮುಖ್ಯಮಂತ್ರಿಗಳಿಗೆ ಸಲ್ಲಿಸಲಾಯಿತು. ಕಲಬುರಗಿ ಬಂದ್ ಕರೆಯ ಹಿನ್ನೆಲೆಯಲ್ಲಿ ನಗರದಲ್ಲಿ ಬೆಳಿಗ್ಗೆ ಯಿಂದಲೇ ಅಂಗಡಿ ಮುಗ್ಗಟ್ಟುಗಳನ್ನು ಬಂದ್ ಮಾಡಲಾಗಿತ್ತು. ಶ್ರೀರಾಮ ಸೇನೆ ರಾಷ್ಟ್ರೀಯ ಗೌರವಾಧ್ಯಕ್ಷ ಸಿದ್ಧಲಿಂಗ ಸ್ವಾಮಿಜಿ ನೇತೃತ್ವದಲ್ಲಿ ನಗರದ ಗಂಜ್ ಪ್ರದೇಶದಿಂದ ನೂರಾರು ಮಠಾಧೀಶರು, ಸಹಸ್ರಾರು ರೈತ ರೊಂದಿಗೆ ಹೊರಟ ಪ್ರತಿಭಟನಾ ಮೆರವಣಿಗೆ ಜಗತ್ ವೃತ್ತದಲ್ಲಿ ಎಲ್ಲ ರಾಜ ಕೀಯ ಪಕ್ಷಗಳ ಮುಖಂಡರು ಪಕ್ಷ ಭೇದ ಮರೆತು ಮೆರವಣಿಗೆ ಮತ್ತು ಸಮವೇಶದಲ್ಲಿ ಪಾಲ್ಗೊಂಡು ವಕ್ಫ್ ಕಾಯ್ದೆ ರದ್ದತಿ, ವಕ್ಫ್ ಎಂಬ ಲ್ಯಾಂಡ್ ಜಿಹಾದ್ ರದ್ದುಪಡಿಸ ಬೇಕೆಂದು ಪ್ರತಿಪಾದಿಸಿದರು.

# ಕರ್ನಾಟಕ ಸಂಘದಲ್ಲಿ ಇಂದು – ನಾಳೆ ಛಾಯಾಚಿತ್ರ – ನಾಣ್ಯ ಪ್ರದರ್ಶನ

**ಶಿವಮೊಗ್ಗ, ನ.21–** ನಗರದ ಪ್ರತಿಷ್ಠಿತ ಕರ್ನಾಟಕ ಸಂಘ ಭವನದಲ್ಲಿ ರಾಜ್ಯೋತ್ಸವ ಹಾಗೂ ಕರ್ನಾಟಕ ಸಂಘದ 94ನೇ ವಾರ್ಷಿಕೋತ್ಸವ ನಿಮಿತ್ತ ನ. 22 ಮತ್ತು 23ರಂದು ಸಂಜೆ 5.30ರಿಂದ ರಾತ್ರಿ 9ರವರೆಗೆ ಪ್ರಖ್ಯಾತ ವೈದ್ಯರು, ವನ್ಯಜೀವಿ ಛಾಯಾಚಿತ್ರ ಗ್ರಾಹಕರೂ ಆದ ಡಾ| ಶ್ರೀಕಾಂತ್ ಹೆಗಡೆ ಅವರ ವನ್ಯಜೀವಿ ಛಾಯಾಚಿತ್ರಗಳ ಪ್ರದರ್ಶನ ಹಾಗೂ ಹಿರಿಯ ಪತ್ರಕರ್ತ ಶಿವಮೊಗ್ಗ ಟೈಮ್ಸ್ ಪತ್ರಿಕೆ ಸಂಪಾದಕರೂ ಆದ ಎಸ್. ಚಂದ್ರಕಾಂತ್ ಅವರ ಅಪೂರ್ವ ರಾಜ ಮಹಾರಾಜರ ಕಾಲದ ಬೆಳ್ಳಿ ಮತ್ತು ತಾಮ್ರದ ನಾಣ್ಯಗಳು, ಭಾರತದ ರಾಜಪ್ರಭುತ್ವ ರಾಜರ ಅಂಚೆಚೀಟಿಗಳ ಪ್ರದರ್ಶನ ಹಮ್ಮಿಕೊಳ್ಳಲಾಗಿದೆ. ನ.22ರ ಇಂದು ಸಂಜೆ 5.30ಕ್ಕೆ ಜಿಲ್ಲಾಧಿಕಾರಿ ಗುರುದತ್ತ ಹೆಗಡೆ ಅವರು ಈ ಪ್ರದರ್ಶನ ಉದ್ಘಾಟಿಸಲಿದ್ದಾರೆ.

ಸಂಜೆ 6.30ಕ್ಕೆ ಆಧುನಿಕ ಕನ್ನಡ ಗದ್ಯ ಬರವಣಿಗೆಯ ಹೆಜ್ಜೆಗಳು ವಿಷಯ ಕುರಿತು ಡಾ| ಜನಾರ್ದನ ಭಟ್‌ರಿಂದ ಉಪನ್ಯಾಸವಿದೆ. ನ. 23ರ ಸಂಜೆ 5.30ಕ್ಕೆ ಕರ್ನಾಟಕ ಸಂಘದ 94ನೇ ವಾರ್ಷಿಕೋತ್ಸವ ಜರುಗಲಿದ್ದು, ಖ್ಯಾತ ಚಲನಚಿತ್ರ ನಿರ್ದೇಶಕ ಡಾ| ಟಿ.ಎಸ್. ನಾಗಾಭರಣ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ.

ಡಾ| ಶ್ರೀಕಾಂತ್ ಎನ್. ಹೆಗಡೆ ಅವರು ಕಳೆದ 15 ವರ್ಷಗಳಿಂದ ವನ್ಯಜೀವಿಗಳ ಫೋಟೋಗ್ರಫಿಯಲ್ಲಿ ತೊಡಗಿದ್ದು, ಇದನ್ನು ಹವ್ಯಾಸವಾಗಿ ಬೆಳೆಸಿಕೊಂಡಿದ್ದಾರೆ. ಅಪರೂಪದ ಪಕ್ಷಿಗಳನ್ನು ಇವರು ತಮ್ಮ ಕ್ಯಾಮರಾದಲ್ಲಿ ಸೆರೆಹಿಡಿದಿದ್ದಾರೆ.

ಒಂದಕ್ಕೊಂದು ಮಿಗಿಲಾದ ವನ್ಯಜೀವಿ ಪಕ್ಷಿಗಳ ಛಾಯಾಚಿತ್ರ ವೀಕ್ಷಿಸಲು ಇದೊಂದು ಸದವಕಾಶ ವಾಗಿದೆ. ಹಾಗೆಯೇ ಎಸ್.ಚಂದ್ರಕಾಂತ್ ಅವರು ಕಳೆದ 50 ವರ್ಷಗಳಿಂದ ಸಂಗ್ರಹಿಸಿರುವ ಕುಶಾನರು,




ಗುಪ್ತರು, ಕ್ಷತ್ರಪರು, ವಿಜಯ ನಗರ, ಮೈಸೂರು, ಶಾತ ವಾಹನರು, ಬನವಾಸಿಯ ಚುಟು ವಂಶಸ್ಥರು, ಚಾಣಕ್ಯರ ಮಾರ್ಗದರ್ಶನದಲ್ಲಿ ಮೌರ್ಯರ ಆಡಳಿತದಲ್ಲಿ ಭಾರತದಲ್ಲಿ ಬಳಕೆಗೆ ಬಂದ ಬೆಳ್ಳಿಯ ಪಂಚ್ಮಾರ್ಕ್ ನಾಣ್ಯಗಳು ಹೀಗೆ ದೇಶವನ್ನಾಳಿದ ರಾಜ–ಮಹಾರಾಜರ ಕಾಲದ ನಾಣ್ಯಗಳು ಹಾಗೂ ಭಾರತದಲ್ಲಿ 500ಕ್ಕೂ ಹೆಚ್ಚು ರಾಜರು ತಮ್ಮತಮ್ಮದೇ ಪ್ರತ್ಯೇಕ ರಾಜ್ಯಗಳನ್ನು ಹೊಂದಿದ್ದು, ಈ ಸಂದರ್ಭದಲ್ಲಿ ಅವರು ಬಳಸುತ್ತಿದ್ದ ವಿಶೇಷ ಅಂಚೆಚೀಟಿಗಳು ಪ್ರದರ್ಶನ ದಲ್ಲಿ ವೀಕ್ಷಿಸಬಹುದಾಗಿದೆ.

ಬ್ರಿಟೀಷರ ಆಳ್ವಿಕೆ ಕಾಲದಲ್ಲಿ ಚಲಾವಣೆಯಲ್ಲಿದ್ದ ಬೆಳ್ಳಿ ನಾಣ್ಯಗಳು, ಕಾಸು, ಬಿಲ್ಲೆ, ಅರ್ಧಾಣೆ, ಒಂದಾಣೆ, ನಾಲ್ಕಾಣೆ, ಎಂಟಾಣೆ ನಾಣ್ಯಗಳೂ ಸೇರಿದಂತೆ ಅಪರೂಪದ ನಾಣ್ಯಗಳ ಪ್ರದರ್ಶನ ಸಹ ಇದ್ದು ಶಿವಮೊಗ್ಗೆಯ ಜನತೆ ನಾಳೆ ಮತ್ತು ನಾಡಿದ್ದು ಸಂಜೆಯಿಂದ ಕರ್ನಾಟಕ ಸಂಘ ಭವನದಲ್ಲಿ ವೀಕ್ಷಿಸುವಂತೆ ಅಧ್ಯಕ್ಷ ಪ್ರೊ| ಹೆಚ್.ಆರ್. ಶಂಕರನಾರಾಯಣ ಶಾಸ್ತ್ರಿ, ಉಪಾಧ್ಯಕ್ಷ ಮೋಹನ ಶಾಸ್ತ್ರಿ, ಕಾರ್ಯದರ್ಶಿ ವಿನಯ್ ಶಿವಮೊಗ್ಗ ಅವರು ಕೋರಿದ್ದಾರೆ.

## ಕೆಲಗೇರಿ ಕೆರೆ ಅವ್ಯವಸ್ಥೆ ವಿಚಾರಕ್ಕೆ

# ಸ್ವಯಂಪ್ರೇರಿತ ಪ್ರಕರಣ ದಾಖಲು: ಉಪ ಲೋಕಾಯುಕ್ತ ನ್ಯಾ.ಕೆ.ಎನ್. ಫಣೀಂದ್ರ


**ಧಾರವಾಡ, ನ.21–** ಐತಿಹಾಸಿಕ ಕೆಲಗೇರಿ ಕೆರೆ ಅವ್ಯವಸ್ಥೆ ವಿಚಾರಕ್ಕೆ ಸಂಬಂಧಿಸಿದಂತೆ ಕರ್ನಾಟಕ ಲೋಕಾಯುಕ್ತದಲ್ಲಿ ಸ್ವಯಂ ಪ್ರೇರಿತ ಪ್ರಕರಣ ದಾಖಲಿಸಿಕೊಳ್ಳಲಾಗುವುದು ಎಂದು ಉಪ ಲೋಕಾಯುಕ್ತ ನ್ಯಾಯಮೂರ್ತಿ ಕೆ.ಎನ್. ಫಣೀಂದ್ರ ವಾರ್ನಿಂಗ್ ಕೊಟ್ಟಿದ್ದಾರೆ.



ಕೆಲಗೇರಿ ಕೆರೆಗೆ ದಿಢೀರ್ ಭೇಟಿ ನೀಡಿ ಮಾಧ್ಯಮದವರೊಂದಿಗೆ, "ಕೆಲಗೇರಿ ಕೆರೆ ಅವ್ಯವಸ್ಥೆ ಬಗ್ಗೆ ಸಾರ್ವಜನಿಕರಿಂದ, ನಿತ್ಯ ಯೋಗ ಮಾಡುವ ಹಿರಿಯ ನಾಗರಿಕರಿಂದ ಸಾಕಷ್ಟು ದೂರುಗಳು ಬಂದಿದ್ದವು. ಹೀಗಾಗಿ ಇಲ್ಲಿಗೆ ಬಂದು ಪರಿಶೀಲನೆ ಮಾಡಿದೆ. ಜನ ಹೇಳಿದ್ದಕ್ಕಿಂತ ಜಾಸ್ತಿ ಅವ್ಯವಸ್ಥೆ ಕಂಡಿದೆ. ಕೆರೆಗೆ ಒಂದು ಬೇಲಿ ಇಲ್ಲ. ಕೆರೆಯ ಮಾಲೀಕತ್ವ ಕೃಷಿ ವಿವಿಯ ಕೈಯಲ್ಲಿದೆ. ಪಾಲಿಕೆ ಅಥವಾ ಜಿಲ್ಲಾಡಳಿತಕ್ಕೆ ಅದನ್ನು ಹಸ್ತಾಂತರ ಮಾಡಿಲ್ಲ. ಹಾಗಾಗಿ ಕೆರೆಯನ್ನು ಅವರು ಸ್ವಚ್ಛಗೊಳಿಸಬೇಕು ಎಂದು ಇವರು, ಇವರು ಮಾಡಬೇಕು ಅಂತ ಅವರು ಬಿಟ್ಟಿದ್ದಾರೆ. ಒಟ್ಟಿನಲ್ಲಿ ಕೆರೆಯನ್ನು ಸ್ವಚ್ಛಗೊಳಿಸುವ ಕೆಲಸ ಆಗಿಲ್ಲ" "ಪರಿಶೀಲನೆ ವೇಳೆ, ದಾರಿಯಲ್ಲಿ ಕಳೆ ಗಿಡಗಳು ಬೆಳೆದಿದ್ದು, ಬೇಲಿ ಇಲ್ಲದೆ, ಸಾರ್ವಜನಿಕರು ಓಡಾಡಲು ತುಂಬಾ ತೊಂದರೆ ಉಂಡು ಮಾಡುತ್ತಿದೆ. ಇಲ್ಲಿ ಬೆಳೆದ ಕಳೆ ಗಿಡಗಳು ಈ ಮಳೆಗೆ ಬೆಳೆದಿದ್ದು ಅಲ್ಲ. ಬಹಳ ದಿನಗಳಿಂದ ಬೆಳೆದ ಗಿಡಗಳವು. ತ್ಯಾಜ್ಯ ನೀರು ಸಹ ಬಂದು ಸೇರುತ್ತಿದೆ. ಅದಕ್ಕೆ ಸರಿಯಾದ ಕಾಲುವೆ ನಿರ್ಮಿಸಿಲ್ಲ. ಇರುವ ಕಾಲುವೆಗಳನ್ನೂ ಸ್ವಚ್ಛವಾಗಿ ಇಟ್ಟು ಕೊಂಡಿಲ್ಲ. ಕಸವನ್ನು ತಂದು ಇಲ್ಲಿ ರಾಶಿ ಹಾಕಲಾಗಿದೆ. ಎಲ್ಲ ಅವ್ಯವಸ್ಥೆಗಳು ಎದ್ದು ಕಾಣುತ್ತಿವೆ. ಸಾರ್ವಜನಿಕರು ನಡೆದಾಡುವ ದಾರಿ ಯನ್ನು 20 ದಿನಗಳಲ್ಲಿ ಸ್ವಚ್ಛ ಮಾಡುತ್ತೇವೆ ಎಂದು ಪಾಲಿಕೆಯವರು ಹೇಳಿದ್ದಾರೆ. 20 ದಿನಗಳಲ್ಲಿ ಎಲ್ಲ ಸ್ವಚ್ಛ ಮಾಡಿ ವಿಡಿಯೋ, ಫೋಟೋ ಕಳುಹಿಸಬೇಕು. ಎಸ್ಟಿಪಿ ಪ್ಲ್ಯಾಂಟ್ ಸಹ ಆರಂಭಿಸಲು ಗಡುವು ಕೊಟ್ಟಿದ್ದೇನೆ. ಇಲ್ಲವಾದಲ್ಲಿ ಸ್ವಯಂಪ್ರೇರಿತ ಕೇಸ್ ಮಾಡಿಕೊಳ್ಳುತ್ತೇವೆ. ಹೊಣೆಗಾರರನ್ನೆಲ್ಲ ಪಾರ್ಟಿ ಮಾಡಿ ಕೇಸ್ ಮಾಡಲಾಗುವುದು" ಎಂದರು.

# ಕೇಂದ್ರದ ಮಾನದಂಡದಂತೆ ಬಿಪಿಎಲ್ ಕಾರ್ಡ್‌ಗಳ ಪರಿಷ್ಕರಣೆ ಸಂಪೂರ್ಣ: ಪುಷ್ಪ ಅಮರನಾಥ್

**ಮೈಸೂರು, ನ.21–** ಕೇಂದ್ರ ಸರ್ಕಾರದ ಮಾನದಂಡದಂತೆ ಬಿಪಿಎಲ್ ಕಾರ್ಡ್‌ಗಳ ಪರಿಷ್ಕರಣೇ ಆಗಿದೆ ಎಂದು ಗ್ಯಾರಂಟಿ ಯೋಜನೆಗಳ ಅನುಷ್ಠಾನದ ರಾಜ್ಯ ಉಪಾಧ್ಯಕ್ಷೆ ಪುಷ್ಪ ಅಮರನಾಥ್ ತಿಳಿಸಿದರು.




ಇಂದು ಮೈಸೂರಿನ ಜಿ. ಪಂ ಸಭಾಂಗಣದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಬಹಳ ಯಶಸ್ವಿಯಾಗಿ ರಾಜ್ಯದಲ್ಲಿ ಗ್ಯಾರಂಟಿ ಅನುಷ್ಠಾನ ಆಗಿದೆ. ಇಡೀ ದೇಶವೇ ನಮ್ಮ ರಾಜ್ಯದತ್ತ ತಿರುಗಿ ನೋಡುವ ಮಟ್ಟಿಗೆ ಯಶಸ್ವಿಯಾಗಿದೆ. ಇಂದು ರಾಜ್ಯದಲ್ಲಿ ಹೆಚ್ಚು ಚರ್ಚೆ ಆಗುತ್ತಿರುವ ವಿಚಾರ. ಅನ್ನಭಾಗ್ಯ ಯೋಜನೆಯಡಿ ಬಿಪಿಎಲ್ ಕಾರ್ಡುಗಳ ಕಿತ್ತುಕೊಳ್ಳುತ್ತಿದ್ದಾರೆ ಎಂದು ವಿಪಕ್ಷ ನಾಯಕರು ಆರೋಪ ಮಾಡುತ್ತಿದ್ದಾರೆ.

ನಾನು ಮೈಸೂರು ಭಾಗದ 8 ಜಿಲ್ಲೆಗಳ ಉಸ್ತುವಾರಿ ಇದ್ದೇನೆ. ನಮ್ಮ ಮೈಸೂರು ಜಿಲ್ಲೆಯಲ್ಲಿ ಒಟ್ಟು 6,91,370 ಬಿಪಿಎಲ್, ಅಂತ್ಯೋದಯ ಕಾರ್ಡುದಾರರಿದ್ದಾರೆ. ಇದು ಕೇಂದ್ರ ಸರ್ಕಾರದ ಆದೇಶದಂತೆ ಒಂದಷ್ಟು ಪರಿಷ್ಕರಣೆ ಮಾಡಬೇಕೆಂದು ಸರ್ಕಾರ ನಿರ್ಧಾರ ಮಾಡಿದೆ. ಈಗ ನಮ್ಮ ಜಿಲ್ಲೆಯಲ್ಲಿ 4221 ಕಾರ್ಡುಗಳು ಮಾತ್ರ ರದ್ದಾಗಿದೆ. ಅದರಲ್ಲಿ ಏನಾದರೂ ಅರ್ಹ ಫಲಾನುಭವಿಗಳಿಗೆ ತೊಂದರೆಯಾಗಿದ್ದರೆ ಮತ್ತೊಮ್ಮೆ ಅರ್ಜಿ ಹಾಕಿ ಪಡೆಯಬಹುದು. ಮಾನದಂಡದ ವ್ಯಾಪ್ತಿಯಲ್ಲಿ ಅತಾಚುರ್ಯದಿಂದ ಕೈ ಬಿಟ್ಟಿದ್ದರೆ ಮತ್ತೆ ಸೇರಿದಂತೆ ಕೊಳ್ಳಲು ಅವಕಾಶ ಮಾಡಿಕೊಡಲಾಗುತ್ತದೆ. ಯಾರೂ ಕೂಡ ಆತಂಕಕ್ಕೆ ಒಳಗಾಗಬಾರದು ಎಂದು ಹೇಳಿದರು. ಬಿಪಿಎಲ್ ಕಾರ್ಡುಗಳ ರದ್ದು ಮಾಡಿ ಅನ್ನಭಾಗ್ಯ ಹೊರೆ ಕಡಿಮೆ ಮಾಡಿಕೊಳ್ಳಲು ಯತ್ನವನ್ನ ಸರ್ಕಾರ ಮಾಡುತ್ತಿದೆ ಎಂಬ ವಿಪಕ್ಷಗಳ ಆರೋಪ ಸತ್ಯಕ್ಕೆ ದೂರವಾದದ್ದು. ಇವರು ರಾಜಕೀಯ ಲಾಭಕ್ಕಾಗಿ ಇಲ್ಲಸಲ್ಲದ ಆರೋಪ ಮಾಡುತ್ತಿದ್ದಾರೆ. ಇನ್ನೂ 10 ಲಕ್ಷ ಜನ ಇದ್ದರೂ ಕೂಡ ಕೊಡಲು ಸರ್ಕಾರ ಸಿದ್ಧವಿದೆ. ಕಣ್ತಪ್ಪಿನಿಂದ ಏನಾದರೂ ಸಣ್ಣ ಪುಟ್ಟ ಲೋಪ ದೋಷಗಳು ಆಗಿದ್ದರೆ, ಅವುಗಳನ್ನ ಸರಿಪಡಿಸುವ ಕೆಲಸ ಮಾಡುತ್ತವೆ. ಅರ್ಹರಿಗೆ ಯಾವುದೇ ಸೌಲಭ್ಯಗಳು ವಂಚಿತರಾಗಲು ಬಿಡುವುದಿಲ್ಲ ಎಂದು ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ವತಿಯಿಂದ ನಾನು ಗ್ಯಾರಂಟಿ ಕೊಡುತ್ತೇನೆ ಎಂದು ಪುಷ್ಪಾ ಅಮರನಾಥ್ ಹೇಳಿದರು.

ನಮ್ಮ ನಡಿಗೆ ಗ್ಯಾರಂಟಿ ಅನುಷ್ಠಾನದ ಕಡೆಗೆ ಎಂಬ ಅಭಿಯಾನ ಆರಂಭಿಸಿ ಯಾರಿಗೆ ಬಿಪಿಎಲ್ ಕಾರ್ಡುಗಳಿಂದ ಕೈಬಿಟ್ಟಿದೆ, ಯಾರಿಗೆ ಗೃಹಲಕ್ಷ್ಮಿ ಹಣ ಬರ್ತಾ ಇಲ್ಲ ಎಂಬ ಎಲ್ಲಾ ಬಡವರ ಸಮಸ್ಯೆಗಳನ್ನು ಹತ್ತಿರದಿಂದ ಅರಿಯಲು ರೂಪರೇಖೆಗಳನ್ನ ತಯಾರಿ ಮಾಡುತ್ತಿದ್ದೇವೆ. ಬಡವರು ಹೆಚ್ಚು ವಾಸಿಸುವ ಕೊಳಚೆ ಪ್ರದೇಶಗಳು, ಬಡವರ ಬಡಾವಣೆಗಳಿಗೆ ಹೋಗಿ ಸಮಸ್ಯೆ ಬಗೆಹರಿಸುವ ಕೆಲಸ ಮಾಡುತ್ತೇವೆ. ಬಿಪಿಎಲ್ ಇಂದ ಎಪಿಎಲ್ ಗೆ ಬದಲಾವಣೆ ಮಾಡಿದ್ರೆ ಗೃಹಲಕ್ಷ್ಮಿ ಯೋಜನೆ ಯಾವುದೇ ಕಾರಣಕ್ಕೂ ನಿಲ್ಲಲ್ಲ. ಎಪಿಎಲ್ ಕುಟುಂಬದ ಯಜಮಾನಿಗೂ ಎರಡು ಸಾವಿರ ಬರುತ್ತದೆ. ಯಾರೂ ಆತಂಕಪಡಬೇಕಾಗಿಲ್ಲ. ಇದನ್ನೆಲ್ಲ ಪರಿಶೀಲನೆ ಮಾಡಲು ಈಗಾಗಲೇ ಅಂಗನವಾಡಿ, ಆಶಾ ಕಾರ್ಡುದಾರರ ಪರಿಶೀಲನೆ ಮಾಡಿಸುತ್ತೇವೆ. ಜಿಲ್ಲೆಯ ಪ್ರತಿ ತಾಲ್ಲೂಕುವಾರು ಗ್ಯಾರಂಟಿ ಅದಾಲತ್ ಮಾಡುತ್ತೇವೆ. 15 ದಿನಗಳಲ್ಲಿ ಗ್ಯಾರಂಟಿ ಅದಾಲತ್ ಮಾಡುತ್ತೇವೆ. ಯಾರಿಗಾದರೂ ಗ್ಯಾರಂಟಿ ಸರಿಯಾಗಿ ತಲುಪಿಲ್ಲದಿದ್ದರೆ ಅರ್ಹರಿಗೆ ಸೌಲಭ್ಯ ಕೊಡಿಸುವ ಕೆಲಸ ಮಾಡುತ್ತೇವೆ ಎಂದು ಪುಷ್ಪಾ ಅಮರನಾಥ್ ತಿಳಿಸಿದರು.

# 10ಕೆಜಿ ಅಕ್ಕಿ ಕೊಡಲಾಗದೆ ಬಡವರ ರೇಷನ್ ಕಾರ್ಡ್ ರದ್ದು ಮಾಡುತ್ತಿರುವ ಸರ್ಕಾರ: ಛಲವಾದಿ ನಾರಾಯಣಸ್ವಾಮಿ ಟೀಕೆ

**ಕಲಬುರಗಿ, ನ.21–** ಕರ್ನಾಟಕದಲ್ಲಿ ಅನರ್ಹ ರೇಷನ್ ಕಾರ್ಡ್‌ಗಳನ್ನು ರದ್ದು ಮಾಡಲು ರಾಜ್ಯ ಸರ್ಕಾರ ಕಠಿಣ ಕ್ರಮಕೈಗೊಂಡಿದೆ. 10 ಕೆಜಿ ಅಕ್ಕಿ ಕೊಡಲಾಗದೇ ಅಸಮರ್ಥವಾದ ಸರ್ಕಾರ ಸದ್ದಿಲ್ಲದೆ ಬಿಪಿಎಲ್ ಕಾರ್ಡ್ ಆಪರೇಷನ್‌ಗೆ ಇಳಿದಿದೆ. ಈಗಾಗಲೇ ಹಲವು ಜಿಲ್ಲೆಗಳಲ್ಲಿ ಲಕ್ಷಾಂತರ ಬಿಪಿಎಲ್ ಕಾರ್ಡ್‌ಗಳನ್ನು ಪತ್ತೆ ಮಾಡಿ ರದ್ದು ಮಾಡಿದೆ ಎಂದು ವಿಧಾನ ಪರಿಷತ್ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ ಆಕ್ರೋಶ ವ್ಯಕ್ತಪಡಿಸಿದರು.



ಸುದ್ದಿಗಾರರೊಂದಿಗೆ, ಚುನಾವಣೆಯಲ್ಲಿ ಹತ್ತು ಕೆಜಿ ಅಕ್ಕಿ ಕೊಡಿ ಎಂದು ಇವರಿಗೆ ಯಾರೂ ಕೇಳಿರಲಿಲ್ಲ. ಅಧಿಕಾರದ ದುರಾಸೆಯಿಂದ ಬಡವರಿಗೆ 10 ಕೆಜಿ ಅಕ್ಕಿ ಘೋಷಣೆ ಮಾಡಿ ಅದನ್ನ ಕೊಡೋಕೆ ಆಗದಿರುವ ಕಾರಣ ಈ ಸರ್ಕಾರ ರೇಷನ್ ಕಾರ್ಡ್‌ಗಳನ್ನೇ ರದ್ದು ಮಾಡುತ್ತಿದೆ ಎಂದು ಆರೋಪಿಸಿದರು.

ಬಡವರ ಬಿಪಿಎಲ್ ಕಾರ್ಡ್ ರದ್ದು ಮಾಡಲಾಗ್ತಿದೆ. ಬಿಪಿಎಲ್ ಕಾರ್ಡ್ ದಾರರನ್ನ ಎಪಿಎಲ್ ಮಾಡ್ತಿದ್ದಾರೆ. ಬಿಪಿಎಲ್ ಕಾರ್ಡ್ ದಾರರ ಪರಿಸ್ಥಿತಿಯೇ ಸರಿಯಿಲ್ಲ, ಅಂತಹವರ ಬಿಪಿಎಲ್ ಕಾರ್ಡ್ ಕಸಿದುಕೊಳ್ಳಲಾಗ್ತಿದೆ. ಬಿಪಿಎಲ್ ಕಾರ್ಡ್ ತೆಗೆಯಬೇಡಿ, ಅವರಿಗೆ ಒಂದೇ ಸಾರಿ ಅವಕಾಶ ಕೊಡಿ.. ಅವರ ಆದಾಯ ಅವರು ಡಿಕ್ಲೇರ್ ಮಾಡಿಕೊಳ್ಳಲಿ ಎಂದು ಹೇಳಿದರು.

**ಸರ್ಕಾರದ್ದೇ ಸರ್ವರ್ ಡೌನ್:** ಎಪಿಎಲ್‌ಗೆ ಹೋಗಲು ಬಿಪಿಎಲ್ ಕಾರ್ಡ್‌ದಾರರು ಅರ್ಹರಿದ್ದಾರಾ ಪರಿಶೀಲನೆ ಮಾಡಬೇಕು. ಡೂಪ್ಲಿಕೇಟ್ ಇದ್ರೆ ಕಾರ್ಡ್‌ಗಳನ್ನ ರದ್ದು ಮಾಡಲಿ. ಚುನಾವಣೆ ಹೊತ್ತಲ್ಲಿ ಹತ್ತು ಕೆಜಿ ಅಕ್ಕಿ ಕೊಡ್ತೀನಿ ಅಂದ್ರು ಆದರೆ ಈಗ ಅಧಿಕಾರಕ್ಕೆ ಬಂದ ಬಳಿಕ ಕೊಡಲು ಆಗಲಿಲ್ಲ, ಅದಕ್ಕೆ ರೇಷನ್ ಕಾರ್ಡ್ ಗಳನ್ನೇ ರದ್ದು ಮಾಡಲು ಸರ್ಕಾರ ಮುಂದಾಗಿದೆ. ಅನೇಕರಿಗೆ ದುಡ್ಡು ಬಂದಿಲ್ಲ, ಸರ್ವರ್ ಡೌನ್ ಅಂತಿದ್ದಾರೆ. ಆದ್ರೆ ಸರ್ಕಾರದ್ದೇ ಸರ್ವರ್ ಡೌನ್ ಅಗಿದೆ ಹಾಗಾಗಿ ಎಲ್ಲದರ ಮೇಲೂ ಟ್ಯಾಕ್ಸ್ ಏರಿಸುತ್ತಿದ್ದಾರೆ ಎಂದು ಕಿಡಿಕಾರಿದರು.

ರಾಜ್ಯ ಕಾಂಗ್ರೆಸ್ ಸರ್ಕಾರ ಭ್ರಷ್ಟಾಚಾರದಲ್ಲಿ ಮುಳುಗಿ ಹೋಗಿದೆ. ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದು 18 ತಿಂಗಳು ಆಯ್ತು. ರಾಜ್ಯದಲ್ಲಿ ಒಂದೆ ಒಂದೂ ಅಭಿವೃದ್ಧಿ ಕೆಲಸ ಆಗಿಲ್ಲ. ದಿನಕ್ಕೊಂದು ಹಗರಣ ಬಯಲಿಗೆ ಬರುತ್ತಿವೆ. ನಮಗೂ ಕೂಡ ಭ್ರಷ್ಟಾಚಾರದ ವಿರುದ್ಧ ಹೋರಾಟ ಮಾಡೋದೆ ಕೆಲಸ ಆಗೋಗಿದೆ. ಸಿಎಂ ಸಿದ್ದರಾಮಯ್ಯ ಯಾವತ್ತೋ ರಾಜೀನಾಮೆ ಕೊಡಬೇಕಾಗಿತ್ತು, ಆದ್ರೆ ಕೊಡಲಿಲ್ಲ. ವಾಲ್ಮೀಕಿ ಹಗರಣ ಬೆಳಕಿಗೆ ಬಂದು ನಾಗೇಂದ್ರ ತಲೆದಂಡ ಆಯ್ತು. ಮೂಡಾ ಹಗರಣ ಬೆಳಕಿಗೆ ಬಂತು, ಅದರಲ್ಲಿ ಸಿದ್ದರಾಮಯ್ಯ ಮೇಲೆ ಆರೋಪ ಬಂದಿವೆ. ಸಚಿವ ಪ್ರಿಯಾಂಕ ಖರ್ಗೆ ಅವರ ಮೇಲೂ ಐದು ಎಕರೆ ಜಮೀನು ಹಗರಣ ಬಂದು, ಅವರು ಜಮೀನು ವಾಪಸ್ ಕೊಟ್ಟರು. ಅಂದರೆ ಇವರೂ ಆರೋಪಿಗಳೇ ಅಲ್ಲವೇ? ಇವರ್‍ಯಾಕೆ ರಾಜಿನಾಮೆ ಕೊಡಲಿಲ್ಲ ಎಂದು ಪ್ರಶ್ನಿಸಿದರು.

ಇನ್ನು ರಾಜ್ಯದ ಮೂರು ಕ್ಷೇತ್ರಗಳ ಬೈ ಎಲೆಕ್ಷನ್ ವಿಚಾರಕ್ಕೆ ಪ್ರತಿಕ್ರಿಯಿಸಿ, ಮೂರು ಕ್ಷೇತ್ರಗಳಲ್ಲಿ ಎನ್ ಡಿಎ ಅಭ್ಯರ್ಥಿಗಳು ಗೆಲ್ಲುತ್ತಾರೆ ಎಂದು ಛಲವಾದಿ ವಿಶ್ವಾಸ ವ್ಯಕ್ತಪಡಿಸಿದರು.

### ಜಮೀರ್‌ಗೆ ಧನ್ಯವಾದ

ವಕ್ಫ್ ವಿಚಾರದಲ್ಲಿ ಎಲ್ಲ ಹಿಂದೂಗಳ ಮನೆ, ಮಠ, ಮಂದಿರಗಳ ಭೂಮಿಗಳ ಪಹಣಿಯಲ್ಲಿ ವಕ್ಫ್ ಸೇರ್ಪಡೆ ಮಾಡುವ ಮೂಲಕ ಹಿಂದೂಗಳು ಒಗ್ಗೂಡುವಂತೆ ಮಾಡಿರುವ ಸಚಿವ ಜಮೀರ್ ಅಹ್ಮದ್‌ಗೆ ಧನ್ಯವಾದ ಹೇಳುತ್ತೇನೆ. ರಾಜ್ಯದಲ್ಲಿ ವಕ್ಫ್ ಹೆಸರಿನಲ್ಲಿ ಲ್ಯಾಂಡ್ ಜಿಹಾದ್ ನಡೆಯುತ್ತಿದೆ. ಇದರ ವಿರುದ್ಧ ಇದೀಗ ನಾವೆಲ್ಲಾ ಒಗ್ಗಟ್ಟಾಗಿ ಹೋರಾಟ ಮಾಡುತ್ತಿದ್ದೇವೆ. ಹಿಂದೂಗಳಲ್ಲಿ ಒಗ್ಗಟ್ಟು ಮೂಡಿಸಲು ಕಾರಣವಾದ ಜಮೀರ ಅಹ್ಮದ್‌ಗೆ ಧನ್ಯವಾದ. ಮಲಗಿದ್ದ ಹಿಂದೂಗಳನ್ನು ಎಬ್ಬಿಸುವ ಕೆಲಸ ಜಮೀರ್ ಅಹಮದ್ ಮಾಡಿದ್ದಾರೆ. ಈ ಕೆಲಸಕ್ಕೆ ಜಮೀರ್ ಅಹ್ಮದರನ್ನ ಭಗವಂತ ಕಳುಹಿಸಿದ್ದಾನೆ. ಅನ್ಯ ಧರ್ಮಿಯರಿಂದ ಏನೇ ಕೊಡುಗೆ, ಭಿಕ್ಷೆ ಪಡೆಯಬಾರದು ಎಂದು ಇಸ್ಲಾಂ ಹೇಳುತ್ತದೆ. ಕಾಫಿರರಿಂದ ಏನನ್ನು ತಗೊಳ್ಳಬಾರದು ಎಂದು ಹೇಳ್ತಾರೆ. ಹಾಗಾದ್ರೆ ವಕ್ಫ್ ಬೋರ್ಡ್‌ಗೆ ಜಮೀನು ಕೊಟ್ಟವರಾರು. ಮಠ ಮಾನ್ಯಗಳ ಆಸ್ತಿ ವಕ್ಫ್ ಬೋರ್ಡ್‌ಗೆ ಬರಲು ಕಾರಣ ಏನು? ಆಸ್ತಿಗೆ ಸಂಬಂಧಿಸಿದ ಖರೀದಿ ಪತ್ರ ಇಲ್ಲದಿದ್ರೆ ಯಾರದೇ ಆಸ್ತಿ ಓನರ್ ಶಿಪ್ ಪ್ರೂ ಮಾಡಲು ಸಾಧ್ಯವೇ ಇಲ್ಲ ಸರಕಾರ ಕೂಡಲೇ ಕ್ಯಾಬಿನೆಟ್‌ನಲ್ಲಿ ನಿರ್ಣಯ ಕೈಗೊಂಡು ವಕ್ಫ್ ಬೋರ್ಡ್ ಅಧಿಕಾರ ವಾಪಾಸ್ ಪಡೆಯಬೇಕು. ಸಿಎಂ ಸಿದ್ದರಾಮಯ್ಯ ರೈತರ ಜಮೀನಿನಲ್ಲಿ ವಕ್ಫ್ ಹೆಸರು ಬಂದಿದ್ದು ತಡೆ ಹಿಡಿಯಲು ಆದೇಶಿಸಿದ್ದಾರೆ. ಆದರೆ ಶಾಶ್ವತವಾಗಿ ರೈತರಿಗೆ ಗಂಡಾಂತರ ತಪ್ಪಿದ್ದಲ್ಲ ಎಂದು ಹೇಳಿದರು.



ಕಸ್ತೂರಿ ರಂಗನ್ ವರದಿ ವಿರೋಧಿಸಿ ರಾಜ್ಯ ಅರಣ್ಯ ಭೂಮಿ ಹಕ್ಕು ಹೋರಾಟಗಾರರ ವೇದಿಕೆ ಕಾರ್ಯಕರ್ತರು ಗುರುವಾರ ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಪ್ರತಿಭಟನೆ ನಡೆಸಿದರು.

# ವಚನ ಸಾಹಿತ್ಯದ ಮೂಲಕ ಆದರ್ಶಮೌಲ್ಯ ಬಿತ್ತಿದ ಶರಣರು: ರಂಭಾಪುರಿ ಜಗದ್ಗುರು

**ಬಸವಕಲ್ಯಾಣ, ನ.21–** ಹನ್ನೆರಡನೇ ಶತಮಾನದಲ್ಲಿನ ಶರಣರ ಕಾಯಕ ಭೂಮಿ, ಅಧ್ಯಾತ್ಮಿಕ ಕ್ಷೇತ್ರ, ವಚನ ಸಾಹಿತ್ಯದ ಮೂಲಕ ಆದರ್ಶ ಮೌಲ್ಯಗಳು ಬಿತ್ತಿದ ಪವಿತ್ರ ಭೂಮಿಯಲ್ಲಿ 34ನೇ ದಸರಾ ದರ್ಬಾರ ಜರುಗಲಿರುವುದು ಬಹಳಷ್ಟು ಮಹತ್ವ ಪಡೆದಿದೆ. ಹೀಗಾಗಿ ಎಲ್ಲರೂ ಸೇರಿ ಇದನ್ನು ಯಶಸ್ವಿಗೊಳಿಸಬೇಕು ಎಂದು ರಂಭಾಪುರಿ ಜಗದ್ಗುರು ಡಾ. ವೀರಸೋಮೇಶ್ವರ ರಾಜದೇಶಿಕೇಂದ್ರ ಶಿವಾಚಾರ್ಯ ಭಗವತ್ಪಾದರು ಕರೆ ನೀಡಿದರು.

2025ರಲ್ಲಿ ಬಸವಕಲ್ಯಾಣದಲ್ಲಿ ಜರುಗಲಿರುವ ಶರನ್ನವರಾತ್ರಿ ದಸರಾ ಧರ್ಮ ಸಮ್ಮೇಳನದ ನಿಮಿತ್ಯ ತಾಲ್ಲೂಕಿನ ಹಾರಕೂಡ ಶ್ರೀಮಠದಲ್ಲಿ ಜರುಗಿದ ಪೂರ್ವಭಾವಿ ಸಭೆಯನ್ನು ಉದ್ಘಾಟಿಸಿ ಮಾತನಾಡಿ, ಈ ಹಿಂದೆ ಜಮಖಂಡಿ ಮತ್ತು ಬಳ್ಳಾರಿಯಲ್ಲಿ 34ನೇ ದಸರಾ ದರ್ಬಾರಕ್ಕೆ ಭಕ್ತರು ಸಮಯ ಕೇಳಿದ್ದರು. ಆದರೆ, ಬಸವಕಲ್ಯಾಣ ಕ್ಷೇತ್ರದ ಶಾಸಕ ಶರಣು ಸಲಗರ ಅವರ ನೇತೃತ್ವದಲ್ಲಿ ಆಗಮಿಸಿ ಭಕ್ತರಿಗೆ ಕಲ್ಯಾಣದಲ್ಲಿ ಆಚರಿಸಲು ಸಮಯ ಕೇಳಿದ ನಿಮಿತ್ಯ ಕಲ್ಯಾಣದಲ್ಲಿ ಈ ಬಾರಿ ಆಚರಿಸಲು ಸಮಯ ನಿಗದಿ ಪಡಿಸಲಾಗಿದೆ ಎಂದರು.



ಬಸವಕಲ್ಯಾಣ ತಾಲ್ಲೂಕಿನ ಹಾರಕೂಡ ಶ್ರೀಮಠದಲ್ಲಿ ನಡೆದ ಶರನ್ನವರಾತ್ರಿ ದಸರಾ ಧರ್ಮ ಸಮ್ಮೇಳನದ ಪೂರ್ವಭಾವಿ ಸಭೆಯನ್ನು ರಂಭಾಪುರಿ ಜಗದ್ಗುರು ಡಾ. ವೀರಸೋಮೇಶ್ವರ ರಾಜದೇಶಿಕೇಂದ್ರ ಶಿವಾಚಾರ್ಯ ಭಗವತ್ಪಾದರು ಉದ್ಘಾಟಿಸಿದರು.

ಇದೆ ವೇಳೆಯಲ್ಲಿ ಕಲ್ಯಾಣದಲ್ಲಿ ಜರುಗಲಿರುವ 34ನೇ ದಸರಾ ದರ್ಬಾರ ನಿಮಿತ್ಯ ಸ್ವಾಗತ ಸಮಿತಿ ರಚಿಸಲಾಗಿದ್ದು, ಹಾರಕೂಡದ ಡಾ. ಚೆನ್ನವೀರ ಶಿವಾಚಾರ್ಯರು ಗೌರವಾಧ್ಯಕ್ಷರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಅಧ್ಯಕ್ಷ ಮತ್ತು ಶಾಸಕ ಶರಣು ಸಲಗರ ಕಾರ್ಯಾಧ್ಯಕ್ಷರಾಗಿ ಕೆಲಸ ಮಾಡುವರು ಎಂದು ವೇದಿಕೆಯ ಮೂಲಕ ಘೋಷಣೆ ಮಾಡಿದರು.

ಹಿರನಾಗಾಂವ್‌ನ ಶ್ರೀ ಜಯ ಶಾಂತಲಿಂಗ ಸ್ವಾಮೀಜಿ ಮಾತನಾಡಿ ಭಕ್ತರು ನನಗೆ ನೀಡಿದ ದೇಣಿಗೆಯಲ್ಲಿ ಕಲ್ಯಾಣದಲ್ಲಿ ನಡೆಯುವ 34ನೇ ದಸರಾ ದರ್ಬಾರ ಕಾರ್ಯಕ್ರಮಕ್ಕೆ ವೈಯಕ್ತಿಕವಾಗಿ 2 ಲಕ್ಷ 51 ಸಾವಿರ ರೂ. ನೀಡುವೆ. ತ್ರೀಪುರಾಂತ್‌ನ ಶ್ರೀ ಡಾ. ಅಭಿನವ ಘನಲಿಂಗ ರುದ್ರಮುನಿ ಶಿವಾಚಾರ್ಯರು ಮತ್ತು ಶಾಸಕ ಶರಣು ಸಲಗರ್ ಮಾತನಾಡಿದರು.

ಶರಣಪ್ಪ ಬಿರಾದಾರ, ಬಿಡಿಪಿಸಿ ಅಧ್ಯಕ್ಷ ಬಸವರಾಜ ಕೋರಕೆ, ರಾಜಕುಮಾರ ಸಿರಗಾಪೂರ, ಸುನೀಲ ಪಾಟೀಲ್, ಚಂದ್ರಶೇಖರ ಪಾಟೀಲ್, ಸೋಮಶೇಖರ ವಸ್ತ್ರದ, ಶ್ರೀಕಾಂತ ಬಡದಾಳೆ, ಮೇಘರಾಜ ನಾಗರಾಳೆ, ಸುಭಾಷ ಮತ್ತಿತರರಿದ್ದರು.

# ಬೀದರ್ ಜಿಲ್ಲೆಗೆ 10 ಕೋಟಿ ರೂ. ಮುಂಗಾರು ಬೆಳೆ ಪರಿಹಾರ ಬಿಡುಗಡೆ

**ಬೀದರ್, ನ.21–** ಪ್ರಸಕ್ತ ಸಾಲಿನ ಮುಂಗಾರು ಹಂಗಾಮಿಗೆ ಜಿಲ್ಲೆಯಲ್ಲಿ 17,460 ಹೆಕ್ಟರ್ ಪ್ರದೇಶದಲ್ಲಿ ಬೆಳೆ ಹಾನಿಯಾಗಿದ್ದು, ಸರ್ಕಾರವು 13.76 ಕೋಟಿ ರೂ.ಗಳ ಪೈಕಿ 10 ಕೋಟಿ ರೂ. ಪರಿಹಾರ ಸರ್ಕಾರ ಬಿಡುಗಡೆ ಮಾಡಿದೆ. ರೈತರ ಖಾತೆಗಳಿಗೆ ನೇರವಾಗಿ ಡಿಬಿಟಿ ಮೂಲಕ ಜಮೆಯಾಗಲಿದೆ ಎಂದು ಮಂತ್ರಿ ಈಶ್ವರ್ ಖಂಡ್ರೆ ತಿಳಿಸಿದರು.



ಕೆಡಿಪಿ ತ್ರೈಮಾಸಿಕ ಸಭೆಯ ನಂತರ ಮಾತನಾಡಿದ ಅವರು, ಈ ಬಾರಿ ಜಿಲ್ಲೆಯಲ್ಲಿ ಉತ್ತಮ ಮಳೆಯಾಗಿದ್ದು, ಸಾಕಷ್ಟು ಬೆಳೆ ಹಾನಿಯಾಗಿದೆ. ಸರ್ಕಾರ 10 ಕೋಟಿ ರೂ. ಪರಿಹಾರ ಬಿಡುಗಡೆ ಮಾಡಿದ್ದು ಇನ್ನೂ 3.76 ಕೋಟಿ ರೂ. ಬರಲಿದೆ ಜಿಲ್ಲೆಯ 15 ಸಾವಿರ ರೈತರ ಖಾತೆಗಳಿಗೆ ಮುಂಗಾರು ಬೆಳೆ ಪರಿಹಾರ ನೇರವಾಗಿ ಜಮೆಯಾಗಲಿದೆಯೆಂದು ಅವರು ತಿಳಿಸಿದರು.

ಕೃಷಿ, ತೋಟಗಾರಿಕೆ, ಆರೋಗ್ಯ, ಶಿಕ್ಷಣ, ಕುಡಿಯುವ ನೀರು ಸೇರಿದಂತೆ ವಿವಿಧ ಇಲಾಖೆಗಳ ಸಮಗ್ರ ಕಾರ್ಯಕ್ರಮಗಳ ಪ್ರಗತಿ ಪರಿಶೀಲಿಸಿ, ಮುಂಗಾರು ಬೆಳೆ ವಿಮೆ ಯೋಜನೆಯಡಿ 774 ಬೆಳೆ ಕಟಾವು ಪ್ರಯೋಗಗಳನ್ನು ಹಮ್ಮಿಕೊಳ್ಳಲಾಗಿದೆ. ಹಿಂಗಾರು ಹಂಗಾಮಿನಲ್ಲಿ ಕಡಲೆ, ಜೋಳ, ಕೂಸುಬಿ ಶೇ.87% ಬಿತ್ತನೆಯಾಗಿದ್ದು ಈ ವಾರದಲ್ಲಿ ಶೇ.100% ಬಿತ್ತನೆಯಾಗಲಿದೆ. ಸದ್ಯ ಜಿಲ್ಲೆಯಲ್ಲಿ ಬೀಜ, ಗೊಬ್ಬರಗಳ ಯಾವುದೇ ಸಮಸ್ಯೆ ಇಲ್ಲವೆಂದು ಅಧಿಕಾರಿಗಳು ಸಚಿವರ ಗಮನಕ್ಕೆ ತಂದರು. ಬ್ಯಾಂಕುಗಳು ಒತ್ತಡ ಹೇರಬಾರದು ರೈತರಿಗೆ ಅನುಕೂಲವಾಗುವಂತೆ ಬೆಳಿಗ್ಗೆ ಅವಧಿಯಲ್ಲಿ 7 ತಾಸು ವಿದ್ಯುತ್ ಸರಬರಾಜು ಮಾಡುವಂತೆ ಜೆಸ್ಕಾಂ ಕಾರ್ಯಪಾಲಕ ಅಭಿಯಂತರರಿಗೆ ಸಚಿವರು ಸೂಚಿಸಿದರು. ರೈತರ ಆತ್ಮಹತ್ಯೆ ಪ್ರಕರಣಗಳನ್ನು ಅಧಿಕಾರಿಗಳು ಗಂಭೀರವಾಗಿ ಪರಿಗಣಿಸಿ ರೈತರ ಆತ್ಮಹತ್ಯೆ ಪ್ರಕರಣಗಳಲ್ಲಿ ಈಗಾಗಲೇ ಚೆಕ್ ವಿತರಿಸಿದ್ದು ಖಾತೆಗೆ ಹಣ ಜಮೆ ಆಗದೇ ಇರುವುದಕ್ಕೆ ಅಸಮಾಧಾನ ವ್ಯಕ್ತಪಡಿಸಿದ ಸಚಿವರು ಕಂದಾಯ ಹಾಗೂ ಕೃಷಿ ಅಧಿಕಾರಿಗಳು ತಕ್ಷಣವೇ ಸಮಸ್ಯೆ ಬಗೆಹರಿಸುವಂತೆ ಸೂಚಿಸಿ ದರು.


ಜಿಲ್ಲೆಯಲ್ಲಿ ಆತ್ಮಹತ್ಯೆ ಮಾಡಿಕೊಂಡ ರೈತರ ಕುಟುಂಬಸ್ಥರಿಗೆ 2 ಸಾವಿರ ಮಾಸಿಕ ವೇತನ ಸರಿಯಾಗಿ ಜಮೆ ಆಗುತ್ತಿರುವ ಬಗ್ಗೆ ಕಂದಾಯ ಅಧಿಕಾರಿಗಳು ಸೂಕ್ತ ಗಮನ ಇಡಬೇಕು. ಅವರ ಮಕ್ಕಳಿಗೆ ಉಚಿತ ಶಿಕ್ಷಣ ಹಾಗೂ ಶೈಕ್ಷಣಿಕ ಫೀ ಇಲಾಖೆಯು ಕಟ್ಟಬೇಕು. ಸಾಮಾಜಿಕ ಬದ್ಧತೆ ಹಿನ್ನೆಲೆಯಲ್ಲಿ ಉಪ ವಿಭಾಗಾಧಿಕಾರಿಗಳು ಸೂಕ್ತ ವರದಿ ನೀಡುವಂತೆ ಸೂಚಿಸಿದರು.

ಯಾವುದೇ ರೈತರಿಗೆ ಸಾಲ ಮರು ಪಾವತಿಸುವಂತೆ ಬ್ಯಾಂಕಗಳು ಒತ್ತಡ ಹೇರಬಾರದು. ರೈತರಿಗೆ ತೊಂದರೆಯಾಗದಂತೆ ಸುತ್ತೋಲೆ ಹೊರಡಿಸಬೇಕು ಎಂದರು.

# ನಮ್ಮ ಭೂಮಿ, ನಮ್ಮ ಹಕ್ಕು ಬೃಹತ್ ಆಂದೋಲನದಲ್ಲಿ ಎಂ.ಎಸ್.ಸಿದ್ದಪ್ಪ ಭಾಗಿ

**ಬಳ್ಳಾರಿ, ನ.21–** ಬಳ್ಳಾರಿ ನಗರದಲ್ಲಿ ನಮ್ಮ ಭೂಮಿ ನಮ್ಮ ಹಕ್ಕು ಬೃಹತ್ ಆಂದೋಲನದಲ್ಲಿ ಜಿಲ್ಲಾಧಿಕಾರಿಗಳ ಕಚೇರಿಯ ಮುಂದೆ ಒಂದು ದಿನದ ಧರಣಿ ಸತ್ಯಾಗ್ರಹದಲ್ಲಿ ಎಂ.ಎಸ್.ಸಿದ್ದಪ್ಪ ಭಾಗವಹಿಸಿದ್ದರು. ತಾತ ಮುತ್ತಾತರಿಂದ ಹುಳುಮೆ ಮಾಡುತ್ತಾ, ಅದರಿಂದಲೇ ಜೀವನ ಸಾಗಿಸುತಿದ್ದ ಭೂಮಿಗಳ ಮೇಲೆ ವಕ್ಫ್ ಆಸ್ತಿಗಳೆಂದು ಹೇಳುತ್ತಿರುವ ಸಚಿವ ಜಮೀರ್ ಅಹಮ್ಮದ್ ಅವರನ್ನು ಏನು ಅನ್ನಬೇಕೋ ಅರ್ಥವಾಗುತ್ತಿಲ್ಲ ಎಂದು ಆಗ್ರಹವನ್ನು ವ್ಯಕ್ತ ಪಡಿಸಿದರು.

ಇ ಸಂದರ್ಭದಲ್ಲಿ ಬಳ್ಳಾರಿ ಜಿಲ್ಲೆಯ ಜಿಲ್ಲಾಧ್ಯಕ್ಷರಾದ ಅನಿಲ್ ನಾಯ್ಡು, ಗಂಗಾವತಿಯ ಶಾಸಕರಾದ ಗಾಲಿ ಜನಾರ್ದನ್ ರೆಡ್ಡಿ, ಮಾಜಿ ಸಚಿವರಾದ ಶ್ರೀರಾಮಲು, ಮಾಜಿ ಶಾಸಕರಾದ ಸೋಮಲಿಂಗಪ್ಪ, ಶಾಸಕರಾದ ಸೋಮಶೇಖರ ರೆಡ್ಡಿ, ಬಂಗಾರ ಹನುಮಂತಣ್ಣ, ಗುರು ಲಿಂಗನಗೌಡ್ರು, ಐನಾಥ್ ರೆಡ್ಡಿ,ಡಾಕ್ಟರ್ ಅರುಣ, ಸುಗುಣ ಮತ್ತು ಪಕ್ಷದ ಹಿರಿಯರು ಯುವ ಮೋರ್ಚಾದ ಪದಾಧಿಕಾರಿಗಳು ರೈತರ ಮೋರ್ಚಾದ ಪದಾಧಿಕಾರಿಗಳು ಮತ್ತು ಮಹಿಳಾ ಮೋರ್ಚಾ ಪದಾಧಿಕಾರಿಗಳು ಈ ಆಂದೋಲನದಲ್ಲಿ ಭಾಗವಹಿಸಿದ್ದರು.



# ನಮ್ಮ ಭೂಮಿ ನಮ್ಮ ಹಕ್ಕು: ತಾತ, ಮುತ್ತಾತರಿಂದ ಬಂದಿರುವ ಭೂಮಿ ವಕ್ಫ್ ಎನ್ನುವುದು ಸರಿಯಲ್ಲ: ಸೋಮಲಿಂಗಪ್ಪ

ಬಳ್ಳಾರಿ ನ 21. ಬಳ್ಳಾರಿ ನಗರದಲ್ಲಿ ನಮ್ಮ ಭೂಮಿ ನಮ್ಮ ಹಕ್ಕು ಬೃಹತ್ ಆಂದೋಲನದಲ್ಲಿ ಜಿಲ್ಲಾಧಿಕಾರಿಗಳ ಕಚೇರಿಯ ಮುಂದೆ ಒಂದು ದಿನದ ಧರಣಿ ಸತ್ಯಾಗ್ರಹದಲ್ಲಿ ಸಿರುಗುಪ್ಪ ಮಾಜಿ ಶಾಸಕ ಎಂ.ಎಸ್.ಸೋಮಲಿಂಗಪ್ಪ ಅವರು ಭಾಗವಹಿಸಿ ಮಾತನಾಡಿ ವಕ್ಫ್ ಎನ್ನುವ ಪದವನ್ನೇ ತೆಗೆದು ಹಾಕಬೇಕು, ತಲೆ ತಲಾಂತರದಿಂದ ಹೂಳುತ್ತಾ ಬಂದಿರುವ ಭುಮಿಯನ್ನು ಈಗ ಅವರ ಇಚ್ಚೆ ಬಂದಂತೆ ರೈತರ ಭೂಮಿಗಳು, ಸರಕಾರದ ಜಾಗಗಳು, ದೇವಸ್ಥಾನಗಳು, ಮಠಗಳು, ಕೊನೆಗು ವಿಧಾನಸೌಧ ಕೂಡಾ ವಕ್ಫ್‌ಗೆ ಸೇರಿದ್ದು ಎಂದು ಹೇಳುತ್ತಿರುವುದು ಸರಿಯಲ್ಲ ಎಂದು, ತಕ್ಷಣವೇ ಸಚಿವ ಜಮೀರನ್ನು ಸಚಿವ ಸ್ಥಾನದಿಂದ ಕೈಬಿಡಬೇಕೆಂದು ಆಗ್ರಹಿಸಿದರು.

ಈ ಸಂಧರ್ಬದಲ್ಲಿ ಬಳ್ಳಾರಿ ಜಿಲ್ಲೆಯ ಜಿಲ್ಲಾಧ್ಯಕ್ಷರಾದ ಅನಿಲ್ ನಾಯ್ಡು, ಗಂಗಾವತಿಯ ಶಾಸಕ ಗಾಲಿ ಜನಾರ್ದನ್ ರೆಡ್ಡಿ, ಮಾಜಿ ಸಚಿವ ಶ್ರೀರಾಮಲು,ಮಾಜಿ ಶಾಸಕರಾದ ಸೋಮಶೇಖರ ರೆಡ್ಡಿ, ಬಂಗಾರ ಹನುಮಂತ, ಸಿರುಗುಪ್ಪ ಬಿಜೆಪಿ ತಾಲೂಕ ಅಧ್ಯಕ್ಷರಾದ ಮಲ್ಲಿಕಾರ್ಜುನ ಸ್ವಾಮಿ, ಗುರುಲಿಂಗನಗೌಡ್ರು, ಐನಾಥ್ ರೆಡ್ಡಿ,ಡಾಕ್ಟರ್ ಅರುಣ,ಸುಗುಣ, ಮತ್ತು ಪಕ್ಷದ ಹಿರಿಯರು ಯುವ ಮೋರ್ಚಾದ ಪದಾಧಿಕಾರಿಗಳು ರೈತರ ಮೋರ್ಚಾದ ಪದಾಧಿಕಾರಿಗಳು ಮತ್ತು ಮಹಿಳಾ ಮೋರ್ಚಾ ಪದಾಧಿಕಾರಿಗಳು ಈ ಆಂದೋಲನದಲ್ಲಿ ಭಾಗವಹಿಸಿದ್ದರು.




# 420 ಸಚಿವ ಜಮೀರ್ ಅಹಮ್ಮದ್ ಗಾಲಿ ಜನಾರ್ದನರೆಡ್ಡಿ ಕಿಡಿ




**ಬಳ್ಳಾರಿ, ನ,21–** ವಕ್ಫ್ ಆಸ್ತಿ ಎಂದು ಅಕ್ರಮವಾಗಿ ರೈತರ, ಮಠ, ಮಂದಿರದ ಅಕ್ರಮವಾಗಿ ಪಹಣೆ ಬದಲಾವಣೆ ಮಾಡಿದ್ದರ ವಿರುದ್ಧ ಗುರುವಾರ ನಗರದ ಡಿಸಿ ಕಚೇರಿ ಮುಂದೆ ಬಿಜೆಪಿ ಮುಖಂಡರು, ಕಾರ್ಯಕರ್ತರುನಮ್ಮ ಭೂಮಿ ನಮ್ಮ ಹಕ್ಕು ಎಂದು ಪ್ರತಿಭಟನಾ ಧರಣಿ ನಡೆಸಿದರು. ಕಬರಸ್ಥಾನ ಮಸೀದಿಗಳಿಗೆ ಸೇರಿದ್ದು ಎಂದೂ ಜಿಲ್ಲೆಯ 65 ಆಸ್ತಿಗಳನ್ನು ವಕ್ಫ್ ಎಂದು ಸರ್ಕಾರ ನಮೂದಿಸಿದೆ.

ಸಿರುಗುಪ್ಪ ತಾಲೂಕಿನ ಇಬ್ರಾಹಿಂಪುರ ಗ್ರಾಮ, ಬಳ್ಳಾರಿ ತಾಲೂಕಿನ ಬೊಮ್ಮನಹಾಳ್‌ನ ರೈತರ ಜಾಮೀನನ್ನು ವಕ್ಫ್ ಎಂದು ಈಗಾಗಲೇ ನಮೂದಾಗಿದೆ ಇದು ಅಕ್ರಮ ಎಂದು ಇದು 420 ಸಚಿವ ಜಮೀರ್ ಭೂಮಿ ಕಬಳಿಸುವ ಹುನ್ನಾರ ನಡೆಸುತ್ತಿದ್ದಾರೆ ಎಂದು ಗಂಗಾವತಿ ಶಾಸಕ ಗಾಲಿ ಜನಾರ್ದನರೆಡ್ಡಿ ಮತ್ತು ಮಾಜಿ ಸಚಿವ ಶ್ರೀರಾಮುಲು, ಸೋಮಶೇಖರ ರೆಡ್ಡಿ ಕಿಡಿಕಾರಿದರು. ಸಿಎಂ ಸಿದ್ದರಾಮಯ್ಯ ಮತ್ತು ವಕ್ಫ್ ಸಚಿವ ಜಮೀರ್ ಅಹಮ್ಮದ್ ಅವರು ರೈತರ ಆಸ್ತಿಗಳನ್ನು ನುಂಗುವ ಪ್ರಯತ್ನ ಬಿಟ್ಟು ಮೊದಲು ಮಾನಪ್ಪಾಡಿ ವರದಿಯಲ್ಲಿ ವಕ್ಫ್ ಆಸ್ತಿ ಕೊಳ್ಳೆ ಹೊಡೆದಿರುವವರ ವಿರುದ್ಧ ಮೊದಲು ಕ್ರಮ ಜರುಗಿಸಲಿ ಎಂದು ಘೋಷಣೆ ಕೂಗಲಾಯ್ತು. ವಕ್ಫ್‌ನ ಆಸ್ತಿ ರಕ್ಷಣೆಗೆ ನಮ್ಮ ವಿರೋದವಿಲ್ಲ. ಆದರೆ ತಲ ತಲಾಂತರದಿಂದ ಬಂದ ಆಸ್ತಿಗಳನ್ನು ವಕ್ಫ್ ಎಂದು ಮಾಡುತ್ತಿರುವುದು ಸರಿಯಲ್ಲ. ಅದಕ್ಕಾಗಿ ನಮ್ಮ ಹೋರಾಟ. ಸರ್ಕಾರದ ಆಸ್ತಿಗಳನ್ನು ನುಂಗುವ ಹುನ್ನಾರ ವಕ್ಫ್ ನಿಂದ ನಡೆದಿದೆ. ಅದಕ್ಕಾಗಿ ವಕ್ಫ್ ಕಾನೂನಿಗೆ ತಿದ್ದಪಡಿ ಆಗಬೇಕು. ಸಾರ್ವಜನಿಕರ ಆಸ್ತಿಮೇಲೆ ಜಿಹಾದ್ ಬೇಡ ಎಂದು ಪಕ್ಷದ ಜಿಲ್ಲಾ ಅಧ್ಯಕ್ಷ ಅನಿಲ್ ನಾಯ್ಡು ಹೇಳಿದರು.

# ಕಾಂಗ್ರೆಸ್ ಸರಕಾರ ಬಿಪಿಎಲ್ ಕಾರ್ಡ್‌ಗಳನ್ನು ರದ್ದು ಮಾಡಿ ಜನರ ಶಾಪಕ್ಕೆ ಗುರಿಯಾಗಲಿದೆ: ರಾಜುನಾಯಕ್

**ಬಳ್ಳಾರಿ, ನ.21–** ಬಿಪಿಎಲ್ ಕಾರ್ಡ್ ರದ್ದು ಬಡವರ ಶಾಪಕ್ಕೆ ಗುರಿಯಾಗಲಿದೆ ರಾಜ್ಯದ ಕಾಂಗ್ರೆಸ್ ಸರ್ಕಾರ ಎಂದು ಜೆಡಿಎಸ್ ಪಕ್ಷದ ರಾಜ್ಯ ಯುವ ಘಟಕದ ಕಾರ್ಯಾಧ್ಯಕ್ಷರಾದ ರಾಜು ನಾಯಕ ಆಕ್ರೋಶವನ್ನು ವ್ಯಕ್ತ ಪಡಿಸಿದರು. ರಾಜ್ಯ ಸರ್ಕಾರವು ಬಿಪಿಎಲ್ ಕಾರ್ಡ್ ತಿದ್ದುಪಡಿಯ ನೆಪದಲ್ಲಿ ಬೇಕಾಬಿಟ್ಟಿ ಬಿಪಿಎಲ್ ಕಾರ್ಡ್ಗಳನ್ನು ಎಪಿಎಲ್ ಕಾರ್ಡುಗಳಿಗೆ ವರ್ಗಾಯಿಸುತ್ತಿರುವುದನ್ನು ಜೆಡಿಎಸ್ ಪಕ್ಷ ವ್ಯಾಪಕವಾಗಿ ಖಂಡಿಸುತ್ತದೆ ಎಂದರು. ಯಾರನ್ನು ಕಚೇರಿಗೆ ಕರೆಯದೆ, ಜನರು ದಾಖಲೆಗಳನ್ನು ಪರಿಶೀಲನೆ ಮಾಡದೆ, ಪ್ಯಾನ್ ಕಾರ್ಡ್ ಇದ್ದ ಮಾತ್ರಕ್ಕೆ ಬಿಪಿಎಲ್ ಫಲಾನುಭವಿ ಆಗುವುದಿಲ್ಲ ಎಂದು ಸರ್ಕಾರ ಹುಚ್ಚುತನದ ನಿರ್ಧಾರವನ್ನು ತೆಗೆದುಕೊಂಡಿದೆ, ಈ ಹಿಂದೆ ಜನ್‌ಧನ್ ಯೋಜನೆಗಾಗಿ ಅನೇಕ ಬಡವರು ಪ್ಯಾನ್ ಕಾರ್ಡ್ಗಳನ್ನು ಮಾಡಿಸಿದ್ದಾರೆ. ಪ್ಯಾನ್ ಕಾರ್ಡ್ ಆಧಾರದ ಮೇಲೆ ಬಡವರು ಅಲ್ಲ ಅನ್ನುವುದು ಹೇಗೆ ಸೂಕ್ತ. ಕೂಡಲೇ ರಾಜ್ಯ ಸರ್ಕಾರ ಇಂಥ ಬಂಡತನದ ನಿರ್ಧಾರವನ್ನು ಕೈ ಬಿಡಬೇಕೆಂದು ಒತ್ತಾಯಿಸಿದರು. ಒಂದು ವೇಳೆ ರಾಜ್ಯ ಸರ್ಕಾರ ಹಿಂಪಡೆದಿದ್ದರೆ ಆರ್.ಟಿ.ಐ ಮಾಹಿತಿ ಪಡೆದು ಹೋರಾಟ ಮಾಡಬೇಕಾಗುತ್ತದೆ ಎಂದು ಎಚ್ಚರಿಸಿದರು.



### ಬಳ್ಳಾರಿಯಲ್ಲಿ ರಾಷ್ಟ್ರೀಯ ಗ್ರಂಥಾಲಯ ಸಪ್ತಾಹ

# ಗ್ರಂಥಾಲಯದ ಸದ್ಬಳಕೆಯಾಗಲಿ: ಮೇಯರ್ ಮುಲ್ಲಂಗಿ ನಂದೀಶ್

**ಬಳ್ಳಾರಿ, ನ.21–**ಗ್ರಂಥಾಲಯದ ಪುಸ್ತಕಗಳು ಮತ್ತು ಅವುಗಳ ಮಾಹಿತಿಯು ಬಹಳ ಉಪಯುಕ್ತವಾಗಿದ್ದು, ಮಕ್ಕಳು, ವಿದ್ಯಾರ್ಥಿಗಳು ಹಾಗೂ ಎಲ್ಲಾ ಸಾರ್ವಜನಿಕರು ಸದ್ಬಳಕೆ ಮಾಡಿಕೊಳ್ಳಬೇಕು ಎಂದು ನಗರ ಗ್ರಂಥಾಲಯ ಪ್ರಾಧಿಕಾರದ ಅಧ್ಯಕ್ಷರು ಆದ ಮಹಾನಗರ ಪಾಲಿಕೆಯ ಮಹಾಪೌರರಾದ ಮುಲ್ಲಂಗಿ ನಂದೀಶ್ ಅವರು ಹೇಳಿದರು. ನಗರ ಕೇಂದ್ರ ಗ್ರಂಥಾಲಯಕ್ಕೆ ಬೇಕಾದ ಅಗತ್ಯ ಸೌಲಭ್ಯಗಳನ್ನು ಮಹಾನಗರ ಪಾಲಿಕೆಯಿಂದ ಒದಗಿಸಲಾಗುವುದು ನಗರ ಗ್ರಂಥಾಲಯ ಪ್ರಾಧಿಕಾರದ ಸದಸ್ಯರು ಹಾಗೂ ಮಹಾನಗರ ಪಾಲಿಕೆಯ ಸದಸ್ಯರಾದ ಬಿ.ಜಾನಕಿ ಮಾತನಾಡಿ, ಪ್ರತಿಯೊಬ್ಬರು ಓದುವ ಹವ್ಯಾಸ ಬೆಳೆಸಿಕೊಂಡು ಗ್ರಂಥಾಲಯದ ಸದುಪಯೋಗಪಡೆದ

### ದೇವಾಲಯ ತೆರವು ವಿರೋಧಿಸಿ ಬಿಜೆಪಿ ಪ್ರತಿಭಟನೆ

# ಶಾಸಕ ಡಾ.ಶಿವರಾಜ ಪಾಟೀಲ್ ಸೇರಿ ಹಲವರ ಬಂಧನ

**ರಾಯಚೂರು, ನ.21–** ನಗರದ ಚಂದ್ರಬಂಡಾ ರಸ್ತೆಯ ಸಂತೋಷ ಬಡಾವಣೆಯ ಶಿವ ಹಾಗೂ ಗಣೇಶ ದೇವಾಲಯ ತೆರವುಗೊಳಿಸಿದ ಜಿಲ್ಲಾಡಳಿತ ಹಾಗೂ ನಗರಸಭೆ ಕ್ರಮ ಖಂಡಿಸಿ ಬುಧವಾರ ನಗರದ ಶಾಸಕ ಡಾ.ಶಿವರಾಜ ಪಾಟೀಲ್ ನೇತೃತ್ವದಲ್ಲಿ ಬಿಜೆಪಿ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಜಿಲ್ಲಾಧಿಕಾರಿ ಗಳ ಕಚೇರಿ ಎದುರು ಧರಣಿ ನಡೆಸಿ, ಜಿಲ್ಲಾಡಳಿತ ಹಾಗೂ ಕಾಂಗ್ರೆಸ್ ಸರ್ಕಾರದ ವಿರುದ್ಧ ಘೋಷಣೆಗಳನ್ನು ಹಾಕಿ ಆಕ್ರೋಶ ವ್ಯಕ್ತಪಡಿಸಿದರು.

ನಂತರ ನಗರದ ಶಾಸಕ ಡಾ.ಶಿವರಾಜ ಪಾಟೀಲ್ ಹಾಗೂ ವಿಧಾನ ಪರಿಷತ್ ಮಾಜಿ ಸದಸ್ಯ ಎನ್.ಶಂಕರಪ್ಪ ವಕೀಲ್ ಸೇರಿದಂತೆ ಕೆಲ ಮುಖಂಡರು ಜಿಲ್ಲಾಧಿಕಾರಿಗಳ ಬಳಿಗೆ ತೆರಳಿ ಚರ್ಚೆ ನಡೆಸಿದರು. ಅಲ್ಲದೇ ಸಿಎ ಸೈಟ್‌ನಲ್ಲಿ ದೇವಾಲಯಗಳ ತೆರವುಗೊಳಿಸಿದಂತೆ ನಗರದಲ್ಲಿ ಅಕ್ರಮವಾಗಿ ನಿರ್ಮಾಣಗೊಂಡ ಕಟ್ಟಡ ಹಾಗೂ ಧಾರ್ಮಿಕ ಸ್ಥಳಗಳನ್ನು ತೆರವುಗೊಳಿಸಬೇಕು ಎಂದು ಒತ್ತಾಯಿಸಿದರು.

ಇದಕ್ಕೆ ಪ್ರತಿಕ್ರಿಯಿಸಿದ ಜಿಲ್ಲಾಧಿಕಾರಿ ನತೀಶ ನಗರದಲ್ಲಿರುವ ಅಕ್ರಮ ಕಟ್ಟಡಗಳ ಮಾಹಿತಿ ನೀಡಿ, ಜಿಲ್ಲಾಡಳಿತದಿಂದ ಅಗತ್ಯ ಕ್ರಮವನ್ನು ತೆಗೆದುಕೊಳ್ಳಲಾಗುವುದು ಎಂದು ಶಾಸಕರಿಗೆ ಹಾಗೂ ಬಿಜೆಪಿ ಮುಖಂಡರಿಗೆ ಭರವಸೆ ನೀಡಿದರು. ನಂತರ ಜಿಲ್ಲಾಧಿಕಾರಿಗಳ ಕಚೇರಿಯಿಂದ ಪ್ರತಿಭಟನಾ ಸ್ಥಳಕ್ಕೆ ಆಗಮಿಸುವಷ್ಟರಲ್ಲಿ ಪ್ರತಿಭಟನಾಕಾರರು ಜಿಲ್ಲಾಧಿಕಾರಿಗಳ ಕಚೇರಿ ಎದುರಿನ ರಸ್ತೆ ಮೇಲೆ ಪ್ರತಿಭಟನೆ ನಡೆಸುತ್ತಿದ್ದರು. ಅವರೊಂದಿಗೆ ನಗರದ ಶಾಸಕರು, ಇತರ ಮುಖಂಡರು ಪ್ರತಿಭಟನೆಗೆ ಮುಂದಾದರು. ಪೊಲೀಸರು ಪ್ರತಿಭಟನಾಕಾರರನ್ನು ಅಲ್ಲಿಂದ ಕಳುಹಿಸಲು ಸಮಾಧಾನ ಪಡಿಸಲು ಮುಂದಾದರೂ ಪ್ರತಿಭಟನಾಕಾರರು ಒಪ್ಪದೇ ಇದ್ದಾಗ ಸಾರ್ವಜನಿಕರಿಗೆ ಹಾಗೂ ವಾಹನ ಸಂಚಾರಕ್ಕೂ ಸಮಸ್ಯೆಯಾಗಿರುವ ಗಮನಿಸಿ ಪ್ರತಿಭಟನಾಕಾರರನ್ನು ಪೊಲೀಸರು ಬಂಧಿಸಿ ವಾಹನಗಳಲ್ಲಿ ಕರೆದುಕೊಂಡು ಹೋದರು. ನಂತರ ಬಿಡುಗಡೆಗೊಳಿಸಿದರು.



ರಾಯಚೂರಿನ ಜಿಲ್ಲಾಧಿಕಾರಿಗಳ ಕಚೇರಿ ಎದುರು ಬಿಜೆಪಿಯಿಂದ ಪ್ರತಿಭಟನೆ ನಡೆಸುತ್ತಿದ್ದ ವೇಳೆ ನಗರದ ಶಾಸಕ ಡಾ.ಶಿವರಾಜ ಪಾಟೀಲ್ ಹಾಗೂ ಕಾರ್ಯಕರ್ತರನ್ನು ಪೊಲೀಸರು ಬಂಧಿಸಿದರು.

ಬಿಜೆಪಿ ಜಿಲ್ಲಾಧ್ಯಕ್ಷ ಹಾಗೂ ಶಾಸಕ ಡಾ.ಶಿವರಾಜ ಪಾಟೀಲ್, ಮಾಜಿ ಶಾಸಕ ಎ.ಪಾಪಾರೆಡ್ಡಿ, ವಿಧಾನ ಪರಿಷತ್‌ನ ಮಾಜಿ ಸದಸ್ಯ ಎನ್.ಶಂಕರಪ್ಪ ವಕೀಲ್, ಮುಖಂಡರಾದ ಶಿವಬಸಪ್ಪ ಮಾಲಿಪಾಟೀಲ್, ನಗರಸಭೆ ಮಾಜಿ ಸದಸ್ಯರಾದ ಯಲ್ಲಪ್ಪ, ಸುಭಾಶ, ರವೀಂದ್ರ ಜಲ್ದಾರ್, ನರಸಪ್ಪ ಸೇರಿದಂತೆ ಅನೇಕರು ಪ್ರತಿಭಟನೆಯಲ್ಲಿದ್ದರು.

# ಕ್ಯಾರಿಕಾಮ್ ರಾಷ್ಟ್ರಗಳ ನಾಯಕರೊಂದಿಗೆ ಮೋದಿ ದ್ವಿಪಕ್ಷೀಯ ಮಾತುಕತೆ

**ಜಾರ್ಜ್‌ಟೌನ್,ನ.21:** ಗಯಾನಾದ ಜಾರ್ಜ್‌ಟೌನ್‌ನಲ್ಲಿ ನಡೆಯುತ್ತಿರುವ ಎರಡನೇ ಭಾರತ–ಕ್ಯಾರಿಕೋಮ್ ಶೃಂಗಸಭೆಯ ಸಂದರ್ಭದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ಅನೇಕ ಕ್ಯಾರಿಕಾಮ್ ಸದಸ್ಯ ರಾಷ್ಟ್ರಗಳ ನಾಯಕರೊಂದಿಗೆ ದ್ವಿಪಕ್ಷೀಯ ಸಭೆಗಳನ್ನು ನಡೆಸಿದರು. ಡೊಮಿನಿಕಾ, ಟ್ರಿನಿಡಾಡ್ ಮತ್ತು ಟೊಬಾಗೊ, ಸುರಿನಾಮ್, ಬಾರ್ಬಡೋಸ್, ಆಂಟಿಗುವಾ ಮತ್ತು ಬಾರ್ಬುಡಾ, ಗ್ರೆನಡಾ, ಸೇಂಟ್ ಲೂಸಿಯಾ, ದಿ ಬಹಾಮಾಸ್ ನಾಯಕರೊಂದಿಗೆ ಪ್ರಧಾನಿ ದ್ವಿಪಕ್ಷೀಯ ಸಭೆಗಳನ್ನು ನಡೆಸಿದರು.



**ಸೇಂಟ್ ಲೂಸಿಯಾ ಪ್ರಧಾನಿ ಫಿಲಿಪ್ ಜೆ. ಪಿಯರ್ ಅವರೊಂದಿಗಿನ ಭೇಟಿಯ ಕುರಿತು ಅವರು ಪೋಸ್ಟ್ ಮಾಡಿದ್ದಾರೆ:**

ಸೇಂಟ್ ಲೂಸಿಯಾದ ಪ್ರಧಾನ ಮಂತ್ರಿ ಶ್ರೀ.ಫಿಲಿಪ್ ಜೆ.ಪಿಯರೆ ಅವರನ್ನು ಭೇಟಿಯಾದರು. ವ್ಯಾಪಾರ ಸಂಪರ್ಕವನ್ನು ಹೆಚ್ಚಿಸುವ ಮಾರ್ಗಗಳನ್ನು ನಾವು ಚರ್ಚಿಸಿದ್ದೇವೆ. ಆರೋಗ್ಯ, ಫಾರ್ಮಾ, ಶಕ್ತಿ, ಕ್ರೀಡೆ ಮತ್ತು ಹೆಚ್ಚಿನ ಕ್ಷೇತ್ರಗಳಲ್ಲಿ ಸಂಬಂಧಗಳನ್ನು ಹೆಚ್ಚಿಸುವ ಬಗ್ಗೆಯೂ ನಾವು ಮಾತನಾಡಿದ್ದೇವೆ.

ಗ್ರೆನಡಾದ ಪ್ರಧಾನ ಮಂತ್ರಿ ಡಿಕನ್ ಮಿಸ್ಸೆಲ್ ಅವರೊಂದಿಗಿನ ಭೇಟಿಯಲ್ಲಿ ಅವರು ಪೋಸ್ಟ್ ಮಾಡಿದ್ದಾರೆ:

ಗ್ರೆನಡಾದ ಪ್ರಧಾನ ಮಂತ್ರಿ, ಡಿಕಾನ್ ಮಿಸ್ಸೆಲ್ ಮತ್ತು ನಾನು ಫಲಪ್ರದವಾದ ಸಭೆಯನ್ನು ನಡೆಸಿದೆವು. ಐಟಿ, ಆರೋಗ್ಯ, ಶಿಕ್ಷಣ ಮತ್ತು ಕೃಷಿಯಲ್ಲಿ ದ್ವಿಪಕ್ಷೀಯ ಸಹಕಾರವನ್ನು ಬಲಪಡಿಸಲು ನಾವು ಒಪ್ಪಿಕೊಂಡಿದ್ದೇವೆ. 2ನೇ ಭಾರತ–ಕಾರಿಕಾಮ್ ಶೃಂಗಸಭೆಯನ್ನು ಆಯೋಜಿಸುವಲ್ಲಿ ಅವರ ಪ್ರಯತ್ನಗಳನ್ನು ಶ್ಲಾಘಿಸಿದರು.

**ಆಂಟಿಗುವಾ ಮತ್ತು ಬಾರ್ಬುಡಾ ಗ್ಯಾಸ್ಟನ್ ಬ್ರೌನ್ನ ಪ್ರಧಾನ ಮಂತ್ರಿಯೊಂದಿಗಿನ ಸಭೆಯ ಕುರಿತು ಅವರು ಪೋಸ್ಟ್ ಮಾಡಿದ್ದಾರೆ:**

"ಆಂಟಿಗುವಾ ಮತ್ತು ಬಾರ್ಬುಡಾದ ಪ್ರಧಾನ ಮಂತ್ರಿ ಗ್ಯಾಸ್ಟನ್ ಬ್ರೌನ್ ಅವರೊಂದಿಗೆ ಉತ್ತಮ ಸಭೆ ನಡೆಸಿದ್ದೇವೆ. ದ್ವಿಪಕ್ಷೀಯ ಸಂಬಂಧಗಳನ್ನು ಮತ್ತಷ್ಟು ಹೆಚ್ಚಿಸಲು ಅಪಾರ ಸಾಮರ್ಥ್ಯವಿದೆ, ವಿಶೇಷವಾಗಿ ವ್ಯಾಪಾರ, ಫಿನ್ಟೆಕ್, ನವೀಕರಿಸಬಹುದಾದ ಇಂಧನ ಮತ್ತು ಹವಾಮಾನ ಬದಲಾವಣೆಯಂತಹ ಕ್ಷೇತ್ರಗಳಲ್ಲಿ. ಇಂಟರ್ನ್ಯಾಷನಲ್ ಸೋಲಾರ್ ಅಲೈಯನ್ಸ್ ಮತ್ತು ಸಿಡಿಆರ್‌ಐಗೆ ಆಂಟಿಗುವಾ ಮತ್ತು ಬಾರ್ಬುಡಾದ ಬೆಂಬಲಕ್ಕಾಗಿ ಅವರಿಗೆ ಧನ್ಯವಾದಗಳು.

**ಬಾರ್ಬಡೋಸ್ ಪ್ರಧಾನಿ ಮಿಯಾ ಅಮೋರ್ ಮೊಟ್ಲಿ ಅವರೊಂದಿಗಿನ ಭೇಟಿಯಲ್ಲಿ ಅವರು ಪೋಸ್ಟ್ ಮಾಡಿದ್ದಾರೆ:**

ಬಾರ್ಬಡೋಸ್‌ನ ಪ್ರಧಾನ ಮಂತ್ರಿ ಮಿಯಾ ಅಮೋರ್ ಮೊಟ್ಲಿ ಅವರೊಂದಿಗೆ ಉತ್ತಮ ಸಭೆ ನಡೆಸಿದ್ದೇವೆ. ನಮ್ಮ ಮಾತುಕತೆಗಳು ವಿಜ್ಞಾನ ಮತ್ತು ತಂತ್ರಜ್ಞಾನ, ಆರೋಗ್ಯ, ಶಿಕ್ಷಣ, ಹವಾಮಾನ ಬದಲಾವಣೆ ಮತ್ತು ಕೃಷಿಯಂತಹ ಕ್ಷೇತ್ರಗಳನ್ನು ಒಳಗೊಂಡಿವೆ. ಗೌರವಾನ್ವಿತ ಆರ್ಡರ್ ಆಫ್ ಫ್ರೀಡಂ ಆಫ್ ಬಾರ್ಬಡೋಸ್ ಪ್ರಶಸ್ತಿಯನ್ನು ನೀಡಿದ್ದಕ್ಕಾಗಿ ನಾನು ಬಾರ್ಬಡೋಸ್ ಸರ್ಕಾರ ಮತ್ತು ಜನರಿಗೆ ಕೃತಜ್ಞನಾಗಿದ್ದೇನೆ. ಈ ಗೌರವವನ್ನು ಭಾರತದ ಜನತೆಗೆ ಸಮರ್ಪಿಸಲಾಗಿದೆ.

**ಬಾರ್ಬಡೋಸ್ ಪ್ರಧಾನಿ ಪೋಸ್ಟ್ ಮಾಡಿದ್ದಾರೆ:**

ಬುಧವಾರ ನಡೆದ ಅಂಖಖಅಔಒ–ಭಾರತ ಶೃಂಗಸಭೆಯ ನಂತರ ಪ್ರಧಾನಿ ಮೋದಿ ಮತ್ತು ನಾನು ಮಾತುಕತೆ ನಡೆಸಿದ್ದೇವೆ. ಸಭೆಯು ಸಾಂಸ್ಥಿಕ ಸುಧಾರಣೆಗಳು, ಆರ್ಥಿಕ ಸಹಯೋಗ ಮತ್ತು ಜಾಗತಿಕ ದಕ್ಷಿಣದ ಸಬಲೀಕರಣದ ಮೇಲೆ ಕೇಂದ್ರೀಕರಿಸಿತು. "ಪ್ರಮುಖ ಚರ್ಚೆಗಳು ಸುಧಾರಣೆಗಳಿಗೆ ರಾಜಕೀಯ ಬೆಂಬಲ, ಔಷಧೀಯ ಉದ್ಯಮದಲ್ಲಿ ಸಂಭಾವ್ಯ ಸಹಯೋಗಗಳು ಮತ್ತು ಕೆರಿಬಿಯನ್ ಬ್ಯಾಂಕ್‌ಅನ್ನು ಸ್ಥಾಪಿಸುವ ಕಲ್ಪನೆಯನ್ನು ಒಳಗೊಂಡಿತ್ತು. ಈ ಅವಕಾಶಗಳನ್ನು ಮತ್ತಷ್ಟು ಅನ್ವೇಷಿಸಲು ಕ್ರಿಯಾ ಐಟಂಗಳನ್ನು ಗುರುತಿಸಲಾಗಿದೆ.

**ಬಹಾಮಾಸ್ ಪ್ರಧಾನಿ ಫಿಲಿಪ್ ಬ್ರೇವ್ ಡೇವಿಸ್ ಅವರೊಂದಿಗಿನ ಭೇಟಿಯಲ್ಲಿ ಪ್ರಧಾನಿ ಮೋದಿ ಪೋಸ್ಟ್ ಮಾಡಿದ್ದಾರೆ:**

ಬಹಾಮಾಸ್‌ನ ಪ್ರಧಾನ ಮಂತ್ರಿ ಫಿಲಿಪ್ ಬ್ರೇವ್ ಡೇವಿಸ್ ಅವರೊಂದಿಗೆ ಬಹಳ ಒಳ್ಳೆಯ ಸಭೆಯನ್ನು ಹೊಂದಿದ್ದೇವೆ. ನಮ್ಮ ಮಾತುಕತೆಯ ಸಮಯದಲ್ಲಿ, ನಾವು ನಮ್ಮ ರಾಷ್ಟ್ರಗಳ ನಡುವಿನ ಸಂಪೂರ್ಣ ಶ್ರೇಣಿಯ ದ್ವಿಪಕ್ಷೀಯ ಸಂಬಂಧಗಳನ್ನು ಪರಿಶೀಲಿಸಿದ್ದೇವೆ, ವಿಶೇಷವಾಗಿ ವ್ಯಾಪಾರ, ಸಂಸ್ಕೃತಿ, ಹವಾಮಾನ ಬದಲಾವಣೆ ಮತ್ತು ಹೆಚ್ಚಿನವು.

**ಟ್ರಿನಿಡಾಡ್ ಮತ್ತು ಟೊಬಾಗೋದ ಪ್ರಧಾನ ಮಂತ್ರಿ ಕೀತ್ ರೌಲೆ ಅವರೊಂದಿಗಿನ ಭೇಟಿಯ ಕುರಿತು ಅವರು ಪೋಸ್ಟ್ ಮಾಡಿದ್ದಾರೆ:**

ಟ್ರಿನಿಡಾಡ್ ಮತ್ತು ಟೊಬಾಗೋದ ಪ್ರಧಾನ ಮಂತ್ರಿ ಡಾ. ಕೀತ್ ರೌಲಿ ಅವರೊಂದಿಗೆ ಅತ್ಯಂತ ಫಲಪ್ರದವಾದ ಸಭೆಯನ್ನು ನಡೆಸಿದೆ. ನಮ್ಮ ರಾಷ್ಟ್ರಗಳ ನಡುವಿನ ವ್ಯಾಪಾರ ಸಂಬಂಧಗಳನ್ನು ಹೇಗೆ ವೈವಿಧ್ಯಗೊಳಿಸಬೇಕು ಎಂಬುದರ ಕುರಿತು ನಾವು ಮಾತನಾಡಿದ್ದೇವೆ. ವಿಜ್ಞಾನ, ಆರೋಗ್ಯ, ರಕ್ಷಣೆ, ಶಿಕ್ಷಣ, ನವೀಕರಿಸಬಹುದಾದ ಇಂಧನ ಮತ್ತು ಕೃಷಿಯಂತಹ ಕ್ಷೇತ್ರಗಳು ಸಹಕಾರಕ್ಕಾಗಿ ಉತ್ತಮ ಸಾಮರ್ಥ್ಯವನ್ನು ನೀಡುತ್ತವೆ. ಟ್ರಿನಿಡಾಡ್ ಮತ್ತು ಟೊಬಾಗೊ UPI ಅನ್ನು ಅಳವಡಿಸಿಕೊಂಡಿರುವುದು ಅಪಾರ ಸಂತೋಷದ ವಿಷಯವಾಗಿದೆ. ಕೃಷಿ ಮತ್ತು ಆಹಾರ ಸಂಸ್ಕರಣೆಗೆ ಸಂಬಂಧಿಸಿದ ತಿಳಿವಳಿಕೆ ಒಪ್ಪಂದಕ್ಕೆ ಸಹಿ ಹಾಕಿರುವುದು ಸ್ವಾಗತಾರ್ಹ ಕ್ರಮವಾಗಿದೆ.

**ಸುರಿನಾಮ್ ಅಧ್ಯಕ್ಷ ಚಾನ್ ಸಂತೋಖಿ ಅವರೊಂದಿಗಿನ ಭೇಟಿಯಲ್ಲಿ ಅವರು ಹರ್ಷವ್ಯಕ್ತಪಟಿಸಿದ್ದಾರೆ:**

ಜಾರ್ಜ್‌ಟೌನ್‌ನಲ್ಲಿ ಅಧ್ಯಕ್ಷ ಚಾನ್ ಸಂತೋಖಿಯನ್ನು ಭೇಟಿಯಾದರು. ವ್ಯಾಪಾರ, ತಂತ್ರಜ್ಞಾನ, ಶಕ್ತಿ, ಟೆಲಿಮೆಡಿಸಿನ್ ಮತ್ತು ಹೆಚ್ಚಿನ ಕ್ಷೇತ್ರಗಳಲ್ಲಿನ ದ್ವಿಪಕ್ಷೀಯ ಸಂಬಂಧಗಳನ್ನು ನಾವು ಪರಿಶೀಲಿಸಿದ್ದೇವೆ. ನಾವು ಸಾಂಸ್ಕೃತಿಕ ಮತ್ತು ಜನರೊಂದಿಗೆ ಜನರ ಸಂಬಂಧವನ್ನು ಇನ್ನಷ್ಟು ಸುಧಾರಿಸುವ ಮಾರ್ಗಗಳನ್ನು ಚರ್ಚಿಸಿದ್ದೇವೆ.

**ಭಾರತ–CARICOM ಪಾಲುದಾರಿಕೆಯನ್ನು ಮತ್ತಷ್ಟು ಬಲಪಡಿಸಲು, ಪ್ರಧಾನ ಮಂತ್ರಿ 7 ಸ್ತಂಭಗಳ ಪ್ರಸ್ತಾವವನ್ನು ಮುಂದಿಟ್ಟರು ಅಂದರೆ C.A.R.I.C.O.M**

C. ಸಾಮರ್ಥ್ಯದ ಕಟ್ಟಡ
A. ಕೃಷಿ ಮತ್ತು ಆಹಾರ ಭದ್ರತೆ
R. ನವೀಕರಿಸಬಹುದಾದ ಶಕ್ತಿ ಮತ್ತು ಹವಾಮಾನ ಬದಲಾವಣೆ
I. ನಾವೀನ್ಯತೆ, ತಂತ್ರಜ್ಞಾನ ಮತ್ತು ವ್ಯಾಪಾರ
C. ಕ್ರಿಕೆಟ್ ಮತ್ತು ಸಂಸ್ಕೃತಿ
O. ಸಾಗರ ಆರ್ಥಿಕತೆ ಮತ್ತು ಕಡಲ ಭದ್ರತೆ
M. ಮೆಡಿಸಿನ್ ಮತ್ತು ಹೆಲ್ತ್‌ಕೇರ್

ಭಾರತವು ಸುರಿನಾಮ್‌ನಲ್ಲಿ ವಿವಿಧ ಅಭಿವೃದ್ಧಿ ಸಂಬಂದಿ

ಗಯಾನಾದಲ್ಲಿ ನಡೆದ 2 ನೇ ಭಾರತ–CARICOM ಶೃಂಗಸಭೆಯಲ್ಲಿ CARICOM ನಾಯಕರೊಂದಿಗೆ. ಈ ಶೃಂಗಸಭೆಯು ಕೆರಿಬಿಯನ್ ರಾಷ್ಟ್ರಗಳೊಂದಿಗೆ ಬಾಂಧವ್ಯವನ್ನು ಬಲಪಡಿಸುವ ನಮ್ಮ ಹಂಚಿಕೆಯ ಬದ್ಧತೆಯನ್ನು ಪ್ರತಿಬಿಂಬಿಸುತ್ತದೆ, ವಿವಿಧ ವಲಯಗಳಲ್ಲಿ ಸಹಕಾರವನ್ನು ಉತ್ತೇಜಿಸುತ್ತದೆ. ಮುಂಬರುವ ಪೀಳಿಗೆಗೆ ಉಜ್ವಲ ಭವಿಷ್ಯವನ್ನು ನಿರ್ಮಿಸಲು ನಾವು ಒಟ್ಟಾಗಿ ಕೆಲಸ ಮಾಡುತ್ತಿದ್ದೇವೆ.

**MEA ವಕ್ತಾರರು ಹೇಳಿಕೆ:**

ಪ್ರಧಾನಿ @narendramodi ಅವರು CARICOM ನ ಪ್ರಸ್ತುತ ಅಧ್ಯಕ್ಷರಾದ ಗ್ರೆನಡಾದ PM ಡಿಕಾನ್ ಮಿಚೆಲ್ ಅವರೊಂದಿಗೆ 2ನೇ ಭಾರತ–CARICOM ಶೃಂಗಸಭೆಯ ಸಹ–ಅಧ್ಯಕ್ಷರಾಗಿದ್ದರು.

ಶೃಂಗಸಭೆಯನ್ನು ಆಯೋಜಿಸಿದ್ದಕ್ಕಾಗಿ ಗಯಾನಾದ ಅಧ್ಯಕ್ಷ ಡಾ.ಘಾನ್ ಅಲಿ ಅವರಿಗೆ ಪ್ರಧಾನಮಂತ್ರಿ ಧನ್ಯವಾದ ಅರ್ಪಿಸಿದರು. ಈ ಶೃಂಗಸಭೆಯು ಸದಸ್ಯ ರಾಷ್ಟ್ರಗಳ ಸರ್ಕಾರದ ಮುಖ್ಯಸ್ಥರು ಮತ್ತು FM ಗಳಿಂದ ಭಾಗವಹಿಸುವಿಕೆಯನ್ನು ಕಂಡಿತು.

# ಕತಾರಿನ ಭಾರತೀಯ ಸಾಂಸ್ಕೃತಿಕ ಕೇಂದ್ರಕ್ಕೆ ಭಾರತ ಸರ್ಕಾರದ ಗಣ್ಯರ ಭೇಟಿ

**ಕತಾರ್,ನ.21:** ಇತ್ತೀಚೆಗೆ ಕತಾರಿನಲ್ಲಿರುವ ಭಾರತೀಯ ಸಾಂಸ್ಕೃತಿಕ ಕೇಂದ್ರಕ್ಕೆ ಭಾರತ ಸರ್ಕಾರವನ್ನು ಪ್ರತಿನಿಧಿಸುವ ಕೆಲವು ಗಣ್ಯರು ಆಗಮಿಸಿದ್ದರು. ಘನವೆತ್ತ ಅರುಣ್ ಕುಮಾರ್ ಚಟರ್ಜಿ ಅವರು ಕಾರ್ಯದರ್ಶಿ, ಸಿ.ಪಿ.ವಿ. ಹಾಗು ಓ.ಐ.ಎ ಮತ್ತು ಘನವೆತ್ತ ಆಸಿಮ್ ಮಹಾಜನ್ ಕೊಲ್ಲಿ ದೇಶಗಳ ಜಂಟಿ ಕಾರ್ಯದರ್ಶಿ, ಇವರು ಕತಾರಿನಲ್ಲಿರುವ ಭಾರತೀಯ ಸಂಸ್ಕೃತಿ ಕೇಂದ್ರಕ್ಕೆ ಭೇಟಿ ನೀಡಿದರು.



ಕತಾರಿನಲ್ಲಿರುವ. ಭಾರತೀಯ ದೂತವಾಸದ. ಘನವೆತ್ತ ರಾಯಭಾರಿಗಳಾದ ಅವರು. ಪ್ರಥಮ, ಕಾರ್ಯದರ್ಶಿಗಳಾದ ಡಾಕ್ಟರ್ ವೈಭವ್ ತಾಂಡಾಲೆ ಹಾಗು ರಾಯಭಾರಿ. ಕಾರ್ಯಾಲಯದ ಇತರ ಅಧಿಕಾರಿಗಳು, ಐಸಿಸಿ ಕಾರ್ಯಕಾರಿಣಿ ಸಮಿತಿಯ ಅಧ್ಯಕ್ಷರಾದ. ಪಿ.ಎನ್.ಬಾಬು ರಾಜನ್. ಮತ್ತು ಇತರ ಆಡಳಿತ ಸಮಿತಿಯ ಸದಸ್ಯರು. ಈ. ಸನ್ನಿವೇಶದಲ್ಲಿ ಉಪಸ್ಥಿತರಿದ್ದರು.

ಐಸಿಸಿ. ಉಪಾಧ್ಯಕ್ಷ. ಕರ್ನಾಟಕದ ಬೈಂದೂರಿನ ಸುಬ್ರಹ್ಮಣ್ಯ ಹೆಬ್ಬಾಗಿಲು ಅವರು ಐಸಿಸಿ ಆಡಳಿತ ಸಮಿತಿಯ ಪರವಾಗಿ ಗಣ್ಯರಿಗೆ ಸ್ವಾಗತವನ್ನು ಕೋರಿದರು. ಭಾರತೀಯ ಸಾಂಸ್ಕೃತಿಕ ಕೇಂದ್ರದ ಕಾರ್ಯ ವೈಖರಿಯ ಬಗ್ಗೆ ಹಾಗು. ಭಾರತೀಯರಿಗೆ ಲಭ್ಯವಿರುವ ವಿವಿಧ ಸೇವಾ ಸೌಲಭ್ಯಗಳ ಕುರಿತು ವಿವರಿಸಿದರು. ಐಸಿಸಿ ಪ್ರಧಾನ ಕಾರ್ಯದರ್ಶಿಗಳಾದ ಶ್ರೀ ಮೋಹನ್ ಕುಮಾರ್ ಅವರು ಐಸಿಸಿ. ಪ್ರಸ್ತುತ ಪಡಿಸುವ. ವಿವಿಧ ಚಟುವಟಿಕೆಗಳ ಬಗ್ಗೆ. ಸಂಕ್ಷಿಪ್ತ ಮಾಹಿತಿ ನೀಡಿದರು. ನಂತರ. ಆಗಮಿಸಿದ್ದ ಗಣ್ಯರು. ಭಾರತೀಯ ಸಾಂಸ್ಕೃತಿಕ ಕೇಂದ್ರದ ಬಗ್ಗೆ ಪ್ರಶಂಸೆಯನ್ನು ವ್ಯಕ್ತಪಡಿಸಿ. ಭವಿಷ್ಯದಲ್ಲಿ ಇನ್ನು ಹೆಚ್ಚಿನ ಪ್ರಮಾಣದಲ್ಲಿ ಹಾಗು ವೈವಿಧ್ಯ ಮಯ ಕಾರ್ಯಕ್ರಮಗಳನ್ನು ಭಾರತೀಯ ಸಮುದಾಯಕ್ಕೆ ಕೊಡುಗೆಯಾಗಿ ನೀಡಲು ಉತ್ತೇಜಿಸಿದರು.

# ಗಾಜಾ ಪಟ್ಟಿಯ ಮೇಲೆ ಇಸ್ರೇಲ್ ವೈಮಾನಿಕ ದಾಳಿ: 15 ಮಂದಿ ಸಾವು, 10 ಜನ ನಾಪತ್ತೆ

ಗಾಜಾ ಪಟ್ಟಿಯ ಮೇಲೆ ಇಸ್ರೇಲ್ ನಡೆಸಿದ ವೈಮಾನಿಕ ದಾಳಿಯಲ್ಲಿ ರಕ್ಷಣಾ ಕಾರ್ಯಕರ್ತನ ಸಹಿತ ಕನಿಷ್ಠ 15 ಮಂದಿ ಸಾವನ್ನಪ್ಪಿದ್ದು ಇತರ 10 ಮಂದಿ ನಾಪತ್ತೆಯಾಗಿದ್ದಾರೆ ಎಂದು ಆರೋಗ್ಯ ಇಲಾಖೆ ಮಾಹಿತಿ ನೀಡಿದೆ. ಇಸ್ರೇಲ್ ಟ್ಯಾಂಕ್‌ಗಳು ಕಾರ್ಯಾಚರಣೆ ತೀವ್ರಗೊಳಿಸಿದ್ದು ಹಲವು ಮನೆಗಳನ್ನು ಧ್ವಂಸಗೊಳಿಸಿವೆ. ಘಟನೆಯಲ್ಲಿ ಕನಿಷ್ಠ 10 ಮಂದಿ ನಾಪತ್ತೆಯಾಗಿದ್ದಾರೆ, ಜಬಲಿಯಾ ಪ್ರದೇಶದಲ್ಲಿ ಮನೆಯೊಂದರ ಮೇಲೆ ನಡೆದ ಕ್ಷಿಪಣಿ ದಾಳಿಯಲ್ಲಿ 12 ಮಂದಿ ಸಾವನ್ನಪ್ಪಿದ್ದರೆ, ಮನೆಯ ಸಮೀಪದಲ್ಲಿ ಟ್ಯಾಂಕ್ ನಡೆಸಿದ ಗುಂಡಿನ ದಾಳಿಯಲ್ಲಿ ಓರ್ವ ಮೃತಪಟ್ಟಿದ್ದಾನೆ. ಗಾಝಾ ನಗರದ ಹೊರವಲಯದಲ್ಲಿರುವ ಸಬ್ರಾದಲ್ಲಿ ರಕ್ಷಣಾ ಕಾರ್ಯದಲ್ಲಿ ತೊಡಗಿದ್ದ ಫ್ಯಾಲೆಸ್ತೀನ್ ನಾಗರಿಕ ತುರ್ತು ಸೇವಾ ತಂಡವನ್ನು ಗುರಿಯಾಗಿಸಿ ನಡೆದ ಕ್ಷಿಪಣಿ ದಾಳಿಯಲ್ಲಿ ಓರ್ವ ಸಿಬ್ಬಂದಿ ಮೃತಪಟ್ಟಿದ್ದು ಇತರ ಮೂವರು ಗಾಯಗೊಂಡಿದ್ದಾರೆ. ದಕ್ಷಿಣ ಗಾಝಾ ಪಟ್ಟಿಯ ರಫಾ ನಗರದ ಪೂರ್ವ ಭಾಗದಲ್ಲಿ ಇಸ್ರೇಲ್ನ ವೈಮಾನಿಕ ದಾಳಿಯಲ್ಲಿ ಒಬ್ಬ ಸಾವನ್ನಪ್ಪಿದ್ದು ಇತರ ಮೂವರು ಗಾಯಗೊಂಡಿರುವುದಾಗಿ ವರದಿಯಾಗಿದೆ.




ಜಬಲಿಯಾ, ಬೈತ್ ಲಾಹಿಯಾ ಹಾಗೂ ಸುತ್ತಮುತ್ತಲಿನ ಪ್ರದೇಶದಲ್ಲಿ ಇಸ್ರೇಲ್ ಸೇನೆ ಸುಮಾರು ಹದಿನೈದು ಮನೆಗಳನ್ನು ನೆಲಸಮಗೊಳಿಸಿದೆ. ಉತ್ತರ ಗಾಝಾ ಪ್ರದೇಶಗಳಲ್ಲಿ ಆರೋಗ್ಯ ಸುರಕ್ಷಾ ವ್ಯವಸ್ಥೆ ಹದಗೆಟ್ಟಿದೆ. ಇಂಧನ ಮತ್ತು ಇತರ ಸಾಧನಗಳನ್ನು ಈ ಪ್ರದೇಶಕ್ಕೆ ಸಾಗಿಸಲು ಇಸ್ರೇಲ್ ಸೇನೆ ಅನುಮತಿ ನಿರಾಕರಿಸುತ್ತಿರುವುದರಿಂದ ಔಷಧ ಹಾಗೂ ಇತರ ಅಗತ್ಯ ವಸ್ತುಗಳ ಕೊರತೆಯಿದೆ. ಉತ್ತರ ಗಾಝಾದಲ್ಲಿ ಮೂರು ಆಸ್ಪತ್ರೆಗಳು ತೀವ್ರ ಸವಾಲಿನ ಪರಿಸ್ಥಿತಿಯಲ್ಲಿ ಕಾರ್ಯ ನಿರ್ವಹಿಸುತ್ತಿದೆ. ಈ ಪ್ರದೇಶಕ್ಕೆ ಆಂಬ್ಯುಲೆನ್ಸ್‌ಗಳು ಪ್ರವೇಶಿಸುವುದಕ್ಕೆ ಅನುಮತಿ ನೀಡಲಾಗುತ್ತಿಲ್ಲ. ಆಹಾರ ಮತ್ತು ನೀರಿನ ಕೊರತೆ ತೀವ್ರಗೊಂಡಿದೆ. 45 ವೈದ್ಯಕೀಯ ಮತ್ತು ಶಸ್ತ್ರಚಿಕಿತ್ಸಾ ಸಿಬ್ಬಂದಿಗಳನ್ನು ಬಂಧಿಸಲಾಗಿದ್ದು ಬದಲಿ ತಂಡಕ್ಕೆ ಪ್ರವೇಶ ನಿರಾಕರಿಸಿರುವುದರಿಂದ ಹಲವು ಗಾಯಾಳುಗಳು ಚಿಕಿತ್ಸೆ ದೊರಕದೆ ಪ್ರಾಣ ಕಳೆದುಕೊಂಡಿದ್ದಾರೆ ಎಂದು ಉತ್ತರ ಗಾಝಾ ಪಟ್ಟಿಯಲ್ಲಿರುವ ಕಮಲ್ ಅದ್ವಾನ್ ಆಸ್ಪತ್ರೆಯ ನಿರ್ದೇಶಕರು ತಿಳಿಸಿದ್ದಾರೆ.



ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರು ಗುರುವಾರ ಲಾವೊ ಪಿಡಿಆರ್‌ನ ವಿಯೆಂಟಿಯಾನ್‌ನಲ್ಲಿ ನಡೆದ 11ನೇ ಆಸಿಯಾನ್ ರಕ್ಷಣಾ ಮಂತ್ರಿಗಳ ಸಭೆ ಪ್ಲಸ್‌ನಲ್ಲಿ ಅಮೆರಿಕ ರಕ್ಷಣಾ ಕಾರ್ಯದರ್ಶಿ ಲಾಯ್ಡ್ ಜೆ ಆಸ್ಟಿನ್ ಅವರನ್ನು ಭೇಟಿ ಮಾಡಿದರು.

# ಐಸ್‌ಲ್ಯಾಂಡ್: ಸತತ 7ನೇ ಬಾರಿ ಜ್ವಾಲಾಮುಖಿ ಸ್ಫೋಟ

ಐಸ್‌ಲ್ಯಾಂಡ್‌ನ ರಿಕ್ಜೇನ್ಸ್ ಪ್ರಾಂತ್ಯದ ಗ್ರಿಂಡ್ವಿಕ್ ಗ್ರಾಮದಲ್ಲಿರುವ ಸುಂಧ್ನುಕಗಿಗರ್ ಜ್ವಾಲಾಮುಖಿ ಬುಧವಾರ ರಾತ್ರಿ ಸ್ಫೋಟಿಸಿದ್ದು, ಮೀನುಗಾರಿಕೆಯನ್ನೇ ನಂಬಿರುವ ಗ್ರಾಮದಲ್ಲಿ ಲಾವಾರಸ ಹರಿಯುತ್ತಿದೆ. 2024ರಲ್ಲಿ ಏಳನೇ ಬಾರಿ ಇಲ್ಲಿ ಜ್ವಾಲಾಮುಖಿ ಸ್ಫೋಟಗೊಂಡಿದ್ದು, ಮುಂಜಾಗ್ರತಾ ಕ್ರಮವಾಗಿ ಗ್ರಾಮಸ್ಥರನ್ನು ಸ್ಥಳಾಂತರ ಗೊಳಿಸಲಾಗಿದೆ. ಈ ವರೆಗೂ ಯಾವುದೇ ಜೀವಹಾನಿಯಾಗಿಲ್ಲ ಎಂದು ಅಧಿಕಾರಿಗಳು ಹೇಳಿದ್ದು, ಆಸ್ತಿ–ಪಾಸ್ತಿ ನಷ್ಟದ ಕುರಿತು ಈಗಷ್ಟೇ ಮಾಹಿತಿ ಕಲೆಹಾಕಬೇಕಿದೆ ಎಂದು



ಐಸ್ಲ್ಯಾಂಡ್‌ನ ಹವಾಮಾನ ಇಲಾಖೆ ವರದಿ ಮಾಡಿದೆ. 2021ರವರೆಗೂ ಕಳೆದ ಒಂದು ಶತಮಾನದಲ್ಲಿ ಈ ಪ್ರಾಂತ್ಯದಲ್ಲಿ ಜ್ವಾಲಾಮುಖಿ ಸ್ಫೋಟಿಸಿರಲಿಲ್ಲ. 2021ರ ನಂತರದಲ್ಲಿ ಇಲ್ಲಿ ಭೂಕಂಪನ ಆರಂಭಗೊಂಡಿತು. ಬಳಿಕ ನಿರಂತರವಾಗಿ ಇಲ್ಲಿ ಜ್ವಾಲಾಮುಖಿ ಸ್ಫೋಟಗೊಳ್ಳುತ್ತಿದ್ದು, ಡಿಸೆಂಬರ್ ನಿಂದ ಈ ವರೆಗೂ ಇಲ್ಲಿ ಬರೋಬ್ಬರಿ 7 ಬಾರಿ ಜ್ವಾಲಾಮುಖಿ ಸ್ಫೋಟವಾಗಿದೆ. ಬುಧವಾರ ಸಂಭವಿಸಿದ ಜ್ವಾಲಾಮುಖಿಯಿಂದಾಗಿ ಕೆಂಪು ಹಾಗೂ ಕಿತ್ತಳೆ ಬಣ್ಣದ ಲಾವಾರಸವು ದಟ್ಟ ಹೊಗೆಯೊಂದಿಗೆ ಹರಿಯುತ್ತಿರುವುದು ಕಂಡುಬಂದಿದೆ.



ಸುರಿನಾಮ್ ಅಧ್ಯಕ್ಷ ಚಂದ್ರಿಕಾಪರ್ಸಾದ್ ಸಂತೋಖಿ ಅವರೊಂದಿಗೆ ದ್ವಿಪಕ್ಷೀಯ ಸಭೆಯಲ್ಲಿ ಪ್ರಧಾನಿ ನರೇಂದ್ರ ಮೋದಿ.

# ಥಾಯ್ಲೆಂಡ್‌ನ ಬುಸಾನನ್ ವಿರುದ್ಧ 20ನೇ ಗೆಲುವು ಸಾಧಿಸಿದ ಸಿಂಧು

**ಚೀನಾ,ನ.21:** ಥಾಯ್ಲೆಂಡ್‌ನ ಬುಸಾನನ್ ಒಂಗ್ಬಾ ಮುಂಗಫಾನ್ ವಿರುದ್ಧ 20ನೇ ಜಯ ದಾಖಲಿಸುವ ಮೂಲಕ ಪಿ.ವಿ. ಸಿಂಧು 'ಚೀನ್ ಮಾಸ್ಟರ್ ಸೂಪರ್ 750' ಬ್ಯಾಡ್ಮಿಂಟನ್ ಪಂದ್ಯಾವಳಿಯ 2ನೇ ಸುತ್ತು ಪ್ರವೇಶಿಸಿದ್ದಾರೆ. ಲಕ್ಷ್ಯ ಸೇನ್, ಮಾಳವಿಕಾ ಬನ್ಸೊಡ್ ಕೂಡ ಗೆಲುವಿನ ಆರಂಭ ಕಂಡಿದ್ದಾರೆ. ವಿಶ್ವದ 19ನೇ ಬ್ಯಾಂಕ್ ಆಟಗಾರ್ತಿಯಾಗಿರುವ ಸಿಂಧು 21–17, 21–19 ಅಂತರದಿಂದ ಬುಸಾನನ್ ವಿರುದ್ಧ ವ್ಿಂಲಂಗ್ೈ ಸಾಧಿಸಿದರು. 50 ನಿಮಿಷಗಳ ಕಾಲ ಇವರ ಹೋರಾಟ ಜಾರಿಯಲ್ಲಿತ್ತು. ಇದು 11ನೇ ಬ್ಯಾಂಕ್ ಆಟಗಾರ್ತಿ ಬುಸಾನನ್ ಮತ್ತು ಸಿಂಧು ನಡುವಿನ 21ನೇ ಪಂದ್ಯವಾಗಿದೆ. ಒಂದರಲ್ಲಷ್ಟೇ ಸಿಂಧು ಸೋಲನುಭವಿಸಿದ್ದಾರೆ. ಸಿಂಧು ಅವರ ಮುಂದಿನ ಸುತ್ತಿನ ಎದುರಾಳಿ ಸಿಂಗಾಪುರದ ಯೊ ಜಿಯಾ ಮಿನ್. ವನಿತೆಯರ ಮತ್ತೊಂದು ಸಿಂಗಲ್ಸ್ ಪಂದ್ಯದಲ್ಲಿ ಮಾಳವಿಕಾ ಬನೋಡ್ ಡೆನ್ಮಾರ್ಕ್ 21ನೇ ಬ್ಯಾಂಕ್ ಆಟಗಾರ್ತಿ ಲಿನ ಹೋಜ್ಮಾರ್ಕ್ ಹಾವೆಲ್ಡ್ ವಿರುದ್ಧ 20– 22, 23–21, 21–16 ಅಂತರದಿಂದ ಗೆದ್ದು ಬಂದರು. ಮಾಳವಿಕಾ ಇನ್ನು ಥಾಯ್ಲೆಂಡ್ ಸುಪನಿದಾ ಕಟಥಾಂಗ್ ವಿರುದ್ಧ ಸೆಣಸಲಿದ್ದಾರೆ.



## ಲಕ್ಷ್ಯ ಪ್ರತೀಕಾರ

**ಪುರುಷರ ಸಿಂಗಲ್ಸ್‌ನಲ್ಲಿ ಲಕ್ಷ್ಯ ಸೇನ್ ಮಲೇಷ್ಯಾದ ಲೀ ಝಿ ಜಿಯ ಅವರನ್ನು ಮಣಿಸಿ ಪ್ಯಾರಿಸ್ ಒಲಿಂಪಿಕ್ಸ್ ಕಂಚಿನ ಪದಕ ಸ್ಪರ್ಧೆಯಲ್ಲಿ ಅನುಭವಿಸಿದ ಸೋಲಿಗೆ ಪ್ರತೀಕಾರ ತೀರಿಸಿದರು. ಲಕ್ಷ್ಯ ಸೇನ್ ಅವರು 21–14, 13–21, 21–13.**

# ಗೆಲುವಿನ ಓಟ ಮುಂದುವರಿಸಿದ ತೆಲುಗು ಟೈಟಾನ್ಸ್; ಬೆಂಗಾಲ್ ವಾರಿಯರ್ಸ್‌ಗೆ ಸೋಲು

11ನೇ ಆವೃತ್ತಿಯ ಪ್ರೋ ಕಬಡ್ಡಿ ಟೂರ್ನಿಯಲ್ಲಿ ತೆಲುಗು ಟೈಟಾನ್ಸ್ ಗೆಲುವಿನ ಓಟ ಮುಂದುವರೆಸಿದೆ. ಪ್ರೋ ಕಬಡ್ಡಿ 202ರ 67ನೇ ಪಂದ್ಯದಲ್ಲಿ ಬೆಂಗಾಲ್ ವಾರಿಯರ್ಸ್ ವಿರುದ್ಧ ತೆಲುಗು ಟೈಟಾನ್ಸ್ ಭರ್ಜರಿ ಗೆಲುವು ಸಾಧಿಸಿದೆ. ತೆಲುಗು ಟೈಟಾನ್ಸ್ ಎದುರು 31–29 ಅಂಕಗಳ ಅಂತರದಿಂದ ಬೆಂಗಾಲ್ ವಾರಿಯರ್ಸ್ ಸೋಲು ಕಂಡಿದೆ.



ತೆಲುಗು ಟೈಟಾನ್ಸ್ ಆಡಿದ 12 ಪಂದ್ಯಗಳಲ್ಲಿ 8 ಜಯ, 4 ಸೋಲಿನೊಂದಿಗೆ 42 ಅಂಕಗಳನ್ನು ಗಳಿಸಿದ್ದು, ಅಗ್ರಸ್ಥಾನದಲ್ಲಿದೆ. ಬೆಂಗಾಲ್ ವಾರಿಯರ್ಸ್ ಆಡಿದ 11 ಪಂದ್ಯಗಳಲ್ಲಿ 3 ಗೆಲುವು, 6 ಸೋಲು ಮತ್ತು 2 ರಲ್ಲಿ ಡ್ರಾ ಸಾಧಿಸುವ ಮೂಲಕ 24 ಅಂಕಗಳನ್ನು ಕಲೆ ಹಾಕಿದ್ದು, 10ನೇ ಸ್ಥಾನದಲ್ಲಿದೆ.

ಗುರುವಾರ ನೋಯ್ಡಾ ಸ್ಟೇಡಿಯಂನಲ್ಲಿ ನಡೆದ ಮೊದಲ ಪಂದ್ಯದಲ್ಲಿ ತೆಲುಗು ಟೈಟಾನ್ಸ್ ಮತ್ತು ಬೆಂಗಾಲ್ ವಾರಿಯರ್ಸ್ ಮುಖಾಮುಖಿಯಾಗಿದ್ದವು. ಆರಂಭದಲ್ಲಿ ಉಭಯ ತಂಡಗಳ ನಡುವೆ ಮುಖಾಮುಖಿಯಾಗಿದ್ದವು. ಆರಂಭದಲ್ಲಿ ಉಭಯ ತಂಡಗಳ ನಡುವೆ ಪ್ರಬಲ ಪೈಪೋಟಿ ಕಂಡು ಬಂತು. ಆದರೆ ಪ್ರಣಯ್ ರಾಣೆ ಮತ್ತು ಮಂಜೀತ್ ಅವರು ಅಂಕಗಳನ್ನು ಬೇಟೆಯಾಡುವ ಮೂಲಕ ಬೆಂಗಾಲ್ ವಾರಿಯರ್ಸ್ ತಂಡಕ್ಕೆ ಆರಂಭಿಕ ಮುನ್ನಡೆ ತಂದುಕೊಟ್ಟರು.

ಇತ್ತ ವಿಜಯ್ ಮಲಿಕ್ ನೇತೃತ್ವದ ತೆಲುಗು ಟೈಟಾನ್ಸ್ ತಂಡ ಬೆಂಗಾಲ್ ವಾರಿಯರ್ಸ್‌ಗೆ ಪ್ರತ್ಯುತರ ನೀಡಿತು. ತೆಲುಗು ಟೈಟಾನ್ಸ್‌ನ ಅತ್ಯುತ್ತಮ ಆಲ್‌ರೌಂಡರ್ ಪ್ರದರ್ಶನದ ಪರಿಣಾಮ ಬೆಂಗಾಲ್ ವಾರಿಯರ್ಸ್ ಮೊದಲ ಬಾರಿಗೆ ಆಲೌಟಾಯಿತು. ಇದರೊಂದಿಗೆ ತೆಲುಗು ಟೈಟಾನ್ಸ್ 19–9 ಅಂಕಗಳಿಂದ ಮೊದಲಾರ್ಧವನ್ನು ಮುಕ್ತಾಯಗೊಳಿಸಿತು.

ಬೆಂಗಾಲ್ ವಾರಿಯರ್ಸ್ ವಿರುದ್ಧ ತೆಲುಗು ಟೈಟಾನ್ಸ್ ಮುನ್ನಡೆ ಕಾಯ್ದುಕೊಂಡಿದ್ದರಿಂದ ದ್ವಿತೀಯಾರ್ಧ ಹೆಚ್ಚು ಕುತೂಹಲಕಾರಿಯಾಗಿರಲಿಲ್ಲ. ಆದರೆ ಬೆಂಗಾಲ್ ರೈಡರ್‌ಗಳಾದ ಪ್ರಣಯ್ ರಾಣೆ ಮತ್ತು ನಿತಿನ್ ಕುಮಾರ್ ಅಂಕಗಳನ್ನು ದೋಚಿದರು. ಆದರೆ ತಂಡಕ್ಕೆ ಗೆಲುವು ತಂದುಕೊಡಲು ಈ ಇಬ್ಬರ ಹೋರಾಟ ಸಾಕಾಲಿಲ್ಲ. ತೆಲುಗು ಟೈಟಾನ್ಸ್ ಪರ ವಿಜಯ್ ಮಲಿಕ್ 14 ಅಂಕಗಳನ್ನು ಕಲೆ ಹಾಕುವ ಮೂಲಕ ತಂಡದ ಗೆಲುವಿಗೆ ಶ್ರಮಿಸಿದರು.

**ಬೆಂಗಳೂರಿಗೆ ಸೋಲು**

ಗುರುವಾರ ನೋಯ್ಡಾ ಸ್ಟೇಡಿಯಂನಲ್ಲಿ ನಡೆದ ಎರಡನೇ ಪಂದ್ಯದಲ್ಲಿ ಬೆಂಗಳೂರು ಬುಲ್ಸ್ ಮತ್ತೊಂದು ಸೋಲು ಕಂಡಿದೆ. 11ನೇ ಆವೃತ್ತಿಯ ಪ್ರೋ ಕಬಡ್ಡಿ ಟೂರ್ನಿಯ 68ನೇ ಪಂದ್ಯದಲ್ಲಿ ಬೆಂಗಳೂರು ಬುಲ್ಸ್ ವಿರುದ್ಧ ಹರಿಯಾಣ ಸ್ಟೀಲರ್ಸ್ ಗೆಲುವು ಸಾಧಿಸಿದೆ. ಹರಿಯಾಣ ಸ್ಟೀಲರ್ಸ್ ಎದುರು ಬೆಂಗಳೂರು ಬುಲ್ಸ್ 26–32 ಅಂಕಗಳ ಅಂತರದಿಂದ ಸೋತಿದೆ. ಈ ಬಾರಿ ಪ್ರೋ ಕಬಡ್ಡಿ ಆವೃತ್ತಿಯಲ್ಲಿ ಬೆಂಗಳೂರು ಬುಲ್ಸ್ ತಂಡದಿಂದ ಹೇಳಿಕೊಳ್ಳುವಂತ ಪ್ರದರ್ಶನ ಬರುತ್ತಿಲ್ಲ. ಈಗಾಗಲೇ ಬಹುತೇಕ ಟೂರ್ನಿಯಿಂದ ಹೊರಗುಳಿದಿದೆ